ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 75

5–9–2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 75

## ಸಂಪಾದಕೀಯ.....

## ತಿಕ್ಕಲು ಟ್ರಂಪ್‌ಗೆ ಪಕ್ಕಾ ಏಟು ಕೊಟ್ಟ ಮೋದಿ ಕೊಟ್ಟ ಏಟು

ಅಮೇರಿಕಾ ಇತ್ತೀಚೆಗೆ ಕೆಲವು ಮುಖ್ಯ ವಸ್ತುಗಳ ಮೇಲೆ ಒಟ್ಟಾರೆ ಸುಂಕವನ್ನು



ಶೇ. 50ರವರೆಗೆ ಹೆಚ್ಚಿಸಿರುವ ನಿರ್ಧಾರವು ಜಾಗತಿಕ ವ್ಯಾಪಾರ ವ್ಯವಸ್ಥೆಗೆ ಗಂಭೀರ ಹೊಡೆತ ನೀಡಿದೆ. ಇಂತಹ ದೊಡ್ಡ ಪ್ರಮಾಣದ ಏರಿಕೆ ಕೇವಲ ಉತ್ಪಾದನಾ ವೆಚ್ಚವನ್ನೇ ಹೆಚ್ಚಿಸುವುದಲ್ಲದೆ, ಅಂತರರಾಷ್ಟ್ರೀಯ ವ್ಯಾಪಾರದ ಸಮತೋಲನವನ್ನು ಅಸ್ತವ್ಯಸ್ತಗೊಳಿಸುತ್ತದೆ.

ಭಾರತದಿಂದ ಅಮೇರಿಕಾಕ್ಕೆ ರಫ್ತು ಮಾಡುವ ಉಕ್ಕು ಮತ್ತು ಅಲ್ಯೂಮಿನಿಯಂ ಉತ್ಪನ್ನಗಳು, ವಿಶೇಷ ಕೃಷಿ ಉತ್ಪನ್ನಗಳು ಹಾಗೂ ಇತರ ಕೈಗಾರಿಕಾ ವಸ್ತುಗಳ ಮೇಲೆ ಈ ಏರಿಕೆಯ ನೇರ ಪರಿಣಾಮ ಬೀಳಲಿದೆ. 2023?24ರಲ್ಲಿ ಭಾರತ ಅಮೇರಿಕಾಗೆ ಸುಮಾರು ಗಖಆ 80 ಬಿಲಿಯನ್ ಮೌಲ್ಯದ ವಸ್ತುಗಳನ್ನು ರಫ್ತು ಮಾಡಿದೆ. ಇದರಲ್ಲಿ ಉಕ್ಕು ಮತ್ತು ಅಲ್ಯೂಮಿನಿಯಂ ಒಟ್ಟಿಗೆ ಗಖಆ 2 ಬಿಲಿಯನ್ ಮೌಲ್ಯ ಹೊಂದಿದ್ದರೂ, ಶೇ. 50ರಷ್ಟು ಸುಂಕ ಏರಿಕೆ ಆಗುವುದರಿಂದ ಭಾರತೀಯ ಉತ್ಪನ್ನಗಳು ಅಮೇರಿಕಾ ಮಾರುಕಟ್ಟೆಯಲ್ಲಿ ಬೆಲೆ ಸ್ಪರ್ಧೆಯಲ್ಲಿ ಹಿಂದುಳಿಯುವ ಸಂಭವವಿದೆ.

ಇಂತಹ ಸಂದರ್ಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರವು ತಕ್ಷಣದ ಪ್ರತಿಕ್ರಿಯೆ ನೀಡಿದೆ.

WTOಹಾದಿ: ಭಾರತವು ವಿಶ್ವ ವ್ಯಾಪಾರ ಸಂಘಟನೆ (ಘಖಿಔ) ಮುಂದೆ ದೂರು ಸಲ್ಲಿಸುವ ನಿರ್ಧಾರ ಕೈಗೊಂಡಿದೆ. ಘಖಿಔ ನಿಯಮಾನುಸಾರ ಇಂತಹ ಏಕಪಕ್ಷೀಯ ಸುಂಕ ಏರಿಕೆ ಅಂತರರಾಷ್ಟ್ರೀಯ ವ್ಯಾಪಾರ ನಿಯಮಗಳಿಗೆ ವಿರುದ್ಧವಾಗಬಹುದು. ಇದು ಜಾಗತಿಕ ಮಟ್ಟದಲ್ಲಿ ಭಾರತದ ಆರ್ಥಿಕ ಹಿತಾಸಕ್ತಿಯನ್ನು ಕಾಪಾಡುವ ಹೆಜ್ಜೆ.

ದ್ವಿಪಕ್ಷೀಯ ಸಂವಾದ: ಪ್ರಧಾನಿ ಮೋದಿ ಅಮೇರಿಕಾ ಆಡಳಿತದೊಂದಿಗೆ ನೇರ ಸಂವಾದ ನಡೆಸಿ, ಪರಸ್ಪರ ಹಿತಾಸಕ್ತಿಗಳನ್ನು ಸಮತೋಲನಗೊಳಿಸುವ ದಾರಿಯನ್ನು ಹುಡುಕುತ್ತಿದ್ದಾರೆ. ವಿಶೇಷವಾಗಿ, ಅಮೇರಿಕಾಗೆ ಅಗತ್ಯವಿರುವ ಐಟಿ ಸೇವೆಗಳು, ಔಷಧಿ ಮತ್ತು ಕೃಷಿ ವಲಯಗಳಲ್ಲಿ ಭಾರತ ತನ್ನ ಬಲವನ್ನು ಬಳಸಿಕೊಳ್ಳುತ್ತಿದೆ.

ದೇಶೀಯ ಕೈಗಾರಿಕೆಗೆ ನೆರವು: ಸುಂಕ ಏರಿಕೆಯಿಂದ ಬರುವ ಹೊಡೆತವನ್ನು ತಗ್ಗಿಸಲು ಸರ್ಕಾರವು ಉತ್ಪಾದನಾ ಆಧಾರಿತ ಪ್ರೋತ್ಸಾಹ (ಕಐಖ), ರಫ್ತು ಧನಸಹಾಯ ಹಾಗೂ ತೆರಿಗೆ ಸಡಿಲಿಕೆಗಳನ್ನು ಜಾರಿಗೊಳಿಸುತ್ತಿದೆ. ಇದರಿಂದ ಸ್ಥಳೀಯ ಕೈಗಾರಿಕೆಗಳು ಸ್ಪರ್ಧಾತ್ಮಕ ಶಕ್ತಿ ಪಡೆಯುತ್ತವೆ.

ಹೊಸ ಮಾರುಕಟ್ಟೆಗಳ ಹುಡುಕಾಟ: ಪ್ರಧಾನಿ ಮೋದಿ ಆಕ್ಟ್ ಈಸ್ಟ್ ಪಾಲಿಸಿ ಹಾಗೂ ಆಫ್ರಿಕಾ–ಲ್ಯಾಟಿನ್ ಅಮೇರಿಕಾ ರಾಷ್ಟ್ರಗಳೊಂದಿಗೆ ವ್ಯಾಪಾರ ವಿಸ್ತರಿಸುವತ್ತ ಒತ್ತು ನೀಡಿದ್ದಾರೆ. ಅಮೇರಿಕಾ ಅವಲಂಬನೆಯನ್ನು ಕಡಿಮೆ ಮಾಡಿ, ಬದಲಿ ಮಾರುಕಟ್ಟೆಗಳನ್ನು ಅಭಿವೃದ್ಧಿಪಡಿಸುವುದು ದೀರ್ಘಾವಧಿಯ ತಂತ್ರವಾಗಿದೆ.

ಸ್ವಾವಲಂಬನೆ 'ಆತ್ಮನಿರ್ಭರ ಭಾರತ': ಸ್ಥಳೀಯ ಉತ್ಪಾದನೆ, ತಂತ್ರಜ್ಞಾನ ಆವಿಷ್ಕಾರ ಮತ್ತು ಗುಣಮಟ್ಟದ ಸುಧಾರಣೆಗೆ ಒತ್ತು ನೀಡುವ ಮೂಲಕ ಭಾರತವು ಜಾಗತಿಕ ಮಾರುಕಟ್ಟೆಯಲ್ಲಿ ತನ್ನ ಉತ್ಪನ್ನಗಳಿಗೆ ಹೊಸ ಗುರುತನ್ನು ತರುವ ಯತ್ನ ಮಾಡುತ್ತಿದೆ.

ಒಟ್ಟಾರೆ, ಅಮೇರಿಕಾ ಸುಂಕ ಶೇ. 50 ಏರಿಕೆ ಭಾರತಕ್ಕೆ ತಾತ್ಕಾಲಿಕ ಆರ್ಥಿಕ ಒತ್ತಡ ತಂದರೂ, ಇದು ದೇಶೀಯ ಕೈಗಾರಿಕೆ ಬಲವರ್ಧನೆ, ಮಾರುಕಟ್ಟೆ ವಿಭಿನ್ನಗೊಳಿಕೆ ಮತ್ತು ರಾಜತಾಂತ್ರಿಕ ಸಮತೋಲನ ಸಾಧಿಸಲು ಹೊಸ ಅವಕಾಶ ನೀಡುತ್ತಿದೆ. ಪ್ರಧಾನಮಂತ್ರಿ ಮೋದಿ ಕೈಗೊಂಡ ದಿಟ್ಟ ಕ್ರಮಗಳು ಈ ಬಿಕ್ಕಟ್ಟನ್ನು ದೀರ್ಘಾವಧಿಯಲ್ಲಿ ಭಾರತದ ಆರ್ಥಿಕ ಶಕ್ತಿಯನ್ನು ಹೆಚ್ಚಿಸುವ ದಾರಿಯನ್ನಾಗಿ ಪರಿವರ್ತಿಸುವ ಸಾಧ್ಯತೆಯಿದೆ.

**ಮಲ್ಲಿಕಾರ್ಜುನ ಕಬ್ಬೂರು**
ಸಂಪಾದಕರು

# ಕನಕಪುರದಲ್ಲಿ ಮೆಡಿಕಲ್ ಕಾಲೇಜ್; ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಬ್ಯಾಲೆಟ್ ಪೇಪರ್ ಬಳಕೆಗೆ ಸಂಪುಟ ಅಸ್ತು

**ಬೆಂಗಳೂರು:** ರಾಜ್ಯದಲ್ಲಿ ಮುಂಬರುವ ಎಲ್ಲಾ ಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಇವಿಎಂಗಳ ಬದಲಿಗೆ ಮತಪತ್ರ(ಬ್ಯಾಲೆಟ್ ಪೇಪರ್)ಗಳ ಮೂಲಕ ನಡೆಸುವಂತೆ ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸು ಮಾಡಲು ರಾಜ್ಯ ಸಚಿವ ಸಂಪುಟ ಗುರುವಾರ ನಿರ್ಧರಿಸಿದೆ.

ಇಂದು ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್ ಕೆ ಪಾಟೀಲ್ ಅವರು, ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಮತಪತ್ರಗಳ ಮೂಲಕ ನಡೆಸಲು ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸು ಮಾಡಲು ಸಚಿವ ಸಂಪುಟ ನಿರ್ಧರಿಸಿದೆ ಎಂದರು.



ಇವಿಎಂಗಳ ಬಗ್ಗೆ ಜನರಲ್ಲಿ ವಿಶ್ವಾಸ ಮತ್ತು ವಿಶ್ವಾಸಾರ್ಹತೆ ಕಮ್ಮಿಯಾಗಿದೆ ಇದೆ ಎಂದು ಸಚಿವರು ತಿಳಿಸಿದರು.

"ರಾಜ್ಯ ಚುನಾವಣಾ ಆಯೋಗವು ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು ಮತ್ತು ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಅಗತ್ಯವಾದ ಪರಿಷ್ಕರಣೆ ಮಾಡಲು, ರಾಜ್ಯ ಸಚಿವ ಸಂಪುಟ ಅಗತ್ಯ ಕಾನೂನುಗಳನ್ನು ಮಾಡಲು ಮತ್ತು ನಿಯಮಗಳನ್ನು ತಿದ್ದುಪಡಿ ಮಾಡಲು ನಿರ್ಧರಿಸಿದೆ" ಎಂದು ಎಚ್ ಕೆ ಪಾಟೀಲ್ ಹೇಳಿದರು.

"ಮುಂಬರುವ ಎಲ್ಲಾ ಚುನಾವಣೆಗಳನ್ನು ಇವಿಎಂಗಳ ಬದಲಿಗೆ ಮತಪತ್ರಗಳಲ್ಲಿ ನಡೆಸುವಂತೆ ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸು ಮಾಡಲು ನಿರ್ಧರಿಸಲಾಗಿದೆ" ಎಂದರು.

**ಕನಕಪುರದಲ್ಲಿ ಮೆಡಿಕಲ್ ಕಾಲೇಜ್ ಸ್ಥಾಪನೆ:** ಬೆಂಗಳೂರು ದಕ್ಷಿಣ ಜಿಲ್ಲೆ ಕನಕಪುರ ತಾಲೂಕಿನ ರಾಯಸಂದ್ರ ಗ್ರಾಮದಲ್ಲಿ ಹೊಸ 'ಮೆಡಿಕಲ್ ಕಾಲೇಜು ಸ್ಥಾಪನೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ.ಕನಕಪುರ ತಾಲೂಕಿನ ರಾಯಸಂದ್ರ ಗ್ರಾಮದಲ್ಲಿ ಹೊಸ 'ಮೆಡಿಕಲ್ ಕಾಲೇಜು ಸ್ಥಾಪನೆಗೆ ಸಚಿವ ಸಂಪುಟ ಅನುಮೋದನೆ ನೀಡಿದ್ದು, ಕರ್ನಾಟಕ ಗೃಹ ಮಂಡಳಿಯಿಂದ 65 ಕೋಟಿ ರೂ. ಮೊತ್ತದಲ್ಲಿ 25 ಎಕರೆ ಜಮೀನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ಸಿಕ್ಕಿದೆ ಎಂದು ಎಚ್ ಕೆ ಪಾಟೀಲ್ ಅವರು ಮಾಹಿತಿ ನೀಡಿದ್ದಾರೆ.

**ಎಲ್ಲಾ ಜಿಲ್ಲೆಗಳಲ್ಲಿಯೂ 'ಆಶಾ ಕಿರಣ' ಯೋಜನೆ ಅನುಷ್ಠಾನ:** ರಾಜ್ಯ ಸರ್ಕಾರ ಜನತೆಗೆ ಮತ್ತೊಂದು ಸಿಹಿಸುದ್ದಿ ನೀಡಿದ್ದು, ಎಲ್ಲಾ ಜಿಲ್ಲೆಗಳಲ್ಲಿಯೂ 'ಆಶಾ ಕಿರಣ' ಯೋಜನೆ ಅನುಷ್ಠಾನ ಮಾಡಲು ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ಆಶಾ ಕಿರಣ ಯೋಜನೆ ಎಲ್ಲಾ ಜಿಲ್ಲೆಗಳಲ್ಲಿಯೂ ಅನುಷ್ಠಾನಗೊಳಿಸಲು 52.85 ಕೋಟಿ ರೂ. ಅನುದಾನ ನೀಡಲಾಗುವುದು ಎಂದು ತಿಳಿಸಿದ್ದಾರೆ. ಕಣ್ಣಿನ ಉಚಿತ ತಪಾಸಣೆಯೇ ಆಶಾಕಿರಣ ಯೋಜನೆಯಾಗಿದೆ. ಅಂಧತ್ವ ನಿವಾರಣಾ ಕಾರ್ಯಕ್ರಮವನ್ನೂ ಒಳಗೊಂಡ ಯೋಜನೆಗೆ ರಾಜ್ಯಾದ್ಯಂತ ಅನುಷ್ಠಾನಗೊಳಿಸಲಾಗುವುದು ಎಂದು ತಿಳಿಸಿದ್ದಾರೆ.

# ನಮ್ಮ 'ಸಂಪ್ರದಾಯ'ಕ್ಕೆ ಧಕ್ಕೆ ಆಗದಂತೆ ದಸರಾ ಉದ್ಘಾಟಕರು ನಡೆದುಕೊಳ್ಳಲಿ: ವಿ. ಸೋಮಣ್ಣ

**ಮೈಸೂರು:** ಬಿಜೆಪಿಯ ತೀವ್ರ ವಿರೋಧದ ನಡುವೆಯೂ ಬೂಕರ್ ಪ್ರಶಸ್ತಿ ವಿಜೇತ ಸಾಹಿತಿ ಬಾನು ಮುಷ್ತಾಕ್ ಈ ಬಾರಿಯ ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವ ಉದ್ಘಾಟಿಸುವುದು ಅಧಿಕೃತಗೊಂಡಿದೆ.

ಬಾನು ಮುಷ್ತಾಕ್ ಅವರನ್ನು ಬದಲಾಯಿಸಲು ಬಿಜೆಪಿ ಹೇರಿದ ಒತ್ತಡಕ್ಕೆ ರಾಜ್ಯ ಸರ್ಕಾರ ಮಣಿದಿಲ್ಲ. ಬದಲಿಗೆ ದಸರಾ ಉದ್ಘಾಟನೆಗೆ ಅಧಿಕೃತವಾಗಿ ಆಹ್ವಾನ ನೀಡಿದೆ.

ಈ ಮಧ್ಯೆ ಇಂದು ಮೈಸೂರಿನ ಶ್ರೀಕ್ಷೇತ್ರ



ಚಾಮುಂಡಿಬೆಟ್ಟಕ್ಕೆ ಕೇಂದ್ರ ಸಚಿವ ವಿ. ಸೋಮಣ್ಣ ಭೇಟಿ ನೀಡಿ, ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ವಿ. ಸೋಮಣ್ಣ, ನಂಬಿಕೆ, ಭಕ್ತಿ ಮತ್ತು ಇತಿಹಾಸಕ್ಕೆ ಮತ್ತೊಂದು ಹೆಸರೇ ಚಾಮುಂಡಿ ಬೆಟ್ಟ. ಸರ್ಕಾರವು ಉದ್ಘಾಟಕರಿಗೆ ತಾಯಿ ಚಾಮುಂಡಿ ಇತಿಹಾಸ, ಉತ್ಸವ, ಆರಾಧನೆ, ಸಂಪ್ರದಾಯವನ್ನು ಮೊದಲು ತಿಳಿಸಲಿ. ಈಗ ಉದ್ಘಾಟಕರಾಗಿ ಆಯ್ಕೆಯಾಗಿರುವವರು, ಈ ಸ್ಥಾನಕ್ಕೆ ಅರ್ಹರೋ ಅಥವಾ ಇಲ್ಲವೋ ಎಂಬ ಚರ್ಚೆ ಮಾಡುವುದಿಲ್ಲ ಎಂದರು. ಧಾರ್ಮಿಕ ವಿಚಾರಗಳಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಪದೇ ಪದೇ ಎಡವಟ್ಟು ಮಾಡುತ್ತಿದೆ. ಸರ್ಕಾರ ಯಾರನ್ನೋ ತೃಪ್ತಿಪಡಿಸುವ ಕೆಲಸ ಮಾಡುವುದು ಸರಿಯಲ್ಲ. ಚಾಮುಂಡಿ ತಾಯಿಯ ಮನಸ್ಸು ಗೆಲ್ಲುವ ಕೆಲಸ ಮಾಡಿದರೆ ದೇಶ ಮತ್ತು ರಾಜ್ಯಕ್ಕೆ ಒಳ್ಳೆಯದಾಗುತ್ತದೆ. ದಸರಾ ಉದ್ಘಾಟಕರು ನಮ್ಮ ಸಂಪ್ರದಾಯಕ್ಕೆ ಧಕ್ಕೆ ಆಗದಂತೆ ನಡೆದುಕೊಳ್ಳಲಿ ಎಂದು ಹೇಳಿದರು.

### ಸಂಚಾರಿ ಇ–ಚಲನ್ ದಂಡದ ಮೇಲೆ ಶೇ.50 ರಿಯಾಯಿತಿ

# ಅವಕಾಶ ಸದ್ಬಳಕೆ ಮಾಡಿಕೊಳ್ಳಲು ಜಿಲ್ಲಾ ನ್ಯಾಯಾಧೀಶರ ಕರೆ

**ಶಿವಮೊಗ್ಗ :** ಬಾಕಿ ಇರುವ ಸಂಚಾರ ಇ–ಚಲನ್ ಪ್ರಕರಣಗಳ ದಂಡದ ಮೇಲೆ ಶೇ.50 ರಿಯಾಯಿತಿ ನೀಡಿ ಸರ್ಕಾರ ಆದೇಶಿಸಿದ್ದು ಈ ಅವಕಾಶವನ್ನು ಸಾರ್ವಜನಿಕರು ಸದ್ಬಳಕೆ ಮಾಡಿಕೊಳ್ಳಬೇಕೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜುನಾಥ ನಾಯಕ್ ಕರೆ ನೀಡಿದರು.

ಗುರುವಾರ ಜಿಲ್ಲಾ ನ್ಯಾಯಾಲಯದಲ್ಲಿ ಏರ್ಪಡಿಸಲಾಗಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿ, ಸಂಚಾರಿ ಇ–ಚಲನ್‌ನಲ್ಲಿ ದಾಖಲಾದ ಪ್ರಕರಣಗಳಲ್ಲಿ ದಂಡ ಪಾವತಿಸದೇ ಬಾಕಿ ಉಳಿಸಿಕೊಂಡಿರುವ ಪ್ರಕರಣಗಳಿಗೆ ದಂಡವನ್ನು ಪಾವತಿಸಲು ಶೇ.50 ರಷ್ಟು ರಿಯಾಯಿತಿ ನೀಡಿ ಸರ್ಕಾರ ಆದೇಶಿಸಿದ್ದು ಸೆ.12 ರವರೆಗೆ ಈ ರಿಯಾಯಿತಿ ಅನ್ವಯಿಸುತ್ತದೆ. ಆದ್ದರಿಂದ ಬಾಕಿ ಉಳಿಸಿಕೊಂಡಿರುವವರು ಕೂಡಲೇ ಈ ಅವಕಾಶವನ್ನು ಬಳಕೆ ಮಾಡಿಳ್ಳಬೇಕೆಂದರು.

ಪೊಲೀಸ್ ಇಲಾಖೆಯಿಂದ ಆ.23 ರಿಂದ ಸೆ.02 ರವರೆಗೆ ಈ ರಿಯಾಯಿತಿಯಡಿ ಒಟ್ಟು




15,465 ಇ–ಚಲನ್ ಪ್ರಕರಣಗಳನ್ನು ರೂ.63,22,750/– ಮೊತ್ತ ಪಾವತಿಸಿ ಮುಕ್ತಾಯ ಮಾಡಲಾಗಿದೆ. ಇಂದಿನಿಂದ ಇನ್ನು ಒಂಭತ್ತು ದಿನಗಳ ಕಾಲದವರೆಗೆ ಮಾತ್ರ ಈ ಅವಕಾಶವಿದ್ದು ಸಾರ್ವಜನಿಕರು ತಮ್ಮ ವಾಹನಗಳ ಮೇಲೆ ಪೊಲೀಸರಿಂದ ನೋಂದಾಯಿಸಲ್ಪಟ್ಟ ದಂಡವನ್ನು ಶೀಘ್ರವಾಗಿ ಪಾವತಿಸುವಂತೆ ಅವರು ತಿಳಿಸಿದರು.

ರಾಷ್ಟ್ರೀಯ ಲೋಕ್ ಅದಾಲತ್: ಶಿವಮೊಗ್ಗ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ವಿಚಾರಣೆಗೆ ಬಾಕಿ ಇರುವ ಪ್ರಕರಣಗಳ ಶೀಘ್ರ ವಿಲೇವಾರಿಗೆ ಮತ್ತು ಪಕ್ಷಗಾರರಿಗೆ ತ್ವರಿತ ನ್ಯಾಯ ದಾನದ ದೃಷ್ಟಿಯಿಂದ ಈ ವರ್ಷದ 3ನೇ ರಾಷ್ಟ್ರೀಯ ಲೋಕ್ ಅದಾಲತ್‌ನ್ನು ದಿನಾಂಕ: 13.09.2025 ರಂದು ಹಮ್ಮಿಕೊಳ್ಳಲಾಗಿದೆ.

ಅಂದು ಎಲ್ಲಾ ನ್ಯಾಯಾಲಯಗಳಲ್ಲಿ ವಿಚಾರಣೆಗೆ ಬಾಕಿ ಇರುವ ವೈವಾಹಿಕ ವಿವಾದದ ವ್ಯಾಜ್ಯಗಳು, ಅಪಘಾತಕ್ಕೆ ಸಂಬಂಧಿಸಿದ ಪರಿಹಾರದ ವ್ಯಾಜ್ಯಗಳು, ಕೌಟುಂಬಿಕ ದೌರ್ಜನ್ಯ ಪ್ರಕರಣಗಳು, ಚೆಕ್ ಅಮಾನ್ಯ ಪ್ರಕರಣಗಳು, ವಾಣಿಜ್ಯ ವಿವಾದದ ದಾವೆಗಳು, ವೇತನ ಮತ್ತು ಸೇವೆಗೆ ಸಂಬಂಧಿಸಿದ ವ್ಯಾಜ್ಯಗಳು, ರಾಜೀ ಆಗಬಹುದಾದ ಕ್ರಿಮಿನಲ್ ಪ್ರಕರಣಗಳು, ಗ್ರಾಹಕರ ವೇದಿಕೆಯ ಪ್ರಕರಣಗಳು, ಸಾಲದ ಪ್ರಕರಣಗಳು, ಪಾಲು ವಿಭಾಗದ ದಾವೆಗಳು, ಸ್ಥಿರಆಸ್ತಿ ಸ್ವಾಧೀನದ ದಾವೆಗಳು, ಭೂಸ್ವಾಧೀನದ ಪ್ರಕರಣಗಳು ಮತ್ತು ಇತರೆ ಸಿವಿಲ್ ಪ್ರಕರಣಗಳ ರಾಜೀ ಸಂಧಾನಕ್ಕಾಗಿ ಉಭಯ ಪಕ್ಷಗಾರರ ಉಪಸ್ಥಿತಿಯಲ್ಲಿ ನ್ಯಾಯಾಧೀಶರು ಮತ್ತು ನ್ಯಾಯಿಕೇತರ ಸಂಧಾನಕಾರರು ರಾಜೀ ಸಂಧಾನದ ಪ್ರಕ್ರಿಯೆಯನ್ನು ಕೈಗೊಂಡು ಪಕ್ಷಗಾರರು ವಿವಾದವನ್ನು ಇತ್ಯರ್ಥಪಡಿಸಿಕೊಂಡರೆ ಅದರಂತೆ ಅಂತಿಮ ಆದೇಶವನ್ನು ಅದೇ ದಿನದಂದು ನೀಡುವ ಅವಕಾಶವನ್ನು ಸಾರ್ವಜನಿಕರು ಮತ್ತು ಪಕ್ಷಗಾರರು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಈ ಮೂಲಕ ಮನವಿ ಮಾಡಿದರು.

ಈ ಮುಂಚೆ ದಿನಾಂಕ: 12.07.2025 ರಂದು ಕೈಗೊಳ್ಳಲಾದ ಈ ವರ್ಷದ 2ನೇ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ವಿಚಾರಣೆಗೆ ಬಾಕಿ ಇದ್ದ 14225 ರಷ್ಟು ಪ್ರಕರಣಗಳು ರಾಜೀ ಸಂಧಾನದ ಮೂಲಕ ಕೊನೆಗೊಂಡಿದ್ದು, ಅವುಗಳ ಮೂಲಕ ಪಕ್ಷಗಾರರು ಒಟ್ಟು ರೂ. 30,50,15,387/– ಮೊತ್ತದ ಪರಿಹಾರ ಒಳಗೊಂಡ ವಿವಾದಗಳನ್ನು ರಾಜೀ ಮಾಡಲಾಗಿರುತ್ತದೆ. ಅದೇ ಸಂದರ್ಭದಲ್ಲಿ ಒಟ್ಟು 1,44,825 ವ್ಯಾಜ್ಯ ಪೂರ್ವ ಪ್ರಕರಣಗಳು ಕೊನೆಗೊಂಡಿದ್ದು, ಅವುಗಳ ಮೂಲಕ ಒಟ್ಟು ರೂ. 75,40,80,831/– ಮೊತ್ತದ ಪರಿಹಾರ ಒಳಗೊಂಡ ವಿವಾದಗಳನ್ನು ರಾಜೀ ಮಾಡಿಕೊಂಡಿರುತ್ತಾರೆ ಎಂದು ತಿಳಿಸಿದರು.

**ಖಾಯಂ ಲೋಕ್ ಅದಾಲತ್ ಜಾಗೃತಿ ಅಭಿಯಾನ :** ಸಾರ್ವಜನಿಕ ಉಪಯುಕ್ತ ಸೇವೆಗಳನ್ನು ನೀಡುತ್ತಿರುವ ಬ್ಯಾಂಕ್‌ಗಳು, ವಿಮಾ ಕಂಪನಿಗಳು, ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿಗಳ ಅಧಿಕಾರಿಗಳಿಗೆ ಮತ್ತು ಸಾರ್ವಜನಿಕರಲ್ಲಿ ಖಾಯಂ ಲೋಕ್ ಅದಾಲತ್ ಕುರಿತು ಜಾಗೃತಿ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

## ಶಾಸಕ ಹರೀಶ್ ವಿರುದ್ಧ ಎಸ್ಪಿ ಉಮಾ ಪ್ರಶಾಂತ್ ದೂರು

**ದಾವಣಗೆರೆ:** ಪತ್ರಿಕಾಗೋಷ್ಠಿಯಲ್ಲಿ ತನ್ನ ವಿರುದ್ಧ ಅವಾಚ್ಯ ಪದಗಳನ್ನು



ಬಳಸಿ ಮಾನಹಾನಿ ಮಾಡಿದ್ದಾರೆ ಎಂದು ಆರೋಪಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್ಪಿ) ಉಮಾ ಪ್ರಶಾಂತ್, ಹರಿಹರ ಶಾಸಕ ಬಿ.ಪಿ. ಹರೀಶ್ ವಿರುದ್ಧ ದೂರು ದಾಖಲಿಸಿದ್ದಾರೆ.

ಸೆಪ್ಟೆಂಬರ್ 2ರಂದು ದಾವಣಗೆರೆ ಪ್ರೆಸ್ ಕ್ಲಬ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಹರೀಶ್ ಅವರು ಜಿಲ್ಲಾ ಉಸ್ತುವಾರಿ ಸಚಿವರ ಕುರಿತು ಮಾತನಾಡುತ್ತಾ, ತಮ್ಮನ್ನು ಉದ್ದೇಶಿಸಿ 'ಪಮೋರಿಯನ್ ನಾಯಿ ತರ ವರ್ತನೆ ಮಾಡುತ್ತಾರೆ' ಎಂದು ಹೇಳಿ ಅಪಮಾನ ಮಾಡಿದ್ದಾರೆ ಎಂದು ಎಸ್‌ಪಿ ಉಮಾ ಪ್ರಶಾಂತ್ ತಮ್ಮ ದೂರಿನಲ್ಲಿ ತಿಳಿಸಿದ್ದಾರೆ.

ಒಬ್ಬ ಜವಾಬ್ದಾರಿಯುತ ಜನಪ್ರತಿನಿಧಿಯಾಗಿರುವ ಬಿ.ಪಿ. ಹರೀಶ್ ಅವರು, ಮಹಿಳಾ ಪೊಲೀಸ್ ಅಧಿಕಾರಿಯಾದ ತನ್ನನ್ನು ಕಾನೂನುಬದ್ಧ ಕರ್ತವ್ಯ ನಿರ್ವಹಣೆಯಿಂದ ವಿಮುಖಗೊಳಿಸುವ ಉದ್ದೇಶದಿಂದ ಅವಮಾನಕರ ಮಾತುಗಳನ್ನು ಆಡಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಈ ಸಂಬಂಧ ಕೆ.ಟಿ.ಜೆ. ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಗಣಪ ಪ್ರತಿಷ್ಠಾಪನೆ ಒಂದು ಭಾವೈಕ್ಯತೆ ಸಂಕೇತ

**ಚನ್ನಗಿರಿ :** ಚನ್ನಗಿರಿ ಪಟ್ಟಣದಲ್ಲಿ 28 ಸಮಾಜಗಳ ವತಿಯಿಂದ ಪ್ರತಿಷ್ಠಾಪನೆ ಮಾಡುವಂತಹ ಗಣಪ ಒಂದು ಭಾವೈಕ್ಯತೆಯ ಸಂಕೇತವಾಗಿದೆ ಎಂದು ಚನ್ನಗಿರಿ ಹಿರೇಮಠದ ಕೇದಾರಲಿಂಗ ಶಿವಶಾಂತವೀರ ಸ್ವಾಮೀಜಿ ಹೇಳಿದರು.

ಬುಧವಾರ ಸಂಜೆ ಚನ್ನಗಿರಿ ತಾಲೂಕು ಕ್ರೀಡಾಂಗಣದಲ್ಲಿ ಪ್ರತಿಷ್ಠಾಪನೆ ಮಾಡಲಾಗಿದ್ದ ಹಿಂದೂ ಏಕತಾ ಗಣೇಶೋತ್ಸವ ಸಮಿತಿಯ ಈ ಸಾಲಿನ ಸಮಾರೋಪ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿ ಇಂದು ಮನುಷ್ಯನು ಪ್ರಾಣಿ ಪಕ್ಷಿಗಳಿಗಿಂತ ಕಡೆಯಾಗಿದ್ದು ಮನುಷ್ಯನ್ನು ಮಾನವಿಯ ಮೌಲ್ಯಗಳನ್ನು




ಕಳೆದುಕೊಂಡು ಎಲ್ಲರ ಬಂಧುತ್ವವನ್ನು ಕಳೆದುಕೊಳ್ಳುತ್ತಿದ್ದಾನೆ. ಇಂದಿನ ಪ್ರಪಂಚದಲ್ಲಿ ಮನುಷ್ಯನು ಅಧರ್ಮ, ಅನೀತಿ ದುರಾಂಕಾರದಿಂದ ಬದುಕುತ್ತಿದ್ದು ಬದುಕಿನ ಜೀವನದಲ್ಲಿ ನಾವು ಮಾಡಿದ ಮೋಸ ಅನ್ಯಾಯ ನಮ್ಮ ಬೆನ್ನು ಬಿಡಲಾರದು ಎಂದರು.

ಜಗತ್ತಿಗೆ ಸಂಸ್ಕಾರ ಸಂಸ್ಕೃತಿಯನ್ನು ಕಲಿಸಿಕೊಟ್ಟಂತಹ ದೇಶ ಭಾರತದೇಶವಾಗಿದ್ದು ಧರ್ಮ ಸಂಸ್ಕೃತಿ ಉಳಿಯಬೇಕಾದರೆ ಧಾರ್ಮಿಕವಾದ ಹಬ್ಬ ಆಚರಣೆಗಳು ಅಗತ್ಯವಾಗಿವೆ. ಹಬ್ಬ ಹರಿದಿನಗಳಲ್ಲಿ ದಾರ್ಮಿಕ ಆಚರಣೆಗಳಿಂದ ಗುರುಹಿರಿಯರ ಭಕ್ತಿ ಮತ್ತು ಸಂಸ್ಕಾರ ಹೆಚ್ಚಾಗುತ್ತದೆ ಎಂದರು. ಸಮಿತಿಯ ಕಾರ್ಯದರ್ಶಿ ಸಿ.ಎಚ್.ಶ್ರೀನಿವಾಸ್ ಮಾತನಾಡಿ ಕಳೆದ 10 ವರ್ಷಗಳಿಂದ ಹಿಂದೂ ಏಕತಾ ಗಣೇಶೋತ್ಸವವನ್ನು ಎಲ್ಲಾ ಸಮಾಜದ ಮುಖಂಡರ ಮಾರ್ಗದರ್ಶನದಲ್ಲಿ ಅಚರಣೆ ಮಾಡಿಕೊಂಡು ಬರಲಾಗುತ್ತಿದ್ದು ಮುಂದಿನ ದಿನಗಳಲ್ಲಿ ಯುವಕರು ಹಬ್ಬದ ಆಚರಣೆಗೆ ಸಿದ್ದವಾಗಬೇಕು. ನಿಮ್ಮ ಸಹಕಾರಕ್ಕೆ ನಾವು ಎಂದಿಗೂ ನಿಮ್ಮ ಜೊತೆ ಇರುತ್ತೇವೆ. ಸರಕಾರದಿಂದ ಡಿ.ಜೆ. ನಿಷೇಧ ಮಾಡಿದ್ದು ಕಲಾ ತಂಡಗಳೊಂದಿಗೆ ವಿಜೃಂಭಣೆಯಿಂದ ವಿಸರ್ಜಣೆ ಮಾಡೋಣ ಎಂದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ನಗರ ಘಟಕ ಅಧ್ಯಕ್ಷ ಪಿ.ಆರ್. ಮಂಜುನಾಥ್, ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಜ್ಯೋತಿ ಕೋರಿ, ಗಣೇಶ ವಿಗ್ರಹ ದಾನಿ ಅನಂದ್, ಪಿ.ಎಲ್.ಡಿ. ಬ್ಯಾಂಕ್ ಮಾಜಿ ಅಧ್ಯಕ್ಷ ಕಲಾಮಿ ಮಂಜು, ಪುರಸಭೆ ಸದಸ್ಯ ಶ್ರೀಕಾಂತ್ ಚವ್ಹಾಣ್, ಇತರರು ಹಾಜರಿದ್ದರು.

# ಮಹಿಳಾ ದೌರ್ಜನ್ಯ ತಡೆಗೆ ಅರಿವು ಮೂಡಿಸುವುದು ಅಗತ್ಯ: ವಿ.ಹನುಮಂತಪ್ಪ

**ಚಿಕ್ಕಮಗಳೂರು ಸೆ.4:** ಮಹಿಳೆಯರ ಮೇಲೆ ನಡೆಯುವ ದೌರ್ಜನ್ಯಗಳನ್ನು ಸಮಾಜದ ಪ್ರತಿಯೊಬ್ಬ ಪ್ರಜೆಯೂ ಕೈಜೋಡಿಸಬೇಕು. ಇದನ್ನು ಸಮಾಜದಿಂದ ಸಂಪೂರ್ಣವಾಗಿ ತೊಲಗಿಸಿ ಕಾನೂನಿನ ಮುಂದೆ ಎಲ್ಲರೂ ಸಮಾನರು ಎಂಬ ಬಗ್ಗೆ ಅರಿವು ಮೂಡಿಸುವ ಕಾರ್ಯ ನಡೆಯಬೇಕಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ವಿ.ಹನುಮಂತಪ್ಪ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಾರ್ತಾ ಮತ್ತು ಪ್ರಚಾರ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನೆ ಇವುಗಳ ಸಂಯುಕ್ತಾಶ್ರಯದಲ್ಲಿ ನಗರದ ತಾಲ್ಲೂಕು ಸ್ತ್ರೀಶಕ್ತಿ ಭವನದಲ್ಲಿ ಇಂದು ಆಯೋಜಿಸಲಾಗಿದ್ದ ಲಿಂಗ ಸಂವೇದನೆ ಕುರಿತ ಅರಿವು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಪುರುಷ ಪ್ರಧಾನ ಸಮಾಜದಲ್ಲಿ ಸ್ತ್ರೀಸಂಕುಲವನ್ನು ಮೊದಲಿನಿಂದಲೂ ಪುರುಷ ತನ್ನ ಹತೋಟಿಯಲ್ಲಿಟ್ಟುಕೊಂಡಿದ್ದಾನೆ. ಹಿಂದಿನಿಂದಲೂ ಹೆಣ್ಣು, ಗಂಡು ಎಂಬ ತಾರತಮ್ಯ ನಡೆಯುತ್ತಲೇ ಇದ್ದು, ಅದನ್ನು ಸಂಪೂರ್ಣವಾಗಿ ನಮ್ಮ ಸಮಾಜದಿಂದ ತೊಲಗಿಸಬೇಕಿದೆ ಎಂದರು.

ಆಗಿನ ಕಾಲಘಟ್ಟದಲ್ಲಿ ಕೆಲವೊಂದು ಪದನಿಮಿತ್ತ ಕ್ಷೇತ್ರವು ಪುರುಷರಿಗೆ ಸೀಮಿತ ಎಂಬ ಮನೋಭಾವ ಇತ್ತು. ಆದರೆ ಸಂವಿಧಾನ ರಚನೆಯಾದ ಮೇಲೆ ನಮ್ಮ ದೇಶವನ್ನು ಅತೀ ಹೆಚ್ಚು ಆಳ್ವಿಕೆ ನಡೆಸಿದ ಇಂದಿರಾ ಗಾಂಧಿ ಪ್ರಧಾನ ಮಂತ್ರಿಗಳಾಗಿದ್ದರು. ಇತ್ತೀಚಿನ ದಿನಗಳಲ್ಲಿ ಹೆಣ್ಣು ಮಕ್ಕಳು ಎಲ್ಲಾ ಕ್ಷೇತ್ರದಲ್ಲಿಯೂ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ಅದಕ್ಕೆ ಉದಾಹರಣೆ ಅಧಿಕಾರಿ ವರ್ಗದಲ್ಲಿ ಮಹಿಳಾ ಪ್ರಧಾನವಾಗಿರುವ ನಮ್ಮ ಜಿಲ್ಲೆ. ಇದು ನಮ್ಮ ಹೆಮ್ಮೆ ಎಂದು ಹೇಳಿದರು.

ಸಂವಿಧಾನದ ಆಶಯದಂತೆ ಹೆಣ್ಣು ಮಕ್ಕಳಿಗೆ




ಅವಕಾಶ ಕಲ್ಪಿಸಿಕೊಡಲಾಗಿದೆ. ಇದೊಂದು ರೀತಿಯಲ್ಲಿ ಮಹಿಳೆಯರನ್ನು ಸಬಲರನ್ನಾಗಿ ಮಾಡುವ ಪ್ರಯತ್ನ. ಇಬ್ಬರಲ್ಲೂ ಭೇದವಿಲ್ಲ, ತಾರತಮ್ಯವಿಲ್ಲ ಇಬ್ಬರೂ ಒಂದೇ ಎಂಬುದರ ಬಗ್ಗೆ ಗಂಡು ಮತ್ತು ಹೆಣ್ಣು ಮಕ್ಕಳಲ್ಲಿ ಅರಿವು ಮೂಡಿಸಬೇಕು. ಈ ಕಾರ್ಯ ತಾಯಂದಿರಿಂದಲೇ ಮೊದಲು ಪ್ರಾರಂಭವಾಗಬೇಕು. ನಂತರ ನಮ್ಮ ನಮ್ಮ ಮನೆ, ಶಾಲೆ, ಅಂಗನವಾಡಿ ಕೇಂದ್ರಗಳಿಂದ ಪ್ರಾರಂಭವಾದರೆ ಮಾತ್ರ ಈ ತಾರತಮ್ಯತೆಯನ್ನು ಸಂಪೂರ್ಣವಾಗಿ ತೊಲಗಿಸಬಹುದು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ಡಿ.ಸಂತೋಷ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಲಿಂಗ ಸಮಾನತೆ ನಮ್ಮ ಮನೆಗಳಲ್ಲಿ, ಜೊತೆಗೆ ಹೆಣ್ಣು ಮತ್ತು ಗಂಡು ಇಬ್ಬರು ಇರುವ ಅಂಗನವಾಡಿ ಕೇಂದ್ರಗಳಲ್ಲಿ ಇಬ್ಬರಿಗೂ ಸಮಾನ ಅವಕಾಶವನ್ನು ನೀಡಬೇಕು. ಬೆಳೆಯುವ ಮಕ್ಕಳಲ್ಲಿ ನಾವು ಮೊದಲಿನಿಂದ ಈ ಬಗ್ಗೆ ಕಲಿಸಿದಲ್ಲಿ ಅವರು ಅದನ್ನು ಗ್ರಹಿಸುತ್ತಾರೆ. ಸಮಾಜದಲ್ಲಿ ಗಂಡು–ಹೆಣ್ಣು ಎಂಬ ಭೇದಕ್ಕೆ ಅವಕಾಶವಿಲ್ಲ. ಎಲ್ಲರೂ ಸಮಾನರು ಎಂಬ ಬಗ್ಗೆ ಅವರಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸಿ.ರಂಗನಾಥ್ ಮಾತನಾಡಿ, ಲಿಂಗ ಸಂವೇದನೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದ ಮುಖಾಂತರ ಮಹಿಳೆಯರ ರಕ್ಷಣೆ, ಮಹಿಳೆಯರ ಸಮಾನತೆ ಇವುಗಳ ಬಗ್ಗೆ ಮಹಿಳೆಯರಿಗೆ ಅರಿವು ಮೂಡಿಸಬೇಕು. ಸಂವಿಧಾನದಲ್ಲಿ ಲಿಂಗ ತಾರತಮ್ಯಕ್ಕೆ, ಅಸಮಾನತೆಗೆ ಅವಕಾಶವಿಲ್ಲ, ಹೀಗಿದ್ದರೂ ಹಿಂದಿನಿಂದಲೂ ಮಹಿಳೆಯರ ಶೋಷಣೆ ಹಾಗೂ ತಾರತಮ್ಯ ಮಾಡುವ ಮನಸ್ಥಿತಿ ಬೆಳೆದು ಬಂದಿದೆ. ಯಾರಿಂದ ತಾರತಮ್ಯವಾಗುತ್ತಿದೆಯೋ ಅಂಥವರಲ್ಲಿ ಅರಿವು ಮೂಡಿಸಬೇಕು. ಮನೆಗಳಲ್ಲಿ ಮನೆ ಕೆಲಸದಿಂದ ದೂರವಿಟ್ಟು ಗಂಡು ಮಕ್ಕಳಿಗೆ ಹೆಚ್ಚಿನ ಶಿಕ್ಷಣ ಒದಗಿಸಲಾಗುತ್ತದೆ. ಅದೇ ಹೆಣ್ಣು ಮಕ್ಕಳನ್ನು ಮನೆ ಕೆಲಸಕ್ಕೆ ಹಚ್ಚಿ ಅವಕಾಶಗಳಿಂದ ವಂಚಿತರನ್ನಾಗಿಸಿ ತಾರತಮ್ಯ ಮಾಡಲಾಗುತ್ತಿದೆ. ಇದಕ್ಕೆ ಅಂಕುಶ ಹಾಕಿ ಮನೆಗಳಲ್ಲಿ ಇಬ್ಬರಿಗೂ ಸಮಾನ ಅವಕಾಶ ಕಲ್ಪಿಸಿದರೆ ಲಿಂಗ ಅಸಮಾನತೆ ತೊಲಗಿಸಬಹುದು ಎಂದರು.

ಕಾರ್ಯಕ್ರಮದಲ್ಲಿ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೂಪ ಕುಮಾರಿ, ಅಂಗನವಾಡಿ ಶಿಕ್ಷಕರು ಮತ್ತು ಕಾರ್ಯಕರ್ತೆಯರು ಭಾಗವಹಿಸಿದ್ದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ನಿಮ್ಮ ಮನೆಯ ಪರಿಸ್ಥಿತಿ ಸ್ವಲ್ಪ ಅನಿರೀಕ್ಷಿತವಾಗಿರುತ್ತದೆ. ನಿಮ್ಮ ಕನಸುಗಳು ಹಾಗೂ ವಾಸ್ತವವು ಪ್ರೀತಿಯ ಭಾವಪರವಶತೆಯಲ್ಲಿ ಇಂದು ಸೇರಿಹೋಗುತ್ತವೆ. ನೀವು ಕೆಲಸದಲ್ಲಿ ಇಂದು ವಿಶೇಷವಾಗಿದ್ದೀರೆಂದು ನಿಮಗನ್ನಿಸುತ್ತದೆ

### ವೃಷಭ ರಾಶಿ

ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಏಕೆಂದರೆ ನೀವು ಅದನ್ನು ಮಾಡದಿದ್ದರೆ ಅವರ ಆರೋಗ್ಯವು ಹದಗೆಡಬಹುದು ಮತ್ತು ಅವರ ಆರೋಗ್ಯದ ಮೇಲೆ ಬಹಳಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

### ಮಿಥುನ ರಾಶಿ

ಸ್ನೇಹಿತರ ಅಥವಾ ಒಬ್ಬ ಪರಿಚಯಸ್ಥರ ಸ್ವಾರ್ಥದ ವರ್ತನೆ ನಿಮ್ಮ ಮಾನಸಿಕ ಶಾಂತಿಗೆ ತೊಂದರೆ ತರಬಹುದು. ಕೆಲಸದ ಸ್ಥಳದಲ್ಲಿ ಅಥವಾ ವ್ಯಾಪಾರದಲ್ಲಿ ನಿಮ್ಮ ಯಾವುದೇ ಅಜಾಗರೂಕತೆ ಇಂದು ನಿಮಗೆ ಆರ್ಥಿಕ ನಷ್ಟವನ್ನು ಉಂಟುಮಾಡಬಹುದು ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ನೀವು ಇನ್ನು ಮುಂದೆ ನಿಮ್ಮ ಕಾಮಪ್ರಚೋದಕ ಕಲ್ಪನೆಗಳ ಬಗ್ಗೆ ಕನಸು ಕಾಣಬೇಕಾಗಿಲ್ಲ; ಅವು ಇಂದು ನಿಜವಾಗಬಹುದು.

### ಕರ್ಕ ರಾಶಿ

ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ನಿಮ್ಮ ಜ್ಞಾನದಾಹ ನಿಮಗೆ ಹೊಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ನಿಮ್ಮ ಮಾತುಗಳನ್ನು ಸರಿಯಾಗಿ ಸಾಬೀತುಪಡಿಸಲು ಇಂದು ನೀವು ನಿಮ್ಮ ಸಂಗಾತಿಯೊಂದಿಗೆ ಜಗಳವಾಡಬಹುದು. ಹೇಗಾದರೂ, ನಿಮ್ಮ ಸಂಗಾತಿ ತನ್ನ ಬುದ್ಧಿವಂತಿಕೆಯನ್ನು ತೋರಿಸುತ್ತ ನಿಮ್ಮನ್ನು ಶಾಂತಗೊಳಿಸುತ್ತಾರೆ.

### ಸಿಂಹ ರಾಶಿ

ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ. ತಮ್ಮ ಹಣವನ್ನು ಇನ್ನೊಬ್ಬರಿಗೆ ನೀಡಲು ಇಷ್ಟಪಡುವುದಿಲ್ಲ ಆದರೆ ಇಂದು ನೀವು ಅಗತ್ಯವಿರುವವರಿಗೆ ಹಣವನ್ನು ಕೊಟ್ಟು ವಿಶ್ರಾಂತಿಯನ್ನು ಅನುಭವಿಸುವಿರಿ.

### ಕನ್ಯಾ ರಾಶಿ

ಫಿಟ್ ನೆಸ್ ಮತ್ತು ತೂಕ ನಷ್ಟ ಕಾರ್ಯಕ್ರಮಗಳು ನೀವು ಒಳ್ಳೆಯ ದೇಹರಚನೆ ಹೊಂದಲು ಸಹಾಯ ಮಾಡುತ್ತದೆ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ. ವೈಯಕ್ತಿಕ ಜೀವನದ ಜೊತೆಗೆ ಕೆಲವು ಧರ್ಮಾರ್ಥ ಕಾರ್ಯಗಳಲ್ಲೂ ನಿಮ್ಮನ್ನು ತೊಡಗಿಸಿಕೊಳ್ಳಿ.

### ತುಲಾ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ನೀವು ಕೆಲಸದ ಜಾಗದಲ್ಲಿ ಅತಿಯಾಗಿ ಶ್ರಮಪಡುವುದರಿಂದ ಕೌಟುಂಬಿಕ ಅಗತ್ಯಗಳು ಮತ್ತು ಅವಶ್ಯಕತೆಗಳು ನಿರ್ಲಕ್ಷಿಸಲ್ಪಡುತ್ತವೆ ನೀವು ಹಾಗೂ ನಿಮ್ಮ ಪ್ರೀತಿಪಾತ್ರರು ಒಬ್ಬರೊನ್ನಬ್ಬರು ಚೆನ್ನಾಗಿ ಅರ್ಥಮಾಡಿಕೊಳ್ಳಲು ಸಮಯ ವ್ಯಯಿಸಬೇಕು. ಹೊಸ ವಿಚಾರಗಳನ್ನು ಉತ್ಪಾದಕವಾಗಿರುತ್ತವೆ.

### ವೃಶ್ಚಿಕ ರಾಶಿ

ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ನಿಮ್ಮ ಮಕ್ಕಳು ಜೊತೆ ನಿಮ್ಮ ಅಮೂಲ್ಯ ಸಮಯ ಕಳೆಯಿರಿ. ಇದು ಚಿಕಿತ್ಸೆಯ ಅತ್ಯುತ್ತಮ ರೂಪ. ಅವರು ಅನಿಯಮಿತ ಆನಂದದ ಮೂಲವಾಗಿರುತ್ತಾರೆ.

### ಧನು ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಇಂದು ಹಣದ ಪ್ರಯೋಜನವನ್ನು ಪಡೆಯುವ ಸಾಧ್ಯತೆ ಇದೆ ಆದರೆ ನಿಮ್ಮ ಕೋಪದ ಸ್ವಭಾವದಿಂದ ಇಂದು ಹಣವನ್ನು ಗಳಿಸುವಲ್ಲಿ ಸಾಧ್ಯವಾಗದಿರಬಹುದು. ಮಕ್ಕಳು ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವಿಫಲವಾಗಿ ನಿಮಗೆ ನಿರಾಶೆಯುಂಟುಮಾಡಬಹುದು. ನಿಮ್ಮ ಕನಸು ನನಸಾಗಿಸಲು ನೀವು ಅವರನ್ನು ಪ್ರಚೋತ್ಸಾಹಿಸಬೇಕು.

### ಮಕರ ರಾಶಿ

ನೀವು ಕೆಲವು ಆಘಾತಗಳನ್ನು ಎದುರಿಸುವುದರಿಂದ ನೀವು ಬಹಳ ಧೈರ್ಯ ಹಾಗೂ ಶಕ್ತಿಯನ್ನು ಪ್ರದರ್ಶಿಸುವ ಅಗತ್ಯವಿದೆ. ನೀವು ನಿಮ್ಮ ಆಶಾವಾದಿ ನಿಲುವಿನಿಂದ ಇವುಗಳಿಂದ ಸುಲಭವಾಗಿ ಹೊಬರಬಹುದು. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೆಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ. ಮನೆಯಲ್ಲಿ ಸಮಸ್ಯೆಗಳು ಉದ್ಭವವಾಗುವಂತೆ ತೋರುತ್ತಿರುವುದರಿಂದ ನಿಮ್ಮ ಮಾತುಗಳ ಬಗ್ಗೆ ಎಚ್ಚರ ವಹಿಸಿ.

### ಕುಂಭ ರಾಶಿ

ಹೆದರಿಕೆ ನಿಮ್ಮ ಸಂತೋಷವನ್ನು ಹಾಳುಗೆಡವಬಹುದು.ನೀವು ಇದು ನಮ್ಮ ಆಲೋಚನೆಗಳು ಮತ್ತು ಕಲ್ಪನೆಯ ಪ್ರಭಾವವೆಂದು ಅರ್ಥಮಾಡಿಕೊಳ್ಳಬೇಕು. ಇದು ಸ್ವಾಭಾವಿಕತೆಯನ್ನು ಕೊಲ್ಲುತ್ತದೆ– ಜೀವನದ ಆನಂದವನ್ನು ಹೀರಿಕೊಳ್ಳುತ್ತದೆ ಹಾಗೂ ನಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ–ಆದ್ದರಿಂದ ಇದು ನಿಮ್ಮನ್ನು ಹೇಡಿಯಾಗಿಸುವ ಮೊದಲು ಅದನ್ನು ಮೊಗ್ಗಿನಲ್ಲೇ ಚಿವುಟಿಹಾಕುವುದು ಒಳ್ಳೆಯದು.

### ಮೀನ ರಾಶಿ

ವಿಶೇಷವಾಗಿ ಹೃದಯ ರೋಗಿಗಳು ಕಾಫಿಯನ್ನು ಬಿಡಬೇಕು. ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ. ಈ ಹಣ ನಿಮ್ಮ ಅನೇಕ ಸಮಸೆಗಳನ್ನು ದೂರ ಮಾಡಬಹುದು. ನೀವು ಪಾರ್ಟಿ ನೀಡಲು ಯೋಜಿಸುತ್ತಿದ್ದಲ್ಲಿ ನಿಮ್ಮ ಎಲ್ಲಾ ಒಳ್ಳೆಯ ಸ್ನೇಹಿತರನ್ನು ಆಮಂತ್ರಿಸಿ ನಿಮ್ಮನ್ನು ಅಸ್ತುಷ್ಟಗೊಳಿಸುವ ಬಹಳಷ್ಟು ಜನರಿರುತ್ತಾರೆ.

## ಜಿಲ್ಲಾಧಿಕಾರಿಗಳು ಯಾರ ಒತ್ತಡಕ್ಕೂ ಮಣಿಯದೆ ಡಿಜೆ ನಿಷೇಧವನ್ನು ಹಿಂಪಡೆಯ ಬಾರದು.



**ದಾವಣಗೆರೆ:** ಗಣೇಶೋತ್ಸವ ಹಾಗೂ ಈದ್ ಮಿಲಾದ್ ಆಚರಣೆಗಳಿಗೆ ಜಿಲ್ಲಾಧಿಕಾರಿಗಳು ಡಿ.ಜೆ. ನಿಷೇಧ ಮಾಡಿರೋದು ಹಿರಿಯ ನಾಗರಿಕರಿಗೆ, ಸಾರ್ವಜನಿಕರಿಗೆ, ಸಂತಸ ತಂದಿದೆ ಕಾರಣ ಡಿ.ಜೆ. ಇಲ್ಲದೆ ಗಣೇಶನ ಮೆರವಣಿಗೆಯನ್ನು ಸಾಂಪ್ರದಾಯಕವಾಗಿ ಡೊಳ್ಳು, ವೀರಗಾಸೆ, ಕೆಲವೊಂದು ಜಾನಪದ ಶೈಲಿಗಳಲ್ಲಿ ತೆರಳಿ ಗಣೇಶನ ವಿಸರ್ಜನೆ ಮಾಡಿ ಸಂತಸದಿಂದ ಶಾಂತಿಯುತವಾಗಿ ನಡೆಯುತ್ತಿದೆ, ಗಣೇಶನ ಹಬ್ಬ ಅಂದರೆ ಬರೀ ಡಿ, ಜೆ. ಮಾತ್ರವಲ್ಲ ಸಾಂಪ್ರದಾಯಿಕವಾಗಿ ನಡೆದುಕೊಂಡ ಬಂದ ಅನೇಕ ಕಲೆಗಳು ಪ್ರದರ್ಶನ ಮೆರವಣಿಗೆ ಮೂಲಕ ಇಂದು ಅನೇಕ ಜಾನಪದ ಕಲಾವಿದರಿಗೆ ತಮ್ಮ ಕಲೆಯನ್ನು ತೋರ್ಪಡಿಸಲು ಮತ್ತೆ ಅವಕಾಶ ಕಲ್ಪಿಸಿದಂತಾಗಿದೆ, ಹಾಗಾಗಿ ಇನ್ನು 11 ದಿನ, 15 ದಿನ, 21 ದಿನ, ಗಣೇಶನ ವಿಸರ್ಜನಾ ಮೆರವಣಿಗೆ ಇದವುದರಿಂದ ಯಾರ ಒತ್ತಡಕ್ಕು ಮಣಿಯದೆ ಇಷ್ಟು ದಿನ ಡಿ.ಜೆ. ಗೆ ನೀಡಿದ ಅವಕಾಶವನ್ನು ಇನ್ನು ಯಾರಿಗೂ ನೀಡದೆ ಡಿ.ಜೆ. ಇಲ್ಲದೆ ಈ ಬಾರಿ ಗಣೇಶೋತ್ಸವ ಆಚರಣೆ ಯಶಸ್ವಿಯಾಗಲು ಜಿಲ್ಲಾಧಿಕಾರಿಗಳು ಡಿ. ಜೆ. ನಿಷೇಧವನ್ನು ಹಿಂಪಡೆಯ ಬಾರದೆಂದು ಈ ಮೂಲಕ ವಿನಂತಿಸಲಾಯಿತು. ಈ ಸಂದರ್ಭದಲ್ಲಿ ಹಿಮಾಲಯನ್ ಅಡ್ವೆಂಚರ್ ಅಂಡ್ ನೇಚರ್ ಅಕಾಡೆಮಿಯ ಅಧ್ಯಕ್ಷರಾದ ಎಸ್ ರಾಜಶೇಖರ್, ಕಾರ್ಯದರ್ಶಿ ಎನ್. ಕೆ.ಕೊಟ್ರೇಶ್, ನಿರ್ದೇಶಕರಾದ ಬಿ.ಮಂಜುನಾಥ್, ಪ್ರಕಾಶ್, ಇನ್ನು ಮುಂತಾದವರಿದ್ದರು.

## ಬಿ. ಪಿ. ಹರೀಶ್ ನಾಲಿಗೆ ಮೇಲೆ ಹಿಡಿತವಿಟ್ಟುಕೊಂಡು ಮಾತನಾಡಲಿ



**ದಾವಣಗೆರೆ:** ತನ್ನದ ಪಕ್ಷದ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಅವರ ಬಗ್ಗೆಯೇ ಭ್ರಷ್ಟಾಚಾರಿ, ಅಸಮರ್ಥ ಎಂಬ ಹೇಳಿಕೆ ನೀಡಿದ್ದ ಶಾಸಕ ಬಿ. ಪಿ. ಹರೀಶ್ ಅವರು ಶಾಮನೂರು ಶಿವಶಂಕರಪ್ಪರ ಮನೆತನದ ಬಗ್ಗೆ ನಾಲಗೆ ಮೇಲೆ ಹಿಡಿತವಿಟ್ಟುಕೊಂಡು ಮಾತನಾಡಬೇಕು ಎಂದು ಜವಾಹರ್ ಬಾಲ್ ಮಂಚ್ ಜಿಲ್ಲಾಧ್ಯಕ್ಷ ಮೊಹಮ್ಮದ್ ಜಿಕ್ರಿಯಾ ಕಿಡಿಕಾರಿದ್ದಾರೆ.

ಶಾಮನೂರು ಮನೆತನದವರ ಪೊಮೆರೇನಿಯನ್ ನಾಯಿಗಳ ರೀತಿ ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಮಹಾನಗರ ಪಾಲಿಕೆ ಆಯುಕ್ತೆ ಸೇರಿದಂತೆ ಅಧಿಕಾರಿಗಳು ನಡೆದುಕೊಳ್ಳುತ್ತಾರೆ ಎಂಬ ಮಾತು ಹೇಳುವ ಮೂಲಕ ತಮ್ಮ ನೈತಿಕ ಮಹಾನಗರ ಪಾಲಿಕೆ ಆಯುಕ್ತೆ ಸೇರಿದಂತೆ ಅಧಿಕಾರಿಗಳು ನಡೆದುಕೊಳ್ಳುತ್ತಾರೆ ಎಂಬ ಮಾತು ಹೇಳುವ ಮೂಲಕ ತಮ್ಮ ನೈತಿಕ ಅಧಃಪತನವನ್ನೇ ತಾವೇ ತೋರ್ಪಡಿಸಿಕೊಂಡಿದ್ದಾರೆ. ಇಂಥ ಜನಪ್ರತಿನಿಧಿಗಳಿಂದ ಜನರು ನಿರೀಕ್ಷಿಸುವುದಾದರೂ ಏನು ಎಂದು ಪ್ರಶ್ನಿಸಿದ್ದಾರೆ.

ಬಿಜೆಪಿ, ಕಾಂಗ್ರೆಸ್, ಕೆಜೆಪಿ ಪಕ್ಷಗಳಿಗೆ ಹೋಗಿ ಬಂದಿರುವ ಇದೇ ಬಿ. ಪಿ. ಹರೀಶ್ ಪಕ್ಷ ನಿಷ್ಠೆ ಬಗ್ಗೆ ಮಾತನಾಡುತ್ತಾರೆ. ಬಿ. ವೈ. ವಿಜಯೇಂದ್ರ ಬಗ್ಗೆ ಏನೆಲ್ಲಾ ಮಾತನಾಡಿದ್ದಾರೆ ಎಂಬುದು ಕರ್ನಾಟಕವೇ ನೋಡಿದೆ. ಒಂದು ಕಾಲದಲ್ಲಿ ಜಿ. ಎಂ. ಸಿದ್ದೇಶ್ವರ ವಿರೋಧಿ ಬಣದಲ್ಲಿದ್ದ ಬಿ. ಪಿ. ಹರೀಶ್ ಇಂದು ಅವರ ವಕ್ತಾರರಂತೆ ವರ್ತನೆ ಮಾಡುತ್ತಿದ್ದಾರೆ. ಶಾಮನೂರು ಶಿವಶಂಕರಪ್ಪರ ರಾಜಕೀಯ ಏಳಿಗೆ ಸಹಿಸದೇ, ಅಭಿವೃದ್ಧಿ ಕಾರ್ಯಗಳಿಂದ ಹೊಟ್ಟೆ ಉರಿಯಿಂದ ಹೇಳಿಕೆ ನೀಡುತ್ತಿರುವ ಬಿ. ಪಿ. ಹರೀಶ್ ರಾಜ್ಯ ಸರ್ಕಾರದ ಜನಪ್ರಿಯತೆಯಿಂದ ಮಾನಸಿಕ ಸ್ಥಿಮಿತ ಕಳೆದುಕೊಂಡವರಂತೆ ವರ್ತಿಸುತ್ತಿರುವುದು ಶಾಸಕರಿಗೆ ಶೋಭೆ ತರುವಂಥದ್ದಲ್ಲ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಶೇಕಡಾ 40ರಷ್ಟು ಕಮೀಷನ್ ಪಡೆದ ಸರ್ಕಾರ ಎಂಬ ಕುಖ್ಯಾತಿ ಗಳಿಸಿದ್ದನ್ನು ಮರೆತಿದ್ದಾರೆ. ಸ್ವತಃ ಅಮಿತ್ ಶಾ ಅವರೇ ದೇಶದ ಕಂಡ ಮಹಾನ್ ಭ್ರಷ್ಟ ಸಿಎಂ ಬಿ. ಎಸ್. ಯಡಿಯೂರಪ್ಪ ಎಂದು ಹೇಳಿದ್ದು ನೆನಪಿಲ್ಲವೇ. ತನಗೆ ರಾಜಕೀಯದಲ್ಲಿ ಗೆಲ್ಲಲು ಕಾರಣರಾದ ಯಡಿಯೂರಪ್ಪರ ವಿರುದ್ಧ ಮಾತನಾಡಿರುವ ಹರೀಶ್ ಗೆ ಕೃತಜ್ಞತೆ ಅನ್ನೋದೇ ಇಲ್ಲ. ಮುಂದಾದರೂ ಶಾಮನೂರು ಶಿವಶಂಕರಪ್ಪರ ಕುಟುಂಬದ ಬಗ್ಗೆ ಮಾತನಾಡುವಾಗ ಎಚ್ಚರ ವಹಿಸಬೇಕು ಎಂದು ಮೊಹಮ್ಮದ್ ಜಿಕ್ರಿಯಾ ಅವರು ಪತ್ರಿಕಾ ಹೇಳಿಕೆಯಲ್ಲಿ ಎಚ್ಚರಿಕೆ ನೀಡಿದ್ದಾರೆ.

## ಸಾಹಿತಿ ಬಾನು ಮುಷ್ತಾಕ್ ಅವರಿಗೆ ದಸರಾ ಉದ್ಘಾಟನೆಗೆ ಆಹ್ವಾನ

**ಹಾಸನ :** ನಾಡಹಬ್ಬ ಮೈಸೂರುದಸರಾ ಉದ್ಘಾಟಕರಾಗಿಆಯ್ಕೆಯಾಗಿರುವಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ವಿಜೇತರಾದ ಸಾಹಿತಿ ಬಾನು ಮುಷ್ತಾಕ್ಅವರನ್ನು ಸರ್ಕಾರದ ಪರವಾಗಿ ಮೈಸೂರು ಜಿಲ್ಲಾಡಳಿತದ ವತಿಯಿಂದಆಹ್ವಾನಿಸಲಾಯಿತು.

ವ್ ೖ ಸ್ ೂ ರಿ ನ್ ಜಿ ಲ್ಲಾ ಧಿ ಕಾ ರಿ ಲಕ್ಷ್ಮೀಕಾಂತರೆಡ್ಡಿಅವರುಇಂದು ಹಾಸನ ನಗರದಅಮೀರ್ ಮೊಹಲ್ಲದಲ್ಲಿರುವ ಸಾಹಿತಿ ಬಾನು ಮುಷ್ತಾಕ್ಅವರ ಮನೆಗೆ ಭೇಟಿ ನೀಡಿ ಮೈಸೂರು ಪೇಟತೊಡಿಸಿ, ಶಾಲು ಹೊದಿಸಿ ದಸರಾಕಾರ್ಯಕ್ರಮದಆಹ್ವಾನ ಪತ್ರಿಕೆ ನೀಡುವ ಮೂಲಕ ಅಧಿಕೃತವಾಗಿ ಈ ಬಾರಿಯದಸರಾಉದ್ಘಾಟನೆಗೆ ಆಹ್ವಾನಿಸಿದರು.

ಇದೇ ವೇಳೆ ಮೈಸೂರುಅಪರಜಿಲ್ಲಾಧಿಕಾರಿ



ಶಿವರಾಜ್, ಚಾಮುಂಡಿದೇವಾಲಯಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ರೂಪ, ಜಿ.ಪಂ. ಸಿಇಒ ಯುಕೇಶ್‌ಕುಮಾರ್, ಮೈಸೂರು ಮಹಾನಗರ ಪಾಲಿಕೆ ಅಯುಕ್ತರಾದತನ್ವೀರ್ ಆಶಿಫ್ ಮತ್ತಿತರರು ಉಪಸ್ಥಿತರಿದ್ದರು.

## ರಸ್ತೆ ಕಾಮಗಾರಿಗೆ ಶಾಸಕರಿಂದ ಗುದ್ದಲಿ ಪೂಜೆ

**ಹಾಸನ :** ಆಡುವಳ್ಳಿ ಬಡಾವಣೆಯಲ್ಲಿರಸ್ತೆ ಸಂಪೂರ್ಣ ಹಾಳಾಗಿದ್ದ ಹಿನ್ನೆಲೆಯಲ್ಲಿ ಬಡಾವಣೆಜನರ ಮನವಿಗೆ ಸ್ಪಂದಿಸಿ ಮಹಾನಗರ ಪಾಲಿಕೆ ವತಿಯಿಂದ 50 ಲಕ್ಷ ವೆಚ್ಚದಲ್ಲಿರಸ್ತೆಕಾವ ುಗಾರಿಆರಂಭಿಸಲಾಗಿದೆಅತೀ ಶೀಘ್ರವಾಗಿ ಕಾಮಗಾರಿ ಮುಗಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕುಎಂದು ಸೂಚನೆ ನೀಡಲಾಗಿದೆಎಂದುಶಾಸಕರಾದ ಸ್ವರೂಪ್ ಪ್ರಕಾಶ್ ತಿಳಿಸಿದ್ದಾರೆ.ನಗರದ ಆಡುವಳ್ಳಿಯಲ್ಲಿ 50 ಲಕ್ಷ ವೆಚ್ಚದರಸ್ತೆಕಾಮಗಾರಿಗೆಗುದ್ದಲಿ ಪೂಜೆ ನೆರವೇರಿಸಿನಂತರ ಮಾನತಾಡಿದಅವರುರಸ್ತೆ ಹಾಳಾಗಿರುವ ಕಾರಣ ರಸ್ತೆಗಳಲ್ಲಿ ಅಪಘಾತ ಹೆಚ್ಚಾಗಿವೆ ಅತೀ ಶೀಘ್ರವಾಗಿ ಗುಣಮಟ್ಟದಕಾಮಗಾರಿ ಮಾಡಲುತಿಳಿಸಲಾಗಿದೆ. ಮುಂದಿನ ದಿನಗಳಲ್ಲಿ ಇನ್ನು ದುರಸ್ಥಿ ಹಂತದಲ್ಲಿಇರುವ ಕಾಮಗಾರಿಗಳನ್ನು ಮಾಡಲು ಯೋಜನೆ ರೂಪಿಸಲಾಗಿದ 'ಎಂದರು.

ಈ ಸಂದರ್ಭದಲ್ಲಿ ವಾರ್ಡ್ ಸದಸ್ಯ ಮಂಜುನಾಥ್ ಮತ್ತಿತರು ಹಾಜರಿದ್ದರು.

## ಪ್ರಶಸ್ತಿ ಆಯ್ಕೆಗಾಗಿ ಅರ್ಜಿ

**ಶಿವಮೊಗ್ಗ;** ಶಿವಮೊಗ್ಗ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವು ಪ್ರತಿ ವರ್ಷದಂತೆ ಈ ವರ್ಷವೂ ಕೃಷಿಮೇಳ–2025 ರಲ್ಲಿ "ಜಿಲ್ಲಾ ಮಟ್ಟದ ಪ್ರಗತಿಪರ ರೈತ/ರೈತ ಮಹಿಳೆ" ಪ್ರಶಸ್ತಿಯನ್ನು ನೀಡಿ ಸನ್ಮಾನಿಸಲು ತೀರ್ಮಾನಿಸಲಾಗಿದೆ. ಆಸಕ್ತ ರೈತ/ರೈತ ಮಹಿಳೆಯರಿಂದ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಿದೆ.

ಶಿವಮೊಗ್ಗ ಜಿಲ್ಲೆಯ ಆಸಕ್ತರ ರೈತ/ರೈತ ಮಹಿಳೆಯರು ಅರ್ಜಿಗಳನ್ನು ಕೃಷಿ ವಿಜ್ಞಾನ ಕೇಂದ್ರ, ನವುಲೆ, ಶಿವಮೊಗ್ಗ ಅಥವಾ ಕೃಷಿ ಇಲಾಖೆ, ಓ.ಟಿ.ರಸ್ತೆ, ಶಿವಮೊಗ್ಗ ಇಲ್ಲಿ ಖುದ್ದಾಗಿ ಅಥವಾ ಣಚಿಖ.ಜಜಣ.ಟಿ ವೆಬ್‌ಸೈಟ್ ಮೂಲಕ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು, ಭರ್ತಿ ಮಾಡಿದ ಅರ್ಜಿಯೊಂದಿಗೆ ಪಹಣಿಯನ್ನು ಲಗತ್ತಿಸಿ ಸೆ. 15 ರೊಳಗೆ ಸಲ್ಲಿಸುವುದು. ಆಯ್ಕೆಯಾದ ರೈತರಿಗೆ ಪ್ರಶಸ್ತಿ ಪತ್ರ ಹಾಗೂ ನಗದು ಪುರಸ್ಕಾರ ನೀಡಲಾಗುವುದು.

## ಅರ್ಜಿ ಆಹ್ವಾನ

**ಶಿವಮೊಗ್ಗ;** ವಿಕಲಚೇತನರ ದಿನಾಚರಣೆ ಅಂಗವಾಗಿ ರಾಜ್ಯ ಸರ್ಕಾರವು 2025–26ನೇ ಸಾಲಿಗೆ ವಿಕಲಚೇತನರ ಕಲ್ಯಾಣ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ/ಸಲ್ಲಿಸುತ್ತಿರುವ ವ್ಯಕ್ತಿ, ಸಂಸ್ಥೆ ಹಾಗೂ ವಿಶೇಷ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಅರ್ಜಿಯನ್ನು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಚೇರಿಯಿಂದ ಪಡೆದು, ಅರ್ಜಿದಾರರ/ವ್ಯಕ್ತಿಗಳ/ಸಮಸ್ಥೆಗಳ ಸ್ವವಿವರ ಹಾಗೂ ಸಾಧನೆಗಳ ಸಾರಾಂಶ, ಜಿಲ್ಲೆ, ರಾಜ್ಯ, ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಮಾಡಿದ ಸಾಧನೆಗಳ ಪ್ರಮಾಣ ಪತ್ರ, ಹಾಗೂ ಇದುವರೆಗೂ ರಾಜ್ಯ ಪ್ರಶಸ್ತಿಯನ್ನು ಪಡೆಯದೇ ಇರುವ ಬಗ್ಗೆ ದೃಢೀಕರಣದ ಪೂರಕ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಅ. 15 ರೊಳಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಬಿಎಸ್‌ಎನ್‌ಎಲ್ ಕಚೇರಿ ಹತ್ತಿರ, ಸಾಗರ ರಸ್ತೆ, ಶಿವಮೊಗ್ಗ ಇಲ್ಲಿಗೆ ಸಲ್ಲಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಹೆಚ್ಚಿನ ಮಾಹಿತಿಗೆ ಕಚೇರಿಯನ್ನು ಖುದ್ದಾಗಿ ದೂ.ಸಂ.: 08182–251676 ಗಳನ್ನು ಸಂಪರ್ಕಿಸುವುದು

## ನಿಧನ ಸುದ್ದಿಗಳು

### ಹಿರೇಮೇಗಳಗೇರಿ ಬೆಣ್ಣೆಹಳ್ಳಿ ಬಸವರಾಜಪ್ಪ ನಿಧನ

**ಹರಪನಹಳ್ಳಿ:** ಹಿರೇಮೇಗಳಗೇರಿ ಗ್ರಾಮದ ವಾಸಿ ಬೆಣ್ಣೆಹಳ್ಳಿ ಬಸವರಾಜಪ್ಪ (78) 2 2 3.09.20250 ಬುಧವಾರ ಸಂಜೆ 7.15ಕ್ಕೆ ನಿಧನರಾದರು. ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿರುವ ದಿನಾಂಕ ಮೃತರ ಅಂತ್ಯಕ್ರಿಯೆಯು 4.09.2025ರ ಗುರುವಾರ ಮಧ್ಯಾಹ್ನ 1ಕ್ಕೆ ಹಿರೇಮೆಗಳಗೆರೆ ಗ್ರಾಮದ ಮೃತರ ಸ್ವಂತ ಜಮೀನಿನಲ್ಲಿ ನೆರವೇರಿದೆ.

## ಮಾನ್ಯ ಭೂ ದಾಖಲೆಗಳ ಉಪನಿರ್ದೇಶಕರ ನ್ಯಾಯಾಲಯ ದಾವಣಗೆರೆ

**ಭೂ.ಉ.ನಿ.ಆರ್ ಸಂಖ್ಯೆ 122/2024–25**

**ಅಪೀಲುದಾರರು: 1)** ಬಿ ಟಿ.ಶ್ರೀನಿವಾಸ ಬಿನ್ ಲೇಟ್ ಬಿ ತಿಪ್ಪೇಸ್ವಾಮಿ, ವಯಸ್ಕರರು ಮತ್ತು ಇತರರು ವಾಸ–ದಾವಣಗೆರೆ.

**ವಿರುದ್ಧ**

**ಎದುರುದಾರರು:** ಭೂ ದಾಖಲೆಗಳ ಸಹಾಯಕ ನಿರ್ದೇಶಕರು ದಾವಣಗೆರೆ ತಾಲೂಕು ಮತ್ತು ಇತರರು

**ಎದುರುದಾರರ ನಂ** 7)ಸಿ) ಮಂಜುಳಾ ಬಿನ್ ಲೇಟ್ ಬಿ ವೆಂಕಟೇಶ್, ವಯಸ್ಕರರು.
**ಎದುರುದಾರರ ನಂ** 08) ಹಮೀದಬಾನು ಬಿನ್ ಲೇಟ್ ಸೈಯದ್ ಬುಡೇನ್ ಸಾಬ್, ವಯಸ್ಕರರು.
**ಎದುರುದಾರರ ನಂ** 09) ಸೈಯದ್ ಇಮ್ತಿಯಾಜ್ ಬಿನ್ ಲೇಟ್ ಸೈಯದ್ ಬುಡೇನ್ ಸಾಬ್, ವಯಸ್ಕರರು.
**ಎದುರುದಾರರ ನಂ** 10) ಸೈಯದ್ ಸಲೀಮ್ ಬಿನ್ ಲೇಟ್ ಸೈಯದ್ ಬುಡೇನ್ ಸಾಬ್, ವಯಸ್ಕರರು.
**ಎದುರುದಾರರ ನಂ** 11) ಸೈಯದ್ ಶಫೀ ಬಿನ್ ಲೇಟ್ ಸೈಯದ್ ಬುಡೇನ್ ಸಾಬ್, ವಯಸ್ಕರರು.
**ಎದುರುದಾರರ ನಂ** 12) ಸಾಜಿದಾ ಬಾನು ಬಿನ್ ಲೇಟ್ ಸೈಯದ್ ಬುಡೇನ್ ಸಾಬ್, ವಯಸ್ಕರರು.

**ಸಿ. ಪಿ ಸಿ ಆದೇಶ 5 ನಿಯಮ 20ರ ಅಡಿಯಲ್ಲಿ ನೀಡಲಾದ ಪ್ರಕಟಣಾ ನೋಟೀಸ್.**

ಮೇಲ್ಕಂಡ ಅಪೀಲುದಾರರು ಘನ ನ್ಯಾಯಾಲಯದಲ್ಲಿ ಪೋಡುಗಳನ್ನು ರದ್ದುಪಡಿಸಿ ಹೊಸ ಪೋಡುಗಳನ್ನು ಮಾಡಿಕೊಡುವಂತೆ ಸದರಿ ಮೇಲ್ಕಂಡ ಪ್ರಕರಣವನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಕರಣದಲ್ಲಿ 7(ಸಿ), 8, 9, 10, 11 ಮತ್ತು 12 ನೇ ಎದರುದಾರರು ನಿಮ್ಮ ತಕರಾರು ಏನಾದರೂ ಇದ್ದಲ್ಲಿ ಕಾರಣ ಹಾಜರಾತಿಗಾಗಿ ದಿನಾಂಕ:18/09/2025 ರಂದು ಮಧ್ಯಾಹ್ನ 03:00 ಘಂಟೆಗೆ ನೀವು ಖುದ್ದಾಗಿ ಅಥವಾ ವಕೀಲರ ಮುಖಾಂತರವಾಗಲೀ ಪ್ರಕರಣದಲ್ಲಿ ಹಾಜರಿದ್ದು ತಕರಾರು ಇದ್ದಲ್ಲಿ ಸಲ್ಲಿಸಬಹುದು. ತಪ್ಪಿದಲ್ಲಿ ಸದರಿ ಪ್ರಕರಣವನ್ನು ಏಕಪಕ್ಷೀಯ ತೀರ್ಮಾನ ತೆಗೆದುಕೊಳ್ಳಲಾಗುವುದು.

**ಪೆಡ್ಯೂಲ್:**

ದಾವಣಗೆರೆ ಜಿಲ್ಲೆ, ದಾವಣಗೆರೆ ತಾಲೂಕು, ಕಸಬಾ ಹೋಬಳಿ, ದೊಡ್ಡಬಾತಿ ಗ್ರಾಮದ, ರಿ.ಸ. ನಂ 96/2ಎ, 2ಬಿ1, ಬಿ2, 2ಬಿ3, 2ಬಿ4, 5 ಮತ್ತು 6ರ ಹಿಸ್ಸೆಯ ಪೋಡುಗಳನ್ನು ರದ್ದುಪಡಿಸುವ ಕುರಿತಂತೆ

ನ್ಯಾಯಾಲಯದ ಮೊಹರು ಹಾಗೂ ಸಹಿಯೊಂದಿಗೆ ದಿನಾಂಕ:04.09.2025 ರಂದು ಕೊಡಲ್ಪಟ್ಟಿದೆ.

ನ್ಯಾಯಾಲಯದ ಆದೇಶದ ಮೇರೆಗೆ,

ಸಹಿ/–
ಶಿರಸ್ತೇದಾರರು/ಸೂಪರಿಡೆಂಟ್
ಡಿ.ಡಿ.ಎಲ್ ಆರ್ ನ್ಯಾಯಾಲಯ

## ಮಾನ್ಯ ಗೌರವನ್ವಿತ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ ಜೆ.ಎಮ್ ನ್ಯಾಯಾಲಯ ದಾವಣಗೆರೆ

**ಸಿ.ಆರ್.ಮಿಸ್. ನಂ.452 /2025**

**ಅರ್ಜಿದಾರರು :** ಶ್ರೀಮತಿ ಲತಾ ಕೋಂ ಕೃಷ್ಣಚಾರಿ ವಯಸ್ಸು 55 ವರ್ಷ ವಾಸ: ಹೆಚ್ ಕಲ್ಪನಹಳ್ಳಿ, ದಾವಣಗೆರೆ ತಾ ಮತ್ತು ಜಿಲ್ಲೆ.

**–ವಿರುದ್ಧ–**

**ಎದುರುದಾರರು :** ಜನನ ಮತ್ತು ಮರಣ ನೋಂದಣಾಧಿಕಾರಿಗಳು ತಹಶೀಲ್ದಾರ್ ಕಛೇರಿ, ದಾವಣಗೆರೆ

### ಸಾರ್ವಜನಿಕ ಪತ್ರಿಕಾ ಪ್ರಕಟಣಾ ನೋಟಿಸ್

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರ ಮಾವ ಶ್ರೀ ಚೆನ್ನಚಾರಿ ಬಿನ್ ಲೇಟ್ ಕೇಶವಚಾರಿ ಇವರು ದಿನಾಂಕ: 27–09–2004 ರಂದು, ದಾವಣಗೆರೆ ತಾಲ್ಲುಕು, ಹೆಚ್ ಕಲ್ಪನಹಳ್ಳಿ ಗ್ರಾಮದ, ಸ್ವಗೃಹದಲ್ಲಿ ವಯೋಮರಣ ಹೊಂದಿರುವ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ.

ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ: 4/10/25 ರಂದು ಬೆಳಗ್ಗೆ 11=00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು, ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ ತಮ್ಮ ಪರ ವಕೀಲರ ಮುಖಾಂತರವಾಗಲೀ ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ,

ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:4/9/25.ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/–
ಅರ್ಜಿದಾರರ ಪರ ವಕೀಲರು
(ಶ್ರೀಅರುಣ್ ಕುಮಾರ್ ಎಮ್)

ಸಹಿ/–
ಶಿರಸ್ತೇದಾರರು
ಮಾನ್ಯ ಪ್ರಧಾನ ಸಿವಿಲ್ ಮತ್ತು,
ಸಿ.ಜೆ.ಎಮ್ ನ್ಯಾಯಾಲಯ
ದಾವಣಗೆರೆ

## ಮಾನ್ಯ ಸಿವಿಲ್ ನ್ಯಾಯಾಧೀಶರು ಮತ್ತುಜೆ. ಎಂ.ಎಫ್.ಸಿ ನ್ಯಾಯಾಲಯ, ಜಗಳೂರು

**ಸಿ.ಮಿಸ್ ನಂ:858/2025**

**ಅರ್ಜಿದಾರರು**:) 1) ಶ್ರೀ ಲಿಂಗಶೆಟ್ಟಿ ಬಿನ್ ಲೇಟ್ ವೈ ರುದ್ರಪ್ಪಶೆಟ್ಟಿ, ವಯಸ್ಸು 81 ವರ್ಷ, ಜಿರಾಯ್ತಿ, 3ನೇ ಕ್ರಾಸ್, ಜೆ.ಸಿ.ಆರ್. ಬಡಾವಣೆ, ಚಿತ್ರದುರ್ಗ, ಹಾಲಿ ವಾಸ : ದೊಣ್ಣೆಹಳ್ಳಿ ಗ್ರಾಮ, ಜಗಳೂರು ತಾಲ್ಲೂಕು,2. ಶ್ರೀಮತಿ ಅಂಜನಾಕ್ಷಿ ಕೋಂ ಎಂ.ಆರ್. ಸಂಜೀವಶೆಟ್ಟಿ, ವಯಸ್ಸು 75 ವರ್ಷ, ಮನೆಕೆಲಸ, ಮಾಲಸಾನಿ ನಿಲಯ, ಮೆದೇಹಳ್ಳಿ ರಸ್ತೆ, ಚಿತ್ರದುರ್ಗ ನಗರ, ಚಿತ್ರದುರ್ಗ ಜಿಲ್ಲೆ.

**ವಿರುದ್ಧ**

**ಎದುರುದಾರರು:** ತಹಶೀಲ್ದಾರ್‌ರವರು ಜಗಳೂರು ತಾಲ್ಲೂಕು ಜಗಳೂರು

### ಸಾರ್ವಜನಿಕನೋಟಿಸ್


ಮೇಲ್ಕಂಡ ಪ್ರಕರಣದಲ್ಲಿನ 1 ಮತ್ತು 2ನೇ ಅರ್ಜಿದಾರರ ತಾಯಿಯವರಾದ ಶ್ರೀಮತಿ ಲಕ್ಷ್ಮೀದೇವಮ್ಮ ಕೋಂ ವೈ. ರುದ್ರಪ್ಪಶೆಟ್ಟಿ, ಇವರು ದಿನಾಂಕ 23–02–1974 ರಂದು ಜಗಳೂರು ತಾಲ್ಲೂಕು, ದೊಣ್ಣೆಹಳ್ಳಿ ಗ್ರಾಮದಲ್ಲಿ ಮರಣ ಹೊಂದಿದ್ದು, ಸದರಿ ದಿನಾಂಕವನ್ನು ಎದುರುದಾರರು ಸಂಬಂಧಪಟ್ಟ ದಾಖಲೆಯಲ್ಲಿ ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರ ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ 13–10–2025 ರಂದು ಬೆಳಿಗ್ಗೆ 11–00 ಗಂಟೆಗೆ ವಿಚಾರಣೆಗಾಗಿ ನಿಗಧಿಪಡಿಸಿದ್ದು, ಅರ್ಜಿದಾರರ ಅರ್ಜಿಗೆ ಯಾರದಾದರೂ ತಕರಾರು ಇದ್ದಲ್ಲಿ ತಾವಾಗಲೀ, ಅಥವಾ ತಮ್ಮ ಪರ ವಕೀಲರ ಮುಖಾಂತರವಾಗಲೀ, ನಿಗಧಿತ ದಿನಾಂಕದ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲನ್ನು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:30.08.2025ರಂದು ನೀಡಲಾಗಿದೆ.

**ನ್ಯಾಯಾಲಯದ ಆದೇಶದ ಮೇರೆಗೆ**

**ಸಹಿ/–**
**ಅರ್ಜಿದಾರರ ಪರ ವಕೀಲರು**
**V ತಿಪ್ಪೇಸ್ವಾಮಿ ಮಹಾಂತೇಶ**
**ಜಿ.ಟಿ**

**ಸಹಿ/–**
**ಶಿರಸ್ತೇದಾರರು**
ಸಿವಿಲ್ ಮತ್ತು ಜೆ.ಎಂ.
ಎಫ್.ಸಿ ನ್ಯಾಯಾಲಯ
ಜಗಳೂರು

# ಜಿಎಸ್‌ಟಿ ಸರಳೀಕರಣ: ಎಚ್‌ಡಿಕೆ ಹರ್ಷ




**ಬೆಂಗಳೂರು:** ಜಿಎಸ್‌ಟಿ ವ್ಯವಸ್ಥೆಯನ್ನು ಸರಳಗೊಳಿಸಿ 2 ಸ್ಲ್ಯಾಬ್‌ಗಳ ಜಿಎಸ್‌ಟಿಯನ್ನು ಜಾರಿಗೊಳಿಸುವ ಕೇಂದ್ರ ಸರ್ಕಾರದ ತೀರ್ಮಾನಕ್ಕೆ ಹರ್ಷ ವ್ಯಕ್ತಪಡಿಸಿರುವ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ, ವ್ಯವಸ್ಥೆಯನ್ನು ಸರಳಗೊಳಿಸಿ ಮತ್ತಷ್ಟು ಸುಲಭಗೊಳಿಸುವ ಮತ್ತು ಭಾರತದಾದ್ಯಂತ ಪ್ರತಿ ಮನೆಗೂ ಸಂತೋಷ ಉಂಟು ಮಾಡುವ ನೈಜ ಜನ ಕೇಂದ್ರಿತ ಸುಧಾರಣೆ ಇದಾಗಿದೆ ಎಂದಿದ್ದಾರೆ.

ಕೇಂದ್ರದ ನರೇಂದ್ರಮೋದಿ ನೇತೃತ್ವದ ಸರ್ಕಾರ ಜಿಎಸ್‌ಟಿ ವ್ಯವಸ್ಥೆಯಲ್ಲಿ ಕ್ರಾಂತಿಕಾರಿ ಬದಲಾವಣೆಗಳನ್ನು ಜಾರಿಗೆ ತಂದಿದ್ದು, ರಾಷ್ಟ್ರಕ್ಕೆ ಐತಿಹಾಸಿಕ ದೀಪಾವಳಿ ಉಡುಗೊರೆ ನೀಡಿದೆ ಎಂದು ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಧಾನಿ ಮೋದಿ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಯನ್ನು ಅನುಮೋದಿಸಿದೆ. ಇದು ಜನಜೀವನ ಸುಲಭಗೊಳಿಸುವುದು ಮತ್ತು ಆತ್ಮನಿರ್ಭರ್ ಭಾರತ್‌ನ್ನು ಬಲಪಡಿಸುವ ಒಂದು ಪರಿವರ್ತನಾತ್ಮಕ ಹೆಜ್ಜೆಯಾಗಿದೆ ಎಂದು ಅವರು ಬಣ್ಣಿಸಿದ್ದಾರೆ.

ಜಿಎಸ್‌ಟಿ ಈಗ ಕೇವಲ 2 ಸ್ಲ್ಯಾಬ್ ಹೊಂದಿದ್ದು, ದೈನಂದಿನ ಅಗತ್ಯ ವಸ್ತುಗಳು ಆರೋಗ್ಯ ರಕ್ಷಣೆ, ಶಿಕ್ಷಣ, ಕೃಷಿ ಮತ್ತು ವಾಹನಗಳೂ ಸಹ ಸುಲಭವಾಗಿ ಕೈಗೆಟಕುವಂತಾಗುತ್ತವೆ. ಜತೆಗೆ ಉದ್ಯಮಗಳು ಹಾಗೂ ಸಣ್ಣ ಮತ್ತು ಮಧ್ಯಮ ಗಾತ್ರದ ಕೈಗಾರಿಕೆಗಳು ಭಾರಿ ಉತ್ತೇಜನವನ್ನೂ ಪಡೆಯುತ್ತವೆ ಎಂದು ಅವರು ತಿಳಿಸಿದ್ದಾರೆ.

# ಎನ್‌ಐಎಗೆ ಒಪ್ಪಿಸಲು ಶಾಗೆ ಮಠಾಧೀಶರ ಮನವಿ



**ನವದೆಹಲಿ:** ದೇಶಾದ್ಯಂತ ಚರ್ಚೆ ಹುಟ್ಟು ಹಾಕಿದ ಧರ್ಮಸ್ಥಳ ಪ್ರಕರಣದ ತನಿಖೆಯನ್ನು ಎನ್‌ಐಎಗೆ ಹಸ್ತಾಂತರಿಸಬೇಕೆಂಬ ಬೇಡಿಕೆ ಹೆಚ್ಚುತ್ತಿದೆ.ಈ ಹಿನ್ನೆಲೆಯಲ್ಲಿ ಇದೀಗ ಈಗ ಕರ್ನಾಟಕದ ಸ್ವಾಮೀಜಿಗಳು ದೆಹಲಿಯಲ್ಲಿ ಕೇಂದ್ರ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿದ್ದಾರೆ.

ಯೋಗ ಗುರು ವಚನಾನಂದ ಸ್ವಾಮೀಜಿ ನೇತೃತ್ವದ ಎಂಟು ಮಠಗಳ ಸ್ವಾಮೀಜಿಗಳ ನಿಯೋಗವು ಅವರನ್ನು ಭೇಟಿ ಮಾಡಿ ಈ ಬಗ್ಗೆ ತನಿಖೆ ನಡೆಸುವಂತೆ ವಿನಂತಿಸಿದೆ.

ಏತನ್ಮಧ್ಯೆ, ಸ್ವಾಮೀಜಿಗೆ ಪ್ರತಿಕ್ರಿಯಿಸಿದ ಅಮಿತ್ ಶಾ, ಧರ್ಮಸ್ಥಳ ಪ್ರಕರಣವನ್ನು ಕೇಂದ್ರ ಸಚಿವ ಸಂಪುಟದಲ್ಲಿ ಚರ್ಚಿಸಲಾಗುತ್ತಿದೆ ಮತ್ತು ಅಮಿತ್ ಶಾ ಸ್ವಾಮೀಜಿ ನಿಯೋಗಕ್ಕೆ ಪ್ರತಿಕ್ರಿಯಿಸಿದ್ದಾರೆ. ನಾನು ಎಲ್ಲಾ ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದೇನೆ.

ಸಭೆಯ ನಂತರ ಮುಂದಿನ ನಿರ್ಧಾರ ತೆಗೆದುಕೊಳ್ಳುತ್ತೇವೆ. ಧಾರ್ಮಿಕ ಸ್ಥಳಗಳ ವಿರುದ್ಧ ಅಪಪ್ರಚಾರ ನಿಲ್ಲಿಸಲು ಮತ್ತು ಸಮಾಜದಲ್ಲಿ ಜಾಗೃತಿ ಮೂಡಿಸಲು ಹೊಸ ಕಾನೂನನ್ನು ಜಾರಿಗೆ ತರಲಾಗುವುದು ಎಂದು ಅಮಿತ್ ಶಾ ಸ್ವಾಮೀಜಿಗೆ ಸೂಚಿಸಿದ್ದಾರೆ.

ಬುರುಡೆ ಪ್ರಕರಣದ ಬಗ್ಗೆ ಮಾಹಿತಿ ಪಡೆದ ನಂತರ, ಅಮಿತ್ ಶಾ ಸ್ವಾಮೀಜಿಯಿಂದ ಮಾಹಿತಿ ಪಡೆದಿದ್ದು. ಅಮಿತ್ ಶಾ ಸ್ವಾಮೀಜಿಯಿಂದ ಧರ್ಮಸ್ಥಳ ಬುರುಡೆ ಪ್ರಕರಣದ ಬಗ್ಗೆ ಮಾಹಿತಿ ಸಂಗ್ರಹಿಸಿದ್ದಾರೆ.

ಬಾಹುಬಲಿ ಬೆಟ್ಟದ ಉತ್ಖನನ ಕಾರ್ಯ ನಡೆಯುತ್ತಿದೆ. ಶಬರಿಮಲೆ ಮತ್ತು ತಿರುಪತಿ ನಂತರ, ಈಗ ಧಾರ್ಮಿಕ ಕ್ಷೇತ್ರಸ್ಥಳವನ್ನುಗುರಿಯಾಗಿಸಲಾಗಿದೆ. ಧಾರ್ಮಿಕ ಸ್ಥಳಗಳನ್ನು ಅನುಮಾನಾಸ್ಪದವಾಗಿ ತೋರಿಸುವ ಪಿತೂರಿ ನಡೆದಿದೆ ಎಂದು ಸ್ವಾಮೀಜಿ ಅಮಿತ್ ಶಾ ಅವರಿಗೆ ತಿಳಿಸಿದ್ದಾರೆ.

# ಇಡಿ ಎದುರು ವಿಚಾರಣೆಗೆ ಹಾಜರಾದ ಧವನ್

**ನವದೆಹಲಿ:** ಅಕ್ರಮ ಬೆಟ್ಟಿಂಗ್ ಆಪ್‌ಗೆ ಸಂಬಂಧಿಸಿದ ಹಣ ವರ್ಗಾವಣೆ ತನಿಖೆಗೆ ಸಂಬಂಧಿಸಿದಂತೆ ಭಾರತ ಕ್ರಿಕೆಟ್ ತಂಡದ ಮಾಜಿ ಕ್ರಿಕೆಟಿಗ ಶಿಖರ್ ಧವನ್ ಅವರಿಗೆ ಸಮನ್ಸ್ ಜಾರಿ ಮಾಡಿದೆ.

1 ಎಕ್ಸ್ ಬೆಟ್ ಹೆಸರಿನ "ಅಕ್ರಮ" ಬೆಟ್ಟಿಂಗ್ ಆಪ್‌ಗೆ ಸಂಬಂಧಿಸಿದಂತೆ ಕೇಳಿಬಂದಿರುವ ಅಕ್ರಮ ಹಣ ವರ್ಗಾವಣೆ ಸಂಬಂಧ ತನಿಖೆಗೆ ಹಾಜರಾಗುವಂತೆ ಜಾರಿ ನಿರ್ದೇಶನಾಲಯ ಸೂಚನೆ ನೀಡಿದೆ.

ಕೇಂದ್ರ ತನಿಖಾ ಸಂಸ್ಥೆಯು ಹಣ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ಕ್ರಿಕೆಟಿ ಶಿಖರ್ ಧವನ್ ಅವರ ಹೇಳಿಕೆಯನ್ನು ದಾಖಲಿಸಲಿದ್ದು ಅದರ ಮುಂದುವರಿದ ಭಾಗವಾಗಿ ಜಾರಿ ನಿರ್ದೇಶನಾಲಯ ತನಿಖೆಗೆ ಹಾಜರಾಗುವಂತೆ ಸಮನ್ಸ್ ಜಾರಿ ಮಾಡಿದೆ.ಕೋಟ್ಯಂತರ ರೂಪಾಯಿ ಮೌಲ್ಯದ ಹಲವಾರು ಜನರು ಮತ್ತು ಹೂಡಿಕೆದಾರರನ್ನು ವಂಚಿಸಿದೆ ಅಥವಾ ಭಾರಿ ಪ್ರಮಾಣದ ತೆರಿಗೆಗಳನ್ನು ತಪ್ಪಿಸಿದೆ ಎಂದು ಹೇಳಲಾದ ಅಕ್ರಮ ಬೆಟ್ಟಿಂಗ್ ಆಪ್‌ಗಳನ್ನು ಒಳಗೊಂಡ ಇಂತಹ ಅನೇಕ ಪ್ರಕರಣಗಳನ್ನು ತನಿಖಾ ಸಂಸ್ಥೆ ತನಿಖೆ ನಡೆಸುತ್ತಿದೆ.

ಕಳೆದ ತಿಂಗಳು, ಮಾಜಿ ಕ್ರಿಕೆಟಿಗ ಸುರೇಶ್ ರೈನಾ ಅವರನ್ನು ಜಾರಿ ನಿರ್ದೇಶನಾಲಯ ತನಿಖಾ ಸಂಸ್ಥೆ ಈ ಪ್ರಕರಣದಲ್ಲಿ ಪ್ರಶ್ನಿಸಿತ್ತು. ಇದೀಗ ಮತ್ತೊಬ್ಬ ಮಾಜಿ ಕ್ರಿ-ಕೆಟಿಗ ಶಿಖರ್ ಧವನ್‌ಗೂ ಸಂಕಷ್ಟ ಎದುರಾಗಿದೆ.

# ಅತ್ಯಾಚಾರ ಆರೋಪ, ನಟ ಆಶಿಶ್ ಕಪೂರ್ ಬಂಧನ

**ನವದೆಹಲಿ:** ಕಿರುತೆರೆ ಆಶಿಶ್ ಕಪೂರ್ ಅವರನ್ನು ಅತ್ಯಾಚಾರ ಆರೋಪದ ಮೇಲೆ ದೆಹಲಿ ಪೊಲೀಸರು ಪುಣೆಯಲ್ಲಿ ಬಂಧಿಸಿದ್ದಾರೆ.

ಆಗಸ್ಟ್ ಎರಡನೇ ವಾರದಲ್ಲಿ ಹೌಸ್ ಪಾರ್ಟಿಯಲ್ಲಿ ಕಪೂರ್ ತನ್ನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಸಂತ್ರಸ್ತೆ ಆರೋಪಿಸಿದ್ದಾರೆ. ಪೊಲೀಸರ ಪ್ರಕಾರ, ಸಂತ್ರಸ್ತೆ ಮೊದಲು ಆಶಿಶ್ ಕಪೂರ್ ಅವರನ್ನು ಇನ್‌ಸ್ಟಾಗ್ರಾಮ್ ಮೂಲಕ ಪರಿಚಯವಾಗಿದ್ದಾರೆ.

ಆರಂಭದಲ್ಲಿ, ಎಫ್‌ಐಆರ್ ನಲ್ಲಿ ಆಶಿಶ್ ಕಪೂರ್, ಅವರ ಸ್ನೇಹಿತ, ಸ್ನೇಹಿತನ ಪತ್ನಿ ಮತ್ತು ಇಬ್ಬರು ಅಪರಿಚಿತ ವ್ಯಕ್ತಿಗಳನ್ನು ಹೆಸರಿಸಲಾಗಿತ್ತು. ನಂತರ, ಸಂತ್ರಸ್ತೆ ತನ್ನ ಹೇಳಿಕೆಯನ್ನು ಬದಲಾಯಿಸಿ, ಆಶಿಶ್ ಕಪೂರ್ ಮಾತ್ರ ತನ್ನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಹೇಳಿದ್ದಾರೆ.

ಈ ಘಟನೆಯನ್ನು ವಿಡಿಯೊದಲ್ಲಿ ರೆಕಾರ್ಡ್ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ. ಆದರೆ ಪೊಲೀಸರಿಗೆ ಅಂತಹ ಯಾವುದೇ ವಿಡಿಯೊ ತುಣುಕು ಇನ್ನೂ ಸಿಕ್ಕಿಲ್ಲ.

# ದೆಹಲಿಯಲ್ಲಿ ಜಲ ದಿಗ್ಬಂಧನ:ಜನಜೀವನ ಅಸ್ತವ್ಯಸ್ತ

**ನವದೆಹಲಿ:** ಹತ್ನಿಕುಂಡ್ ಬ್ಯಾರೇಜ್‌ನಿಂದ ಭಾರಿ ಪ್ರಮಾಣದ ನೀರನ್ನು ಹೊರಬಿಟ್ಟ ನಂತರ ಹಳೆಯ ರೈಲ್ವೆ ಸೇತುವೆಯಲ್ಲಿ ಯಮುನಾ ನದಿಯ ನೀರಿನ ಮಟ್ಟವು ಬೆಳಗ್ಗೆ 7 ಗಂಟೆಗೆ 207.48 ಮೀಟರ್ ತಲುಪಿದ್ದರಿಂದ ದೆಹಲಿ–ಎನ್ ಸಿಆರ್ ನಲ್ಲಿ ಪ್ರವಾಹದ ಪರಿಸ್ಥಿತಿ ತೀವ್ರಗೊಂಡಿದೆ.

ಉಕ್ಕಿ ಹರಿಯುತ್ತಿರುವ ನದಿಯ ಪ್ರವಾಹ ತಗ್ಗು ಪ್ರದೇಶಗಳನ್ನು ಜಲಾವೃತಗೊಳಿಸಿವೆ. ಇದರಿಂದ ರಾಜಧಾನಿ ಮತ್ತು ಪಕ್ಕದ ಪ್ರದೇಶಗಳಲ್ಲಿ ಸಾಮಾನ್ಯ ಜನಜೀವನ ಮತ್ತು ಸಂಚಾರ ವ್ಯವಸ್ಥೆಗೆ ಅಡ್ಡಿಯುಂಟಾಗಿದೆ.

ಅಧಿಕೃತ ಮಾಹಿತಿಯ ಪ್ರಕಾರ, ಬೆಳಗ್ಗೆ 6 ರಿಂದ 7 ರವರೆಗೆ ನದಿಯ ನೀರಿನ ಮಟ್ಟವು 207.48 ಮೀಟರ್ ನಲ್ಲಿ ಸ್ಥಿರವಾಗಿದೆ. ಬೆಳಗ್ಗೆ 5 ಗಂಟೆಗೆ ನೀರಿನ ಮಟ್ಟ 207.47 ಮೀಟರ್ ಆಗಿದ್ದರೆ, ಬೆಳಗ್ಗೆ 6 ಗಂಟೆಗೆ 207.48 ಮೀಟರ್ ಇತ್ತು. ಮುಂಜಾನೆ 2 ರಿಂದ 5 ರವರೆಗೆ ನೀರಿನ ಮಟ್ಟ 207.47 ಮೀಟರ್ ನಲ್ಲಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ದೆಹಲಿ ಸೆಕ್ರೆಟರಿಯೇಟ್ ಬಳಿ ಪ್ರವಾಹದ ನೀರು : ಮುಖ್ಯಮಂತ್ರಿ ಕಚೇರಿ,



ಕ್ಯಾಬಿನೆಟ್ ಮಂತ್ರಿಗಳು ಮತ್ತು ಉನ್ನತ ಅಧಿಕಾರಿಗಳನ್ನು ಹೊಂದಿರುವ ದೆಹಲಿ ಸಚಿವಾಲಯದ ಸಮೀಪಕ್ಕೆ ಪ್ರವಾಹದ ನೀರು ಹರಿದಿದೆ. ಸಚಿವಾಲಯದ ಮುಂಭಾಗದ ಶಿಥಲಗೊಂಡ ಗೋಡೆಯ ಮೂಲಕ ಪ್ರವಾಹದ ನೀರು ಹರಿಯುತ್ತಿದೆ. ಅದರಲ್ಲಿ ಅರ್ಧದಷ್ಟು ಈಗಾಗಲೇ ಕುಸಿದಿದೆ. ಉಳಿದ ಭಾಗವು ಕುಸಿದರೆ, ನೀರು ಸಚಿವಾಲಯದ ಆವರಣಕ್ಕೆ ಪ್ರವೇಶಿಸಬಹುದು ಎಂದು ಅಧಿಕಾರಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

ಅಧಿಕಾರಿಗಳು ಮರಳು ಚೀಲಗಳನ್ನು ಇರಿಸಿದ್ದಾರೆ ಮತ್ತು ನೀರನ್ನು ಹೊರಹಾಕಲು ಪಂಪ್ ಗಳನ್ನು ನಿಯೋಜಿಸಿದ್ದಾರೆ. ಆದರೆ ಪಂಪ್ ಮಾಡಿದ ನೀರು ಹಾಥಿ ಘಾಟ್ ನಿಂದ ಮತ್ತೆ ರಸ್ತೆಗೆ ಹರಿಯುತ್ತಿರುವುದರಿಂದ ಈ ಪ್ರಕ್ರಿಯೆ ನಿಷ್ಪ್ರಯೋಜಕವಾಗಿದೆ. ಕಳೆದ ರಾತ್ರಿಯಿಂದ ನಿರಂತರ ಪ್ರಯತ್ನಗಳ ಹೊರತಾಗಿಯೂ ನೀರು ಒಳ ಬರುವುದನ್ನು ತಡೆಯಲು ಸಾಧ್ಯವಾಗುತ್ತಿಲ್ಲ.

ವಾಸುದೇವ್ ಘಾಟ್ ನಲ್ಲಿಯೂ ಪ್ರವಾಹ ಪರಿಸ್ಥಿತಿ ನಿರ್ಮಾಣವಾಗಿದೆ. ಕಾಶ್ಮೀರಿ ಗೇಟ್ ಬಳಿಯ ಶ್ರೀ ಮಾರ್ಗಟ್ ವಾಲೆ ಹನುಮಾನ್ ಬಾಬಾ ಮಂದಿರಕ್ಕೂ ನೀರು ಹರಿದಿದೆ. ಹತ್ತಿರದ ಪ್ರದೇಶಗಳಲ್ಲಿನ ಮನೆಗಳು ಮುಳುಗಿವೆ, ಅಂಗಡಿ ಸರಕುಗಳು ನಾಶವಾಗಿವೆ ಮತ್ತು ನಗರದ ಹಲವಾರು ಪ್ರದೇಶಗಳಲ್ಲಿ ಸಂಚಾರ ಅಸ್ತವ್ಯಸ್ತಗೊಂಡಿದೆ. ಇದು ಸಾವಿರಾರು ಜನರ ದೈನಂದಿನ ಜೀವನದ ಮೇಲೆ ಪರಿಣಾಮ ಬೀರಿದೆ.

ಡೇರೆಗಳಿಗೆ ಬಾಧಿತರ ಸ್ಥಳಾಂತರ: ಹಳೆಯ ರೈಲ್ವೆ ಸೇತುವೆಯು ನದಿಯ ಹರಿವು ಮತ್ತು ಸಂಭಾವ್ಯ ಪ್ರವಾಹ ಅಪಾಯಗಳನ್ನು ಪತ್ತೆಹಚ್ಚಲು ಪ್ರಮುಖ ವೀಕ್ಷಣಾ ಕೇಂದ್ರವಾಗಿ ಮಾರ್ಪಟ್ಟಿದೆ. ಕಂದಾಯ ಇಲಾಖೆಯ ಪ್ರಕಾರ, 8,018 ಜನರನ್ನು ಡೇರೆಗಳಿಗೆ ಸ್ಥಳಾಂತರಿಸಲಾಗಿದ್ದು, 2,030 ಜನರನ್ನು 13 ಶಾಶ್ವತ ಆಶ್ರಯಗಳಿಗೆ ಸ್ಥಳಾಂತರಿಸಲಾಗಿದೆ. ಈ ಮಧ್ಯೆ, ಭಯಪಡುವ ಅಗತ್ಯವಿಲ್ಲ ಎಂದು ಸರ್ಕಾರ ಒತ್ತಿಹೇಳಿದ್ದು, ಪರಿಸ್ಥಿತಿಯ ಬಗ್ಗೆ ದಿನದ 24 ಗಂಟೆಯೂ ನಿಗಾವಹಿಸಲಾಗಿದೆ ಎಂದಿದೆ.

ನದಿಯಲ್ಲಿ ನೀರಿನ ಮಟ್ಟವು ಹೆಚ್ಚಾಗಿರುವುದರಿಂದ ಮತ್ತು ನಿರ್ಣಾಯಕ ಹಂತವನ್ನು ತಲುಪಿರುವುದರಿಂದ ಯಮುನಾದಿಂದ ಯಾವುದೇ ಹಿನ್ನೀರಿನ ಹರಿವನ್ನು ತಪ್ಪಿಸಲು ನಗರದ ಎಲ್ಲಾ 13 ನಿಯಂತ್ರಕ ಚರಂಡಿಗಳನ್ನು ಮುಚ್ಚಲಾಗಿದೆ ಎಂದು ಸರ್ಕಾರಿ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಬಿಹಾರ್ ಬಂದ್: ಭಾಗಶಃ ಯಶಸ್ವಿ

**ನವದೆಹಲಿ:** ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್ ಡಿಎ) ಕರೆ ನೀಡಿದ್ದ ಬಿಹಾರ್ ಬಂದ್ ಭಾಗಶಃ ಯಶಸ್ವಿಯಾಗಿದೆ.

ಪ್ರಧಾನಿ ನರೇಂದ್ರ ಮೋದಿ ಮತ್ತು ಅವರ ದಿವಂಗತ ತಾಯಿಯನ್ನು ನಿಂದಿಸಲಾಗಿದೆ ಎಂದು ಆರೋಪಿಸಿ ಬಿಜೆಪಿ ಇಂದು ಬೆಳಗ್ಗೆ 7ರಿಂದ 12 ಗಂಟೆವರೆಗೆ ಐದು ಗಂಟೆಗಳ ಕಾಲ ಬಿಹಾರ ಬಂದ್ ಗೆ ಕರೆ ನೀಡಿದೆ.

ಬಿಹಾರದಾದ್ಯಂತ ಪ್ರತಿಭಟನೆಯ ನೇತೃತ್ವ ವಹಿಸಿದ್ದ ಎಲ್ಲಾ ಎನ್ ಡಿಎ ಘಟಕಗಳ ಮಹಿಳಾ ಘಟಕಗಳು, ಕಾಂಗ್ರೆಸ್ ಮುಖಂಡರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪ್ರಧಾನಿ ಹಾಗೂ ಅವರ ತಾಯಿ ಕುರಿತು ನಿಂದನಾರ್ಹ ಹೇಳಿಕೆ ನೀಡಿದ್ದವರ ವಿರುದ್ಧ ಕ್ರಮ ಕೈಗೊಳ್ಳುವಂತೆ



ಒತ್ತಾಯಿಸಿದರು. ಬಂದ್ ಹಿನ್ನೆಲೆಯಲ್ಲಿ ಶಾಲೆಗಳು, ಕಾಲೇಜುಗಳು ಮತ್ತು ಕೋಚಿಂಗ್ ಕೇಂದ್ರಗಳನ್ನು ಮುಚ್ಚಲಾಗಿತ್ತು. ಇಂಟರ್ ಸಿಟಿ ಬಸ್ ಸೇವೆ ಸ್ಥಗಿತಗೊಳಿಸಲಾಗಿತ್ತು. ಸರ್ಕಾರಿ ಸಂಸ್ಥೆಗಳು ಮತ್ತು ಖಾಸಗಿ ಸಂಸ್ಥೆಗಳು ತಮ್ಮ ವ್ಯವಹಾರವನ್ನು ಸ್ಥಗಿತಗೊಳಿಸಿದ್ದವು. ಬಂದ್ ರಸ್ತೆ ಸಂಚಾರದ ಮೇಲೂ ಪರಿಣಾಮ ಬೀರಿತು.

ಆದರೆ ತುರ್ತು ಸೇವೆಗಳನ್ನು ಬಂದ್ ವ್ಯಾಪ್ತಿಯಿಂದ ವಿನಾಯಿತಿ ನೀಡಲಾಗಿತ್ತು.

ಸಾರ್ವಜನಿಕರಿಗೆಅನಾನುಕೂಲವಾಗುವುದನ್ನು ತಪ್ಪಿಸಲು ಆಂಬ್ಯುಲೆನ್ಸ್ ಗಳು, ಆಸ್ಪತ್ರೆಗಳು, ಏಮ್ಸ್ ಕಾರ್ಯಾಚರಣೆಗಳು ಮತ್ತು ಇತರ ಅಗತ್ಯ ಸೌಲಭ್ಯಗಳಂತಹ ತುರ್ತು ಸೇವೆಗಳ ಸುಗಮ ಕಾರ್ಯಚರಣೆಗೆ ಅನುವು ಮಾಡಿಕೊಡಲಾಯಿತು.

ಕಳೆದ ವಾರ ದರ್ಭಾಂಗದಲ್ಲಿ ಕಾಂಗ್ರೆಸ್ ನಡೆಸಿದ 'ವೋಟರ್ ಅಧಿಕಾರ್ ಯಾತ್ರೆ'ಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅವರ ತಾಯಿಯ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರು ಆಕ್ಷೇಪಾರ್ಹ ಹೇಳಿಕೆಗಳನ್ನು ನೀಡಿದ್ದನ್ನು ವಿರೋಧಿಸಿ ರಾಜ್ಯವ್ಯಾಪಿ ಬಂದ್ ಗೆ ಕರೆ ನೀಡಲಾಗಿತ್ತು.

# ನಕ್ಸಲ್ ಜೊತೆ ಗುಂಡಿನ ಕಾಳಗ ಇಬ್ಬರು ಭದ್ರತಾ ಸಿಬ್ಬಂದಿ ಹುತಾತ್ಮ



**ರಾಂಚಿ:** ಜಾರ್ಖಂಡ್ ನ ಪಲಮು ಜಿಲ್ಲೆಯಲ್ಲಿ ಗುರುವಾರ ಸಿಪಿಐ (ಮಾವೋವಾದಿ) ವಿಭಜಿತ ಗುಂಪಾದ ನಿಷೇಧಿತ ಟಿಎಸ್ ಪಿಸಿ ಸದಸ್ಯರೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಕನಿಷ್ಠ ಇಬ್ಬರು ಭದ್ರತಾ ಸಿಬ್ಬಂದಿ ಹುತಾತ್ಮರಾಗಿದ್ದು, ಮತ್ತೊಬ್ಬರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಟಿಎಸ್ ಪಿಸಿ ಕಮಾಂಡರ್ ಶಶಿಕಾಂತ್ ಗಂಜು ವಿರುದ್ಧ ಕಾರ್ಯಾಚರಣೆ ಮುಂದುವರಿಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

"ಪೊಲೀಸರು ಮತ್ತು ನಿಷೇಧಿತ ಉಗ್ರಗಾಮಿ ಸಂಘಟನೆ ತ್ರಿತಿಯಾ ಸಮ್ಮೇಳನ್ ಪ್ರಸ್ತುತಿ ಸಮಿತಿ (ಟಿಎಸ್ ಪಿಸಿ) ನಡುವೆ ನಿನ್ನೆ ತಡರಾತ್ರಿ ನಡೆದ ಎನ್ಕೌಂಟರ್ ನಲ್ಲಿ ಇಬ್ಬರು ಪೊಲೀಸ್ ಜವಾನರು ಪ್ರಾಣ ಕಳೆದುಕೊಂಡಿದ್ದಾರೆ ಮತ್ತು ಇನ್ನೊಬ್ಬರು ಗಾಯಗೊಂಡಿದ್ದಾರೆ. ಪಲಮುವಿನ ಮನತು ಪ್ರದೇಶದಲ್ಲಿ ಟಿಎಸ್ ಪಿಸಿ ಕಮಾಂಡರ್ ಶಶಿಕಾಂತ್ ಗಂಜು ವಿರುದ್ಧ ಪೊಲೀಸರು ಕಾರ್ಯಾಚರಣೆ ಆರಂಭಿಸಿದ್ದು, ಆತನ ಸೆರೆಗಾಗಿ 10 ಲಕ್ಷ ರೂ.ಗಳ ಬಹುಮಾನವನ್ನು ಘೋಷಿಸಲಾಗಿದೆ.

ಕಾರ್ಯಾಚರಣೆಯ ವೇಳೆ ಗುಂಡಿನ ದಾಳಿ ನಡೆಸಿದಾಗ ಇಬ್ಬರು ಪೊಲೀಸರು ಪ್ರಾಣ ಕಳೆದುಕೊಂಡಿದ್ದಾರೆ," ಎಂದು ಐಜಿ ಕಾರ್ಯಾಚರಣೆ ಮತ್ತು ಜಾರ್ಖಂಡ್ ಪೊಲೀಸ್ ವಕ್ತಾರ ಮೈಕೆಲ್ರಾಜ್ ಎಸ್ ಹೇಳಿದ್ದಾರೆ.

ಕೆಡಾಲ್ ಗ್ರಾಮದಲ್ಲಿ ಟಿಎಸ್ ಪಿಸಿ ಕಮಾಂಡರ್ ಶಶಿಕಾಂತ್ ಗಂಜು ಮತ್ತು ಅವರ ತಂಡ ಇರುವ ಬಗ್ಗೆ ಖಚಿತ ಮಾಹಿತಿಯ ಆಧಾರದ ಮೇಲೆ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು ಎಂದು ಮತ್ತೊಬ್ಬ ಅಧಿಕಾರಿ ತಿಳಿಸಿದ್ದಾರೆ.

# ದೇಶಾದ್ಯಂತ ಭಾರಿ ಸಂಚಲನ ಸೃಷ್ಟಿಸಿರುವ ಧರ್ಮಸ್ಥಳ ಪ್ರಕರಣ ಎನ್‌ಐಎ ತನಿಖೆಗೆ ಚರ್ಚೆ ನಡೆಸಿ ಅಮಿತ್ ಶಾ ನಿರ್ಧಾರ

**ನವದೆಹಲಿ:** ದೇಶಾದ್ಯಂತ ಭಾರಿ ಸಂಚಲನ ಸೃಷ್ಟಿಸಿರುವ ಧರ್ಮಸ್ಥಳ ಪ್ರಕರಣವನ್ನು ಕೇಂದ್ರ ಸರ್ಕಾರ ಸೂಕ್ಷ್ಮವಾಗಿ ಗಮನಿಸಿದೆ. ಈ ಪ್ರಕರಣವನ್ನು ಎನ್‌ಐಎ ತನಿಖೆಗೆ ವಹಿಸಬೇಕು ಎಂಬ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ನಿರ್ಧಾರ ಕೈಗೊಳ್ಳುತ್ತೇವೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದರು.

ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತಿಟ್ಟಿರುವ ಬಗ್ಗೆ ಆರೋಪಿ ಚಿನ್ನಯ್ಯ ನಾನು ಪಾತ್ರಧಾರಿ ಸೂತ್ರಧಾರಿಗಳು ಬೇ-ರೆಯೇ ಇದ್ದಾರೆ ಎಮದು ಎಸ್‌ಐಟಿ ಮುಂದೆ ಬಹಿರಂಗಪಡಿಸಿದ್ದನು

ಈ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಪಂಚಮಸಾಲಿ ಲಿಂಗಾಯತ ಮಠದ ವಚನಾನಂದ ಸ್ವಾಮೀಜಿ ನೇತೃತ್ವದ ಸನಾತನ ಸಂತ ನಿಯೋಗವು ದೆಹಲಿಯಲ್ಲಿಂದು ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ ಧರ್ಮಸ್ಥಳ ಪ್ರಕರಣವನ್ನು ಎನ್‌ಐಎಗೆ



ವಹಿಸುವಂತೆ ಮನವಿ ಸಲ್ಲಿಸಿತ್ತು

ಹಿಂದೂಗಳು ಹಾಗೂ ಹಿಂದೂ ಧಾರ್ಮಿಕ ಕೇಂದ್ರಗಳ ಮೇಲೆ ಹಾಗೂ ಹಿಂದೂ ಮಠಾಧೀಶರ ಮೇಲೆ ಪದೇ ಪದೇ ದಾಳಿಯಾಗುತ್ತಿದೆ. 6 ತಿಂಗಳ ಅಂತರದಲ್ಲಿ ದಾಳಿಗಳು ನಡೆಯುತ್ತಿವೆ. ಈ ವ್ಯವಸ್ಥಿತ ದಾಳಿಗಳ ಹಿಂದೆ ಷಡ್ಯಂತ್ರವಿದೆ. ಹೀಗಾಗಿ ಸೂಕ್ತ ತನಿಖೆ ನಡೆಸಬೇಕು ಎಂದು ಸ್ವಾಮೀಜಿಗಳು ಆಗ್ರಹಿಸಿದ್ದಾರೆ. ಈ ನಿಯೋಗದಲ್ಲಿ ಮಂಗಳೂರಿನ ಗುರುಪುರ ವಜ್ರದೇಹಿ ಮಠದ ರಾಜಶೇಖರಾನಂದ ಸ್ವಾಮೀಜಿ ಸೇರಿದಂತೆ ವಿವಿಧ 8 ಪೀಠಗಳ ಸ್ವಾಮೀಜಿಗಳು ಈ ನಿಯೋಗದಲ್ಲಿದ್ದರು.


ಧರ್ಮಸ್ಥಳ ಪ್ರಕರಣದ ಎಲ್ಲ ಬೆಳವಣಿಗೆಗಳನ್ನು ನಾನೇ ಸೂಕ್ಷ್ಮವಾಗಿ ಗಮನಿಸುತ್ತಿದ್ದೇನೆ. ಧರ್ಮಸ್ಥಳ ಪ್ರಕರಣದ ಬಗ್ಗೆ ಸಚಿವ ಸಂಪುಟದಲ್ಲಿ ಸಭೆ ನಡೆಸುತ್ತೇವೆ. ಸಭೆಯ ಬಳಿಕ ಮುಂದಿನ ನಿರ್ಧಾರ ಕೈಗೊಳ್ಳುತ್ತೇವೆ ಎಂದು ಅಮಿತ್ ಶಾ ಭರವಸೆ ನೀಡಿದ್ದಾರೆ. ಧಾರ್ಮಿಕ ಕ್ಷೇತ್ರಗಳ ವಿರುದ್ಧದ ಅಪಪ್ರಚಾರಕ್ಕೆ ಕಡಿವಾಣ ಹಾಕಲು ಹೊಸ ಕಾನೂನು ತರುತ್ತೇವೆ ಎಂದು ಆಶ್ವಾಸನೆ ನೀಡಿರುವ ಅವರು, ಸಮಾಜವನ್ನು ಜಾಗೃತಿಗೊಳಿಸುವಂತೆ ಸ್ವಾಮೀಜಿಗಳಿಗೆ ಗೃಹ ಸಚಿವರು ಸಲಹೆ ಕೊಟ್ಟಿದ್ದಾರೆ.

ಇತ್ತೀಚೆಗಷ್ಟೆ ಪ್ರತಿಪಕ್ಷ ಬಿಜೆಪಿಯು ಧರ್ಮಸ್ಥಳದ ವಿರುದ್ಧ ಅಪಪ್ರಚಾರ ಮಾಡುತ್ತಿರುವ ಬಗ್ಗೆ ಶವಗಳನ್ನು ಹೂತಿಟ್ಟಿರುವ ಪ್ರಕರಣದ ವ್ಯಕ್ತಿಗಳ ಹಿಂದಿರುವ ಬಗ್ಗೆ ಎನ್‌ಐಎ ತನಿಖೆ ನಡೆಸಬೇಕು ಎಂದು ಧುಸ್ಥಳ ಚಲೋ ಹಮ್ಮಿಕೊಂಡಿತ್ತು.

ಈ ಬೆಳವಣಿಗೆಗಳ ಬೆನ್ನಲ್ಲೆ ಮಠಾಧೀಶರು ಅಮಿತ್ ಶಾ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ. ಆದರೆ,ರಾಜ್ಯಸರ್ಕಾರ ಈ ಪ್ರಕರಣವನ್ನು ಎನ್‌ಐಎಗೆ ಒಪ್ಪಿಸಲು ಸ್ಪಷ್ಟವಾಗಿ ನಿರಾಕರಿಸಿದ್ದು, ಎಸ್‌ಐಟಿಯೇ ಸಮರ್ಥವಾಗಿ ತನಿಖೆ ನಡೆಸುತ್ತಿದೆ ಎಂದು ಪ್ರತಿಪಕ್ಷ ಬಿಜೆಪಿಗೆ

# ಕದನ ವಿರಾಮ ಒಪ್ಪದಿದ್ದರೆ ಉಕ್ರೇನ್ ವಿರುದ್ಧ ಯುದ್ಧ

**ಮಾಸ್ಕೋ:** ಉಕ್ರೇನ್ ಕದನ ವಿರಾಮ ಒಪ್ಪಂದಕ್ಕೆ ಒಪ್ಪದಿದ್ದರೆ ಹೋರಾಟಕ್ಕೆ



ರಷ್ಯಾ ಸಿದ್ಧವಾಗಿದೆ ಎಂದು ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹೇಳಿದ್ದಾರೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಯುದ್ಧವನ್ನು ಕೊನೆಗೊಳಿಸುವಂತೆ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದಾರೆ. ಆದರೆ ಎಲ್ಲವೂ ಉಕ್ರೇನ್ ಅಧ್ಯಕ್ಷರ ನಿಲುವಿನ ಮೇಲೆ ನಿಂತಿದೆ ಎಂದಿದ್ದಾರೆ.

ಅಗತ್ಯಬಿದ್ದರೆ ಉಕ್ರೇನ್ ಅಧ್ಯಕ್ಷ ವಲೋಡಿಮಿರ್ ಝೆಲೆನ್ಸ್ಕಿ ಅವರನ್ನು ಭೇಟಿ ಮಾಡಲು ಸಿದ್ಧ ಎಂದು ಹೇಳಿದ್ದು ಭೇಟಿ ಆದರೆ ಅದರಲ್ಲಿ ಏನಾದರೂ ಅರ್ಥ ವಿರಬೇಕು ಎಂದು ತಿಳಿಸಿದ್ದಾರೆ. ಕಳೆದ ತಿಂಗಳು ಅಲಾಸ್ಕಾದಲ್ಲಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಮೇಲೆ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅವರು ಅಂತರರಾಷ್ಟ್ರೀಯ ಒತ್ತಡ ಹೇರಿದ್ದಾರೆ. ಉಕ್ರೇನ್ ಭೇಟಿ ನೀಡಿದ ಇಂಗ್ಲೆಂಡ್ ರಕ್ಷಣಾ ಕಾರ್ಯದರ್ಶಿ ಜಾನ್ ಹೀಲಿ ಅವರು ಡೊನಾಲ್ಡ್ ಟ್ರಂಪ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಜೊತೆ ಮಾತುಕತೆ ನಡೆಸಿದ್ದಾರೆ.

ಉಕ್ರೇನ್‌ಗೆ ಹೆಚ್ಚುವರಿ ನೆರವು ನೀಡಲು ಅಮೇರಿಕಾ ಸಿದ್ಧವಾಗಿವೆ ಇದರಿಂದ ಉಕ್ರೇನ್ ಹೋರಾಟದಲ್ಲಿ ಮುಂದುವರಿಯಬಹುದು" ಎಂದು ಅವರು ಹೇಳಿದ್ದಾರೆ. ರಷ್ಯಾದ ಮೇಲೆ ನಿರ್ಬಂಧಗಳನ್ನು ವಿಧಿಸಲು ಮತ್ತು ಉಕ್ರೇನ್‌ನ ರಕ್ಷಣೆಯನ್ನು ಬಲಪಡಿಸಲು ಡೊನಾಲ್ಡ್ ಟ್ರಂಪ್ ಅವರನ್ನು ಒತ್ತಾಯಿಸಲಾಗಿದೆ.

ಕಳೆದ ಮೂರು ವರ್ಷದಿಂದ ಉಕ್ರೇನ್ ಮತ್ತು ರಷ್ಯಾ ನಡುವೆ ಸಂಘರ್ಷ ನಡೆಯುತ್ತಿದೆ.ಯುದ್ಧ ನಿಲ್ಲಿಸಲು ಅಮೆರಿಕಾ ಸೇರಿದಂತೆ ವಿಶ್ವದ ಅನೇಕ ದೇಶಗಳು ಇನ್ನಿಲ್ಲದ ಕಸರತ್ತು ನಡೆಸುತ್ತಿವೆ.

# ಮಂಜುನಾಥ ಯಾರೊಬ್ಬರಿಗೂ ಸೇರಿಲ್ಲ:ಎಲ್ಲರನ್ನೂ ಕರೆಸಿಕೊಳ್ಳುತ್ತಾನೆ


**ಬೆಂಗಳೂರು:** ಧರ್ಮಸ್ಥಳದ ಮಂಜುನಾಥ ಯಾರೋ ಒಬ್ಬರಿಗೆ ಸೇರಿಲ್ಲ.ಮಂಜುನಾಥ ಎಲ್ಲರನ್ನೂ ಕರೆಸಿಕೊಳ್ಳುತ್ತಾನೆ. ಯಾರು ಬೇಕಾದರು ಹೋಗಿ ದರ್ಶನ ಮಾಡಿ ಬರಬಹುದು. ಇದಕ್ಕೆ ಯಾರ ಆಕ್ಷೇಪವೂ ಇಲ್ಲ ಎಂದು ಗೃಹಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

ಧರ್ಮಸ್ಥಳ ಪ್ರಕರಣವನ್ನು ಎನ್‌ಐಎಗೆ ವಹಿಸುವಂತೆ ಅಮಿತ್ ಶಾಗೆ ಸಚಿವ ಎಚ್.ಡಿ ಕುಮಾರಸ್ವಾಮಿ ಮನವಿ ಮಾಡಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಎಸ್‌ಐಟಿ ಸರಿಯಿಲ್ಲ, ತನಿಖೆಯೇ ಸರಿಯಿಲ್ಲ ಎನ್ನುತ್ತಿದ್ದವರು.

ಈಗ ಎನ್‌ಐಎ ತನಿಖೆ ಮಾಡಲಿ ಎಂದು ಹೇಳುತ್ತಿದ್ದಾರೆ. ಅದೂ ಕೂಡ ತನಿಖೆಯೇ ಅಲ್ಲವೇ ಎಂದು ಪ್ರಶ್ನಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಶಾಸಕರಿಂದ ಧರ್ಮಸ್ಥಳ ಚಲೋ ಆರಂಭಿಸಿರುವ ಕ್ರಮ ಕುರಿತು ಸಮರ್ಥಿಸಿಕೊಂಡರು.

ಬಿಜೆಪಿ–ಜೆಡಿಎಸ್ ಪಕ್ಷಗಳೇ ಇರಲಿ, ಈಗ ಕಾಂಗ್ರೆಸ್‌ನವರು ಏಕೆ ಧರ್ಮಸ್ಥಳಕ್ಕೆ ಹೋಗುತ್ತಿದ್ದಾರೆ. ಈ ಮೊದಲು ಯಾ-ಕೆ ಹೋಗಲಿಲ್ಲ? ಇದು ಸಹಜವಾಗಿ ರಾಜಕೀಯ ಬಣ್ಣ ಪಡೆಯಲಿದೆ. ಅವರು ಹೋದರುಎಂದು ಇವರೂ




ಹೋಗುತ್ತಿದ್ದಾರೆ. ಧರ್ಮಸ್ಥಳಕ್ಕೆ ಕಳಂಕ ಅಂಟಿದೆ ಎಂದು ಹೋಗುತ್ತಿದ್ದಾರೋ ಅಥವಾ ತಮ್ಮ ಕಳಂಕ ಕಳೆದುಕೊಳ್ಳಲು ಹೋಗುತ್ತಿದ್ದಾರಾ ಎಂದರು. ಸೌಜನ್ಯ ಪ್ರಕರಣ ಕುರಿತಂತೆ ಟಿಆರ್‌ಎಫ್‌ನಲ್ಲಿ ಎಸ್‌ಐಟಿ ತನಿಖೆ ನಡೆಸುತ್ತಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಎಸ್‌ಐಟಿ ಅಧಿಕಾರಿಗಳು ಯಾವ ಆಧಾರದಲ್ಲಿ ಮಾಡಿದ್ದಾರೋ ಗೊತ್ತಿಲ್ಲ. ಅವರಿಗೆ ಸಿಕ್ಕಿರುವ ಮಾಹಿತಿ ಬಗ್ಗೆಯೂ ಗೊತ್ತಿಲ್ಲ. ತನಿಖೆಯಲ್ಲಿ ಸಾಕಷ್ಟು ವಿಚಾರ ಕಲೆ ಹಾಕಿದ್ದಾರೆ. ಇದಕ್ಕಾಗಿಯೇ ಉದಯ್‌ಜೈನ್‌ಅವರನ್ನು ಕರೆಸಿಕೊಂಡಿರಬಹುದು ಎಂದರು. ಧರ್ಮಸ್ಥಳ ಪ್ರಕರಣಗಳ ಸಂಬಂಧ ಎಸ್‌ಐಟಿಗೆ ಯಾವುದೋ ಲಿಂಕ್ ಸಿಕ್ಕಿರಬೇಕು. ಹಾಗೆಂದ ಮಾತ್ರಕ್ಕೆ ಸೌಜನ್ಯ ಪ್ರಕರಣದ ಮರು ತನಿಖೆ ಎಂದು ಹೇಳಲು ಬರುವುದಿಲ್ಲ. ಯಾವ ಉದ್ದೇಶದಿಂದ ತನಿಖೆ ಮಾಡುತ್ತಿದ್ದಾರೆ ಎಂಬುದು ನಂತರ ತಿಳಿಯಲಿದೆ.

ಈಗಲೇ ಎಲ್ಲವನ್ನೂ ಬಹಿರಂಗಪಡಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು.

ಧರ್ಮಸ್ಥಳ ಪ್ರಕರಣ ಕುರಿತಂತೆ ವಿದೇಶದಿಂದ ಹಣ ಬಂದಿದೆ ಎಂಬ ಆರೋಪಗಳು ಕೇಳಿ ಬಂದಿದೆ. ಈ ಬಗ್ಗೆ ಕೇಂದ್ರ ಸರ್ಕಾರವೇ ನೋಡಬೇಕು. ಶವಗಳನ್ನು ಹೂತಿಟ್ಟಿರುವ ಬಗ್ಗೆ ಮಾತ್ರ ಎಸ್‌ಐಟಿ ತನಿಖೆ ಮಾಡುತ್ತಿದೆ.

ಇದರಲ್ಲಿ ಏನಾದರು ನ್ಯೂನತೆಗಳಿದ್ದರೆ ಬೇರೆ ಕ್ರಮಕೈಗೊಳ್ಳಬಹುದು. ಈ ಪ್ರಕರಣದಲ್ಲಿ ಎನ್‌ಐಎ ಮಧ್ಯ ಪ್ರವೇಶಿಸುವ ಮುನ್ನ ನ್ಯಾಯ ಒದಗಿಸಬೇಕು. ಆದರೆ, ರಾಜ್ಯಸರ್ಕಾರದ ಮುಂದೆ ಈ ಆಯ್ಕೆ ಇಲ್ಲ ಎಂದು ಪರಮೇಶ್ವರ್ ಸ್ಪಷ್ಟಪಡಿಸಿದರು.

# ಪರಿಸರ ಸಂರಕ್ಷಣೆಗೆ, ಸಮತೋಲನಕ್ಕೆ ಸುಪ್ರೀಂ ಸೂಚನೆ



**ನವದೆಹಲಿ:** ಉತ್ತರ ಭಾರತದ ಹಲವವು ರಾಜ್ಯಗಳು ಹಾಗೂ ರಾಷ್ಟ್ರರಾಜಧಾನಿಯನ್ನು ತೀವ್ರ ಬಾಧಿಸುತ್ತಿರುವ ಪ್ರವಾಹ ಪರಿಸ್ಥಿತಿಯಿಂದಾಗಿ ಎಚ್ಚೆತ್ತಿರುವ ಸುಪ್ರೀಂ ಕೋರ್ಟ್, ಗುರುವಾರ ಅನಿಯಂತ್ರಿತ ಅಕ್ರಮ ಮರಗಳನ್ನು ಕಡಿಯುವುದನ್ನು ಉಲ್ಲೇಖಿಸಿದೆ. ಜತೆಗೆ ಕಾನೂನುಗಳನ್ನು ಬಹಿರಂಗವಾಗಿ ಉಲ್ಲಂಘಿಸಲಾಗುತ್ತಿದೆ ಎಂದಿರುವ ಸರ್ವೋಚ್ಚ ನ್ಯಾಯಾಲಯ, ಈ ಸಂಬಂಧ ಕೇಂದ್ರ ಮತ್ತು ನಾಲ್ಕು ರಾಜ್ಯಗಳಿಗೆ ನೋಟಿಸ್ ನೀಡಿದೆ.

ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಮತ್ತು ನ್ಯಾಯಮೂರ್ತಿ ಕೆ.ವಿನೋದ್ ಚಂದ್ರನ್ ಅವರ ನ್ಯಾಯಪೀಠ, ಪ್ರವಾಹ ಮತ್ತು ಅಕ್ರಮ ಮರ ಕಡಿಯುವಿಕೆಯನ್ನು ಸ್ವಯಂಪ್ರೇರಿತವಾಗಿ ಪರಿಗಣಿಸಿ, ಅಭಿವೃದ್ಧಿ ಮತ್ತು ಪರಿಸರ ಸಂರಕ್ಷಣೆಯನ್ನು ಸಮತೋಲನಗೊಳಿಸಬೇಕು ಎಂದು ಒತ್ತಿಹೇಳಿದೆ.

"ನಾವು ಅಭೂತಪೂರ್ವ ಮಳೆ ಮತ್ತು ಪ್ರವಾಹವನ್ನು ನೋಡಿದ್ದೇವೆ. ಪ್ರವಾಹ ನಿಯಂತ್ರಿಸಲಾಗದಿರುವ ಸಂಬಂಧ ಪಂಜಾಬ್, ಉತ್ತರಾಖಂಡ, ಹಿಮಾಚಲ ಪ್ರದೇಶ ಮತ್ತು ಜಮ್ಮು ಮತ್ತು ಕಾಶ್ಮೀರ ರಾಜ್ಯಗಳಿಗೆ ನೋಟಿಸ್ ನೀಡುತ್ತಿದ್ದೇವೆ.

ಮೇಲ್ನೋಟಕ್ಕೆ ಅಕ್ರಮವಾಗಿ ಮರಗಳನ್ನು ಕಡಿಯಲಾಗಿದೆ ಎಂದು ಕಾಣುತ್ತಿದೆ," ಎಂದು ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಹೇಳಿದ್ದಾರೆ. ಜತೆಗೆ "ಇದು ಬಹಳ ಗಂಭೀರ ವಿಷಯವೆಂದು ಕಂಡುಬರುತ್ತಿದೆ," ಎಂದು ಉಲ್ಲೇಖಿಸಿದ್ದಾರೆ.

"ಪಂಜಾಬ್ ನ ಸಂಪೂರ್ಣ ಹೊಲಗಳು ಮತ್ತು ಗ್ರಾಮಗಳು ಪ್ರವಾಹದಿಂದ ಅಳಿಸಿಹೋಗಿವೆ. ಇದನ್ನು ತಡೆಯಬೇಕಾದರೆ ಅಭಿವೃದ್ಧಿ ಮತ್ತು ಪರಿಸರ ಸಂರಕ್ಷಣೆಯನ್ನು ಸಮತೋಲನಗೊಳಿಸಬೇಕಾಗಿದೆ," ಎಂದು ಹೇಳಿದೆ

# ಜಿಎಸ್‌ಟಿ ಕಡಿತ ಕೇಂದ್ರದ ಕ್ರಮ ಸ್ವಾಗತಾರ್ಹ : ಕೆಎನ್‌ಆರ್ ರಾಜ್ಯ ಸರ್ಕಾರಗಳ ಜಿಎಸ್‌ಟಿ ಪಾಲಿನ ಹಣ ನೀಡಲು ಒತ್ತಾಯ

**ತುಮಕೂರು:** ಕೆಲ ವಸ್ತುಗಳ ಮೇಲಿನ ಜಿಎಸ್‌ಟಿ ಕಡಿತ ಮಾಡಿರುವ ಕೇಂದ್ರ ಸರ್ಕಾರದ ಕ್ರಮ ಸ್ವಾಗತಾರ್ಹ. ಆದರೆ ಇದರಿಂದ ಕರ್ನಾಟಕವೂ ಸೇರಿದಂತೆ ದೇಶದ ಎಲ್ಲ ರಾಜ್ಯ ಸರ್ಕಾರಗಳು ಆರ್ಥಿಕ ಮುಗ್ಗಟ್ಟಿಗೆ ಒಳಗಾಗುವ ಸಾಧ್ಯತೆ ಇದೆ. ಆದ್ದರಿಂದ ರಾಜ್ಯ ಸರ್ಕಾರಗಳಿಗೆ ಕಡಿಮೆಯಾಗುವ ಹಣವನ್ನು ಕೇಂದ್ರ ಸರ್ಕಾರ ಭರಿಸಬೇಕು ಎಂದು ಮಾಜಿ ಸಚಿವ ಕೆ.ಎನ್. ರಾಜಣ್ಣ ಇಂದಿಲ್ಲಿ ಒತ್ತಾಯಿಸಿದರು.

ಕೇಂದ್ರಸರ್ಕಾರ ಶೇ. 28 ಇದ್ದ ಜಿಎಸ್‌ಟಿಯನ್ನು ಶೇ 18ಕ್ಕೆ, ಹಾಗೆಯೇ ಶೇ. 18 ರಿಂದ ಶೇ. 5ಕ್ಕೆ ಜಿಎಸ್‌ಟಿಯನ್ನು ಇಳಿಕೆ ಮಾಡಿದೆ. ಇದು ಜನಸಾಮಾನ್ಯರ ಹಿತದೃಷ್ಟಿಯಿಂದ ಒಳ್ಳೆಯದು ಹಾಗಾಗಿ ನಾನು ಸ್ವಾಗತ ಮಾಡುತ್ತೇನೆ. ಆದರೆ ಜಿಎಸ್‌ಟಿ ಕಡಿಮೆ ಮಾಡಿರುವುದರಿಂದ ರಾಜ್ಯ ಸರ್ಕಾರಗಳಿಗೆ ಕೇಂದ್ರದಿಂದ ಬರಬೇಕಾಗಿರುವ ಜಿಎಸ್‌ಟಿ



ಪಾಲು ಕಡಿಮೆಯಾಗುತ್ತದೆ. ಇದರಿಂದ ರಾಜ್ಯ ಸರ್ಕಾರಗಳು ಆರ್ಥಿಕ ಮುಗ್ಗಟ್ಟಿಗೆ ಸಿಲುಕುವ ಸಾಧ್ಯತೆಯಿದೆ. ಹಾಗಾಗಿ ಕೇಂದ್ರ ಸರ್ಕಾರ ಜಿಎಸ್‌ಟಿ ಪಾಲಿನಲ್ಲಿ ಕಡಿಮೆಯಾಗುವ ಹಣವನ್ನು ರಾಜ್ಯ ಸರ್ಕಾರಗಳಿಗೆ ನೀಡಬೇಕು ಎಂದು ಅವರು ಆಗ್ರಹಿಸಿದರು.

ನಗರದ ಡಿಸಿಸಿ ಬ್ಯಾಂಕ್ ಕಚೇರಿಯಲ್ಲಿ ಅಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆ ರೈತರ 50 ಸಾವಿರ ಹಾಗೂ 1 ಲಕ್ಷ ರೂ. ವರೆಗಿನ ಸಾಲನ್ನು ಮನ್ನಾ ಮಾಡಲಾಗಿತ್ತು. ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಸುಮಾರು 44 ಸಾವಿರ ರೈತರ 1 ಲಕ್ಷ ರೂ.ನಂತೆ 252 ಕೋಟಿ ರೂ. ಸಾಲ ಮನ್ನಾ ಮಾಡಲಾಗಿತ್ತು. ಇನ್ನು ಅನೇಕ ರೈತರ ಖಾತೆಗಳಿಗೆ ಸಾಲ ಮನ್ನಾದ ಹಣ ಜಮಾ ಆಗಿಲ್ಲ. ಕೂಡಲೇ ಈ ಹಣವನ್ನು ಸರ್ಕಾರ ಬಿಡುಗಡೆ ಮಾಡಬೇಕು ಎಂದು ಅವರು ಒತ್ತಾಯಿಸಿದರು.

ತುಮಕೂರು ಜಿಲ್ಲಾ ಸಹಕಾರಿ ಕೇಂದ್ರ ಬ್ಯಾಂಕ್‌ನ ಮುಂದಿನ 5 ವರ್ಷಗಳ ಅವಧಿಗೆ ನಡೆದ ಪದಾಧಿಕಾರಿಗಳ ಚುನಾವಣೆಯಲ್ಲಿ ನನ್ನನ್ನು ಅಧ್ಯಕ್ಷರಾಗಿ, ಉಪಾಧ್ಯಕ್ಷರನ್ನಾಗಿ ಜಿ.ಜೆ. ರಾಜಣ್ಣರವರನ್ನು ಆಡಳಿತ ಮಂಡಳಿಯ ನಿರ್ದೇಶಕರುಗಳು ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ. ಈ ಮೂಲಕ ಮುಂದಿನ 5 ವರ್ಷಗಳ ಅವಧಿಯನ್ನು ಡಿಸಿಸಿ ಬ್ಯಾಂಕ್ ಅಧ್ಯಕ್ಷ ಜವಾಬ್ದಾರಿಯನ್ನು ನಿರ್ವಹಿಸುವ ಅಧಿಕಾರವನ್ನು ನನಗೆ ನೀಡಿದ್ದಾರೆ ಎಂದ ಅವರು, ನಮ್ಮನ್ನು ಅವಿರೋಧವಾಗಿ ಆಯ್ಕೆ ಮಾಡಿದ ಬ್ಯಾಂಕ್‌ನ ಆಡಳಿತ ಮಂಡಳಿಯ ಎಲ್ಲ ನಿರ್ದೇಶಕರುಗಳಿಗೆ ಅಭಿನಂದನೆ ಸಲ್ಲಿಸುವುದಾಗಿ ಹೇಳಿದರು.

ನಮ್ಮ ಜಿಲ್ಲೆಯ ರೈತಾಪಿ ಜನರು, ಧ್ವನಿ ಇಲ್ಲದ ಜನರಿಗೆ ಹಣಕಾಸಿನ ಸಾಲ ಸೌಲಭ್ಯವನ್ನು ಕೊಟ್ಟು ಅವರು ಕೂಡಾ ಸ್ವಾಭಿಮಾನದ ಬದುಕನ್ನು ಕಟ್ಟಿಕೊಂಡು ಆರ್ಥಿಕವಾಗಿ ಸದೃಢರನ್ನಾಗಿ ಮಾಡುವ ಉದ್ದೇಶವನ್ನು ನಾವು ಹೊಂದಿದ್ದೇವೆ. ಎಲ್ಲಿಯವರೆಗೆ ರೈತಾಪಿ ವರ್ಗ ಆರ್ಥಿಕವಾಗಿ ಸದೃಢರಾಗುವುದಿಲ್ಲವೋ ಅಲ್ಲಿಯವರೆಗೆ ದೇಶವೂ ಕೂಡ ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಸಾಧ್ಯವಿಲ್ಲ ಎಂದರು.

## ಕೆಲವರಿಗೆ ಜೀವಂತ ಆರ್ಥಿಕತೆಗಿಂತ ಸತ್ತ ಆರ್ಥಿಕತೆಯೇ ಬೇಕಾಗಿದೆ; ಕಾಂಗ್ರೆಸ್ ವಿರುದ್ಧ ಪಿಯೂಷ್ ಗೋಯಲ್ ವಾಗ್ದಾಳಿ!




**ಹೊಸದಿಲ್ಲಿ:** ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ವ್ಯವಸ್ಥೆಯಲ್ಲಿ ಸುಧಾರಣಾ ಕ್ರಮಗಳನ್ನು ಜಾರಿಗೊಳಿಸಿರುವ ಕೇಂದ್ರ ಸರ್ಕಾರ, ಜನಸಾಮಾನ್ಯರಿಗೆ ದೀಪಾವಳಿ ಗಿಫ್ಟ್ ನೀಡಿದೆ. ಆದರೆ ಪ್ರತಿಪಕ್ಷಗಳು ಅದರಲ್ಲೂ ಪ್ರಮುಖವಾಗಿ ಕಾಂಗ್ರೆಸ್, ಜಿಎಸ್‌ಟಿ ಸುಧಾರಣಾ ಕ್ರಮಗಳನ್ನು ಪ್ರಶ್ನಿಸಿದೆ.

ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿರುವ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, "ಕೆಲವರಿಗೆ ಜೀವಂತ ಆರ್ಥಿಕತೆಗಿಂತ ಸತ್ತ ಆರ್ಥಿಕತೆಯೇ ಇಷ್ಟ" ಎಂದು ಗುಡುಗಿದ್ದಾರೆ. ರಾಷ್ಟ್ರ ರಾಜಧಾನಿ ಹೊಸದಿಲ್ಲಿಯಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.

"ಮೊದಲ ತ್ರೈಮಾಸಿಕದಲ್ಲಿ ಶೇ. 7.8ರಷ್ಟು ಜಿಡಿಪಿ ಬೆಳವಣಿಗೆಯೊಂದಿಗೆ, ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಭಾರತದ ಆರ್ಥಿಕತೆಯನ್ನು ನಾವೆಲ್ಲಾ ಸಂಭ್ರಮಿಸಬೇಕು. ಆದರೆ ಕೆಲವರು ಆರ್ಥಿಕತೆ ಸಾಯುವುದನ್ನೇ ಕಾದು ಕುಳಿತಿರುವುದು ನಿಜಕ್ಕೂ ದುರಂತ. ಭಾರತದ್ದು ಸತ್ತ ಆರ್ಥಿಕತೆ ಎಂದು ಹೇಳಿದ್ದ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರಿಗೆ ಹೇಗೆ ಅರ್ಥಶಾಸ್ತ್ರ ಅರ್ಥವಾಗುವುದಿಲ್ಲವೋ, ಹಾಗೆಯೇ ಕೇವಲ ನಕಾರಾತ್ಮಕ ಚಿಂತನೆಯನ್ನೇ ಹೊಂದಿರುವ ಕೆಲವು ಕಾಂಗ್ರೆಸ್ ನಾಯಕರಿಗೆ, ಭಾರತದ ಆರ್ಥಿಕತೆಯ ಜೀವಂತಿಕೆ ಗೋಚರಿಸುವುದಿಲ್ಲ" ಎಂದು ಪಿಯೂಷ್ ಗೋಯಲ್ ಹರಿಹಾಯ್ದಿದ್ದಾರೆ.

ನಾನು ಈ ರೀತಿಯ ನಕಾರಾತ್ಮಕತೆಯನ್ನು ಖಂಡಿಸುತ್ತೇನೆ. ಇಂತಹ ನಕಾರಾತ್ಮಕ ಚಿಂತನೆಗಳಿಂದಲೇ ಅವರು ಇಂದು ವಿರೋಧ ಪಕ್ಷದ ಸ್ಥಾನದಲ್ಲಿದ್ದಾರೆ. ಆದರೆ ದೇಶದ ಜನತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ಗಟ್ಟಿಯಾಗಿ ನಿಂತಿದ್ದು, ಅವರ ಆಶೀರ್ವಾದದಿಂದಲೇ ಜಿಎಸ್‌ಟಿ ತೆರಿಗೆ ಪದ್ಧತಿಯಲ್ಲಿ ಸುಧಾರಣಾ ಕ್ರಮ ಜಾರಿಗೆ ತರಲು ಸಾಧ್ಯವಾಗಿದೆ" ಎಂದು ಪಿಯೂಷ್ ಗೋಯಲ್ ಹೇಳಿದರು.

"ಕೇಂದ್ರದ ಜಿಎಸ್‌ಟಿ ಸುಧಾರಣೆಗಳು ಆತ್ಮನಿರ್ಭರ ಭಾರತ ಮತ್ತು ಸ್ವಾವಲಂಬಿ ಭಾರತವನ್ನು ಕಟ್ಟುವಲ್ಲಿ ಖಂಡಿತವಾಗಿಯೂ ಮಹತ್ವದ ಪಾತ್ರ ನಿರ್ವಹಿಸುತ್ತವೆ. ಪೂರೈಕೆ ಸರಪಳಿಯಲ್ಲಿ ಭಾರತ ಸ್ವಾವಲಂಬಿಯಾಗಲು ಈ ಸುಧಾರಣೆಗಳು ನೆರವಾಗಲಿವೆ. ಪ್ರತಿಯೊಬ್ಬ ಭಾರತೀಯನ ಬಗ್ಗೆ ಕಾಳಜಿ ವಹಿಸುವ ಭಾರತವನ್ನು ಖಚಿತಪಡಿಸಿಕೊಳ್ಳುವ ದಿಕ್ಕಿನಲ್ಲಿ ಇದು ಒಂದು ಪ್ರಮುಖ ಹೆಜ್ಜೆಯಾಗಿದೆ" ಎಂದು ಕೇಂದ್ರ ವಾಣಿಜ್ಯ ಸಚಿವರು ಸಂತಸ ವ್ಯಕ್ತಪಡಿಸಿದ್ದಾರೆ.

## ಉತ್ತರ ಭಾಗಗಳಲ್ಲಿ ಭೀಕರ ಪ್ರವಾಹ ; ಕೇಂದ್ರ ಸರ್ಕಾರ, 4 ರಾಜ್ಯಗಳಿಗೆ ಸುಪ್ರೀಂಕೋರ್ಟ್ ನೋಟೀಸ್ ಜಾರಿ



**ಹೊಸದಿಲ್ಲಿ :** ಉತ್ತರ ರಾಜ್ಯಗಳಲ್ಲಿ ಭೀಕರ ಪ್ರವಾಹ ಉಂಟಾಗಿದೆ. ರಾಷ್ಟ್ರ ರಾಜಧಾನಿ ದೆಹಲಿಯಲ್ಲೂ ಪ್ರವಾಹ ಪರಿಸ್ಥಿತಿ ಇದೆ. ಈ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್ ಮಹತ್ವದ ಆದೇಶ ನೀಡಿದೆ.

ಅಕ್ರಮವಾಗಿ ಮರಗಳನ್ನು ಕಡಿಯುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿದೆ. ಕಾನೂನುಗಳನ್ನು ಉಲ್ಲಂಘಿಸುತ್ತಿರುವುದನ್ನು ಕೋರ್ಟ್ ಗಮನಿಸಿದೆ. ಕೇಂದ್ರ ಸರ್ಕಾರ ಮತ್ತು ನಾಲ್ಕು ರಾಜ್ಯಗಳಿಗೆ ನೋಟಿಸ್ ಜಾರಿ ಮಾಡಿದೆ. ನ್ಯಾಯಮೂರ್ತಿಗಳಾದ ಬಿ.ಆರ್. ಗವಾಯಿ ಮತ್ತು ಕೆ. ವಿನೋದ್ ಚಂದ್ರನ್ ಅವರ ಪೀಠ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದೆ. ಅಭಿವೃದ್ಧಿ ಮತ್ತು ಪರಿಸರ ಸಂರಕ್ಷಣೆ ಎರಡೂ ಮುಖ್ಯ ಎಂದು ಹೇಳಿದೆ. ಅತಿಯಾದ ಮಳೆಯಿಂದ ಪ್ರವಾಹ ಉಂಟಾಗಿದೆ. ಮರಗಳನ್ನು ಅಕ್ರಮವಾಗಿ ಕಡಿಯುತ್ತಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ ಎಂದು ಕೋರ್ಟ್ ಹೇಳಿದೆ. ಪಂಜಾಬ್, ಉತ್ತರಾಖಂಡ್, ಹಿಮಾಚಲ ಪ್ರದೇಶ ಮತ್ತು ಜಮ್ಮು ಮತ್ತು ಕಾಶ್ಮೀರ ರಾಜ್ಯಗಳಿಗೆ ಸುಪ್ರೀಂ ಕೋರ್ಟ್ ನೋಟಿಸ್ ನೀಡಿದೆ.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರು ಈ ವಿಷಯದ ಬಗ್ಗೆ ಮಾತನಾಡಿದ್ದಾರೆ. "ನಾವು ಹಿಂದೆಂದೂ ನೋಡದಂತಹ ಮಳೆ ಮತ್ತು ಪ್ರವಾಹವನ್ನು ನೋಡಿದ್ದೇವೆ. ಪಂಜಾಬ್, ಉತ್ತರಾಖಂಡ್, ಹಿಮಾಚಲ ಪ್ರದೇಶ ಮತ್ತು ಜಮ್ಮು ಮತ್ತು ಕಾಶ್ಮೀರ ರಾಜ್ಯಗಳಿಗೆ ನೋಟಿಸ್ ನೀಡುತ್ತಿದ್ದೇವೆ.

## 8 ವರ್ಷಗಳ ನಂತರ ಜಿಎಸ್‌ಟಿ ತಪ್ಪು ಸರಿಪಡಿಸಿದ ಕೇಂದ್ರಕ್ಕೆ ಧನ್ಯವಾದ; ಪಿ.ಚಿದಂಬರಂ ಮೆಚ್ಚುಗೆಯೋ, ವ್ಯಂಗ್ಯವೋ?

**ಹೊಸದಿಲ್ಲಿ:** ಹೊಸ ಪೀಳಿಗೆಯ ಜಿಎಸ್‌ಟಿ ಸುಧಾರಣೆ ಘೋಷಣೆ ಮಾಡಿರುವ ಕೇಂದ್ರ ಸರ್ಕಾರ, ತೆರಿಗೆ ಸ್ಲ್ಯಾಬ್‌ಗಳನ್ನು ನಾಲ್ಕರಿಂದ ಎರಡಕ್ಕೆ ಇಳಿಸಿದೆ. ಅಲ್ಲದೇ ಅಗತ್ಯ ವಸ್ತುಗಳ ತೆರಿಗೆ ಭಾರ ಕಡಿಮೆ ಮಾಡಿ ಜನಸಾಮಾನ್ಯರಿಗೆ ನಿರಾಳತೆ ಒದಗಿಸಿದೆ. ಆದರೆ ಈ ಸುಧಾರಣಾ ಕ್ರಮಗಳಿಗೆ ಕೇಂದ್ರದ ಮಾಜಿ ಸಚಿವ ಪಿ. ಚಿದಂಬರಂ ವ್ಯಂಗ್ಯಭರಿತ ಧಾಟಿಯಲ್ಲಿ ಮೆಚ್ಚುಗೆ ಸೂಚಿಸಿದ್ದಾರೆ.ಈ ಕುರಿತು ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿರುವ ಪಿ. ಚಿದಂಬರಂ, ಜಿಎಸ್‌ಟಿ ಜಾರಿಗೊಳಿಸಿ ಎಂಟು ವರ್ಷಗಳ ಬಳಿಕ ಕೇಂದ್ರ ಸರ್ಕಾರ ತನ್ನ ತಪ್ಪುಗಳನ್ನು ಅರಿತುಕೊಂಡಿರುವುದು ಸಂತಸದ ಸಂಗತಿ" ಎಂದು ಕಿಚಾಯಿಸಿದ್ದಾರೆ. "ಜಿಎಸ್‌ಟಿ ತರ್ಕಬದ್ಧಗೊಳಿಸುವಿಕೆ ಮತ್ತು ದರಗಳ ಕಡಿತವು ಸ್ವಾಗತಾರ್ಹ. ಆದರೆ ಜಿಎಸ್‌ಟಿ ಜಾರಿಯ ಆರಂಭಿಕ ತಪ್ಪುಗಳನ್ನು ಸರಿಪಡಿಸಲು ಕೇಂದ್ರ ಸರ್ಕಾರ ಎಂಟು ವರ್ಷಗಳುನ್ನು ತೆಗೆದುಕೊಂಡಿದೆ.

# ಇದು ವಸಾಹತುಶಾಹಿ ಯುಗವಲ್ಲ; ಭಾರತವನ್ನು ಬೆಂಬಲಿಸಿ ಡೊನಾಲ್ಡ್ ಟ್ರಂಪ್‌ಗೆ ಎಚ್ಚರಿಕೆ ನೀಡಿದ ವ್ಲಾಡಿಮಿರ್ ಪುಟಿನ್



**ಬೀಜಿಂಗ್:** ಭಾರತದ ಸರಕುಗಳ ಮೇಲೆ ಶೇ. 50ರಷ್ಟು ಸುಂಕ ಹೇರಿಕೆ ಮಾಡುವ ಅಮೆರಿಕದ ನಿರ್ಧಾರವನ್ನು ತೀವ್ರವಾಗಿ ಖಂಡಿಸಿರುವ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, "ಜಗತ್ತಿನಲ್ಲಿ ವಸಾಹತುಶಾಹಿ ಯುಗ ಅಂತ್ಯಗೊಂಡಿದೆ ಎಂಬುದನ್ನು ಕೆಲವರು ಅರಿತುಕೊಳ್ಳಬೇಕು" ಎಂದು ಪರೋಕ್ಷವಾಗಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಗುರಿಯಾಗಿಸಿಕೊಂಡು ವಾಗ್ದಾಳಿ ನಡೆಸಿದ್ದಾರೆ.

ಚೀನಾದ ರಾಜಧಾನಿ ಬೀಜಿಂಗ್‌ನ ಡಿಯಾಯುಟೈ ಸ್ಟೇಟ್ ಗೆಸ್ಟ್‌ಹೌಸ್‌ನಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ವ್ಲಾಡಿಮಿರ್ ಪುಟಿನ್, "ಜಗತ್ತು ಭಾರತ ಮತ್ತು ಚೀನಾದಂತಹ ಆರ್ಥಿಕ ದೈತ್ಯರ ಉದಯವನ್ನು ಗುರುತಿಸಬೇಕು. ಜಾಗತಿಕ ರಾಜಕೀಯ ಮತ್ತು ವಾಣಿಜ್ಯ ಕ್ಷೇತ್ರವನ್ನು ಯಾವುದೇ ಒಂದು ನಿರ್ದಿಷ್ಟ ದೇಶ ನಿಯಂತ್ರಿಸಲು ಇದು ವಸಾಹತು ಶಾಹಿ ಯುಗವಲ್ಲ" ಎಂದು ಗುಡುಗಿದರು.

"ಅಂತಾರಾಷ್ಟ್ರೀಯ ಕಾನೂನಿನ ದೃಷ್ಟಿಕೋನದಿಂದ, ಪ್ರತಿಯೊಬ್ಬರೂ ಸಮಾನ ಹಕ್ಕುಗಳನ್ನು ಹೊಂದಿರಬೇಕು ಮತ್ತು ಒಂದೇ ರೀತಿಯ ಸ್ಥಾನದಲ್ಲಿರಬೇಕು. ಅಂತಾರರಾಷ್ಟ್ರೀಯ ಸಂಬಂಧಗಳಲ್ಲಿ ಸಮತೋಲನ ಅಗತ್ಯ" ಎಂದು ರಷ್ಯಾ ಅಧ್ಯಕ್ಷರು ಅಭಿಪ್ರಾಯಪಟ್ಟಿದ್ದಾರೆ.

ಭಾರತದ ಮೇಲೆ ಹೆಚ್ಚುವರಿ ಸುಂಕಗಳನ್ನು ವಿಧಿಸಿರುವ ಡೊನಾಲ್ಡ್ ಟ್ರಂಪ್ ಕ್ರಮವನ್ನು ಟೀಕಿಸಿರುವ ವ್ಲಾಡಿಮಿರ್ ಪುಟಿನ್, "ಯಾವುದೇ ದೇಶ ಮತ್ತೊಂದು ದೇಶವನ್ನು ಶಿಕ್ಷಿಸುವ ಹಕ್ಕು ಹೊಂದಿಲ್ಲ. ಇಂತಹ ಅಸಂಬದ್ಧ ಸುಂಕಗಳು ರಾಜತಾಂತ್ರಿಕ ಸಂಬಂಧವನ್ನು ಕೆಡಿಸುವುದಲ್ಲದೇ, ವಾಣಿಜ್ಯ ಹಿತಾಸಕ್ತಿಗಳಿಗೂ ಧಕ್ಕೆ ತರುತ್ತದೆ. ಭಾರತ ಮತ್ತು ಚೀನಾದಂತಹ ದೊಡ್ಡ ದೇಶಗಳು, ವಿಶಿಷ್ಟ ರಾಜಕೀಯ ವ್ಯವಸ್ಥೆ ಮತ್ತು ದೇಶೀಯ ಕಾನೂನುಗಳನ್ನು ಹೊಂದಿವೆ ಎಂಬುದನ್ನು ಯಾರೂ ಮರೆಯಬಾರದು" ಎಂದು ಎಚ್ಚರಿಸಿದರು.

ಇದೇ ವೇಳೆ ಪಶ್ಚಿಮದ ರಾಷ್ಟ್ರಗಳಿಗೆ ಅದರ ವಸಾಹತುಶಾಹಿ ಇತಿಹಾಸವನ್ನು ನೆನಪಿಸಿದ ರಷ್ಯಾ ಅಧ್ಯಕ್ಷರು, "ವಸಾಹತುಶಾಹಿ ಯುಗ ಹಲವಾರು ದೇಶಗಳನ್ನು ಲೂಟಿ ಮಾಡಿದೆ. ಆದರೆ ಈಗ ವಸಾಹತುಶಾಹಿ ಯುಗ ಮುಗಿದಿದ್ದು, ಆದರೂ ಕೆಲವು ರಾಷ್ಟ್ರಗಳು ತಮ್ಮ ಸಮಾನ ಪಾಲುದಾರ ರಾಷ್ಟ್ರಗಳೊಂದಿಗೆ ಮಾತನಾಡುವಾಗ ವಸಾಹತುಶಾಹಿ ಧ್ವನಿಯನ್ನು ಬಳಸುತ್ತವೆ. ಇದನ್ನು ನಾವು ಯಾರೂ ಸಹಿಸುವುದಿಲ್ಲ" ಎಂದು ಪರೋಕ್ಷವಾಗಿ ಅಮೆರಿಕದ ವಿರುದ್ಧ ಗುಡುಗಿದರು.

ಇತ್ತೀಚಿಗೆ ಚೀನಾದ ಟಿಯಾಂಜಿನ್ ನಗರದಲ್ಲಿ ನಡೆದ ಶಾಂಘೈ ಸಹಕಾರ ಒಕ್ಕೂಟ (ಎಸ್‌ಸಿಓ)ದ ಶೃಂಗಸಭೆಯಲ್ಲಿ,ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ನಡುವೆ ದ್ವಿಪಕ್ಷೀಯ ಮಾತುಕತೆ ನಡೆದಿತ್ತು. ಈ ಸಭೆಯಲ್ಲಿ ಉಭಯ ರಾಷ್ಟ್ರಗಳು ತಮ್ಮ ರಾಜತಾಂತ್ರಿಕ ಮತ್ತು ವಾಣಿಜ್ಯ ಸಂಬಂಧವನ್ನು ಹೆಚ್ಚಿಸುವ ನಿರ್ಧಾರ ಮಾಡಿದ್ದವು. ಭಾರತ-ರಷ್ಯಾ ದ್ವಿಪಕ್ಷೀಯ ಮಾತುಕತೆ ಜಾಗತಿಕ ಪರಿಣಾಮಗಳನ್ನು ಬೀರಲಿದೆ.

ಇದಕ್ಕೆ ಪೂರಕವಾಗಿ ಇದೀಗ ವ್ಲಾಡಿಮಿರ್ ಪುಟಿನ್ ನೇರವಾಗಿ ಭಾರತದ ಪರವಾಗಿ ಮಾತನಾಡಿದ್ದು, ಅಮೆರಿಕದ ಸುಂಕ ಸಮರವನ್ನು ತೀವ್ರವಾಗಿ ಟೀಕಿಸಿದ್ದಾರೆ. ಅಮೆರಿಕವು ರಷ್ಯಾ ಕಚ್ಚಾತೈಲ ಖರೀದಿಸದಂತೆ ಭಾರತದ ಮೇಲೆ ಒತ್ತಡ ಹೇರಿದಾಗಲೂ, "ಭಾರತದ ಸಾರ್ವಭೌಮ ನಿರ್ಧಾರವನ್ನು ಯಾರೂ ಪ್ರಶ್ನಿಸಬಾರದು" ಎಂದು ಹೇಳುವ ಮೂಲಕ ರಷ್ಯಾ ಭಾರತದ ಪರವಾಗಿ ಧ್ವನಿ ಎತ್ತಿತ್ತು.

# ಸಚಿವ ಸ್ಥಾನ ಕಳೆದುಕೊಂಡರೂ ಕುಗ್ಗದ ರಾಜಣ್ಣ, ತುಮಕೂರು ಡಿಸಿಸಿ ಬ್ಯಾಂಕ್‌ಗೆ 7ನೇ ಬಾರಿಗೆ ಅಧ್ಯಕ್ಷರಾಗಿ ಆಯ್ಕೆ




**ತುಮಕೂರು:** ಇತ್ತೀಚೆಗಷ್ಟೇ ಸಚಿವ ಸಂಪುಟದಿಂದ ನಿರ್ಗಮಿಸಿದ್ದ ಹಿರಿಯ ರಾಜಕಾರಣಿ ಕೆ.ಎನ್. ರಾಜಣ್ಣ, ತಮ್ಮ ರಾಜಕೀಯ ಪ್ರಾಬಲ್ಯ ಕುಗ್ಗಿಲ್ಲ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ. ತುಮಕೂರು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ (ಡಿಸಿಸಿ ಬ್ಯಾಂಕ್) ಅಧ್ಯಕ್ಷ ಸ್ಥಾನಕ್ಕೆ ಗುರುವಾರ ನಡೆದ ಚುನಾವಣೆಯಲ್ಲಿ ಅವರು ಸತತ 7ನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ಮೂಲಕ ಸಹಕಾರಿ ಕ್ಷೇತ್ರದ ಮೇಲಿನ ತಮ್ಮ ಹಿಡಿತವನ್ನು ಪ್ರದರ್ಶಿಸಿದ್ದಾರೆ.

ಸೆಪ್ಟೆಂಬರ್ 4ರಂದು ಗುರುವಾರ ನಡೆದ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯಲ್ಲಿ, ಬ್ಯಾಂಕಿನ 14 ಜನ ನಿರ್ದೇಶಕರನ್ನು ಒಳಗೊಂಡ ಆಡಳಿತ ಮಂಡಳಿಯು ಕೆ.ಎನ್. ರಾಜಣ್ಣ ಅವರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿತು. ಈ ಫಲಿತಾಂಶ ಹೊರಬಿದ್ದ ಬೆನ್ನಲ್ಲೇ ಅವರ ಬೆಂಬಲಿಗರು ಹಾಗೂ ಅಭಿಮಾನಿಗಳು ಭಾರೀ ಸಂಭ್ರಮಾಚರಣೆ ನಡೆಸಿದರು.

ಇದಕ್ಕೂ ಮುನ್ನ ನಡೆದ ಡಿಸಿಸಿ ಬ್ಯಾಂಕ್ ನಿರ್ದೇಶಕ ಮಂಡಳಿ ಚುನಾವಣೆಯಲ್ಲೂ ರಾಜಣ್ಣ ಬಣ ಸಂಪೂರ್ಣ ಮೇಲುಗೈ ಸಾಧಿಸಿತ್ತು. ಒಟ್ಟು 14 ನಿರ್ದೇಶಕ ಸ್ಥಾನಗಳ ಪೈಕಿ 8 ಸ್ಥಾನಗಳಿಗೆ ರಾಜಣ್ಣ ಬೆಂಬಲಿತ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದರೆ, ಉಳಿದ 6 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲೂ ರಾಜಣ್ಣ ಬಣದ ಅಭ್ಯರ್ಥಿಗಳೇ ಭರ್ಜರಿ ಜಯ ಸಾಧಿಸಿದ್ದರು. ಈ ಮೂಲಕ ವಿರೋಧಿಗಳಿಗೆ ಯಾವುದೇ ಅವಕಾಶ ನೀಡಲಿಲ್ಲ.

ಅವಿರೋಧವಾಗಿ ಆಯ್ಕೆಯಾದ ಪ್ರಮುಖರಲ್ಲಿ ಕೆ.ಎನ್. ರಾಜಣ್ಣ, ಅವರ ಪುತ್ರ ರಾಜೇಂದ್ರ, ಜಿ.ಜಿ. ರಾಜಣ್ಣ, ಹಾಗೂ ಮಾಲತಿ ಸೇರಿದ್ದರು. ಇನ್ನು ಚುನಾವಣೆ ಎದುರಿಸಿದ ತಿಪಟೂರು ಕ್ಷೇತ್ರದಲ್ಲಿ ಶಾಸಕ ಕೆ. ಷಡಕ್ಷರಿ ಮತ್ತು ಪಾವಗಡದಲ್ಲಿ ಶಾಸಕ ಎಚ್.ವಿ. ವೆಂಕಟೇಶ್ ಅವರೂ ಗೆಲುವು ಸಾಧಿಸಿದ್ದರು.

ಚುನಾವಣೆಯಲ್ಲಿ ಕೆಲವು ಕುತೂಹಲಕಾರಿ ಘಟನೆಗಳು ನಡೆದಿದ್ದವು. ಗುಬ್ಬಿ ತಾಲೂಕಿನಲ್ಲಿ ರಾಜಣ್ಣ ಬಣದ ಎಚ್.ಸಿ. ಪ್ರಭಾಕರ್ 21 ಮತಗಳನ್ನು ಪಡೆದು ಗೆದ್ದರೆ, ಅವರ ಪ್ರತಿಸ್ಪರ್ಧಿ ಎಂ.ಎಸ್. ಚನ್ನಮಲ್ಲಿಕಾರ್ಜುನ ಒಂದೇ ಒಂದು ಮತವನ್ನೂ ಪಡೆದಿರಲಿಲ್ಲ. . ಅಚ್ಚರಿಯ ಸಂಗತಿಯೆಂದರೆ, ಚನ್ನಮಲ್ಲಿಕಾರ್ಜುನ ಅವರು ತಮಗೆ ತಾವೇ ಮತ ಹಾಕಿಕೊಳ್ಳದಿರುವುದು ಚರ್ಚೆಗೆ ಗ್ರಾಸವಾಗಿತ್ತು. ಇದನ್ನು ರಾಜಣ್ಣ ಅವರು "ಚುನಾವಣಾ ಇತಿಹಾಸದಲ್ಲೇ ವಿಶೇಷ" ಎಂದು ಬಣ್ಣಿಸಿದ್ದರು.

ಕೆ.ಎನ್. ರಾಜಣ್ಣ ಅವರು 1972ರಿಂದಲೂ ಸಹಕಾರಿ ಕ್ಷೇತ್ರದಲ್ಲಿ ಸಕ್ರಿಯರಾಗಿದ್ದಾರೆ. ಈ ಹಿಂದೆ ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷರಾಗಿ ಎರಡು ಬಾರಿ ಸೇವೆ ಸಲ್ಲಿಸಿದ್ದ ಅವರು ರಾಷ್ಟ್ರಮಟ್ಟದ ಸಹಕಾರಿ ಸಂಸ್ಥೆಗಳಲ್ಲೂ ಕಾರ್ಯನಿರ್ವಹಿಸಿದ ಅನುಭವ ಹೊಂದಿದ್ದಾರೆ.

ಸಚಿವ ಸ್ಥಾನ ಕಳೆದುಕೊಂಡ ಬಳಿಕ ಈ ಚುನಾವಣೆ ರಾಜಣ್ಣ ಅವರಿಗೆ ಪ್ರತಿಷ್ಠೆಯ ವಿಷಯ ಆಗಿತ್ತು. ಇದರಲ್ಲಿ ಸಂಪೂರ್ಣ ಯಶಸ್ಸು ಸಾಧಿಸುವ ಮೂಲಕ ಅವರು ಜಿಲ್ಲಾ ರಾಜಕಾರಣದಲ್ಲಿ ತಮ್ಮ ಶಕ್ತಿ ಇನ್ನೂ ಉಳಿದಿದೆ ಎಂಬ ಸಂದೇಶವನ್ನು ರವಾನಿಸಿದ್ದಾರೆ.

# ಒಂದು ರಾಷ್ಟ್ರ ಒಂಬತ್ತು ತೆರಿಗೆಗಳಾಗಿ ಬದಲಾಯಿತು ;

## ಜಿಎಸ್‌ಟಿ ಸುಧಾರಣೆಗಳ ವಿಳಂಬಕ್ಕೆ ಮಲ್ಲಿಕಾರ್ಜುನ ಖರ್ಗೆ ವ್ಯಂಗ್ಯ



**ಹೊಸದಿಲ್ಲಿ:** ಪ್ರತಿಪಕ್ಷಗಳು ಪರೋಕ್ಷ ತೆರಿಗೆಗಳನ್ನು ಸರಳೀಕರಿಸಬೇಕೆಂದು ನಿರಂತರವಾಗಿ ಒತ್ತಾಯಿಸುತ್ತಿದ್ದರೂ ಸಹ ಜಿಎಸ್‌ಟಿ ಸುಧಾರಣೆಗಳನ್ನು ಜಾರಿಗೆ ತರುವಲ್ಲಿ ವಿಳಂಬವಾಗುತ್ತಿರುವ ಬಗ್ಗೆ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮೋದಿ ಸರ್ಕಾರವನ್ನು ಟೀಕಿಸಿದರು. ಎಂಟು ವರ್ಷಗಳ ನಂತರ ಕೇಂದ್ರವು ಅಂತಿಮವಾಗಿ ಎಚ್ಚರಗೊಂಡಿರುವುದು ಒಳ್ಳೆಯದು ಎಂದು ಹೇಳಿದರು.

ಒಂದು ರಾಷ್ಟ್ರ, ಒಂದು ತೆರಿಗೆ, ಒಂದು ರಾಷ್ಟ್ರ ಒಂಬತ್ತು ತೆರಿಗೆಗಳಾಗಿ ಬದಲಾಯಿತು ಎಂದು ಜಿಎಸ್‌ಟಿ ಸುಧಾರಣೆಗಳ ವಿಳಂಬವನ್ನು ಮಲ್ಲಿಕಾರ್ಜುನ ಖರ್ಗೆ ಪ್ರಶ್ನಿಸಿದ್ದಾರೆ.

ಜಿಎಸ್‌ಟಿ ಮಂಡಳಿಯು ಇತ್ತೀಚೆಗೆ ತೆರಿಗೆ ಪದ್ಧತಿಯಲ್ಲಿ ವ್ಯಾಪಕ ಬದಲಾವಣೆಗಳನ್ನು ಅಂಗೀಕರಿಸಿದ್ದು, ಅಗತ್ಯ ಸರಕು ಮತ್ತು ಸೇವೆಗಳ ಮೇಲಿನ ಸ್ಲ್ಯಾಬ್‌ಗಳ ಸಂಖ್ಯೆಯನ್ನು ಕಡಿಮೆ ಮಾಡಿದೆ ಮತ್ತು ದರಗಳನ್ನು ಕಡಿತಗೊಳಿಸಿದೆ.

ಈ ಕ್ರಮಕ್ಕೆ ಪ್ರತಿಕ್ರಿಯಿಸಿದ ಖರ್ಗೆ, "ಸುಮಾರು ಒಂದು ದಶಕದಿಂದ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಜಿಎಸ್‌ಟಿಯನ್ನು ಸರಳೀಕರಿಸಬೇಕೆಂದು ಒತ್ತಾಯಿಸುತ್ತಿದೆ. ಮೋದಿ ಸರ್ಕಾರ 'ಒಂದು ರಾಷ್ಟ್ರ, ಒಂದು ತೆರಿಗೆ'ಯನ್ನು 'ಒಂದು ರಾಷ್ಟ್ರ, 9 ತೆರಿಗೆಗಳಾಗಿ ರಿವರ್ತಿಸಿದೆ. ಇದರಲ್ಲಿ ಶೇಕಡಾ 0, ಶೇಕಡಾ 5, ಶೇಕಡಾ 12, ಶೇಕಡಾ 18, ಶೇಕಡಾ 28 ಮತ್ತು ಶೇಕಡಾ 0.25, ಶೇಕಡಾ 1.5, ಶೇಕಡಾ 3 ಮತ್ತು ಶೇಕಡಾ 6 ರ ವಿಶೇಷ ದರಗಳು ಸೇರಿವೆ" ಎಂದು ಪೋಸ್ಟ್ ಮಾಡಿದ್ದಾರೆ.

ಕಾಂಗ್ರೆಸ್ ತನ್ನ 2019 ಮತ್ತು 2024 ರ ಪ್ರಣಾಳಿಕೆಗಳಲ್ಲಿ ಸರಳ ಮತ್ತು ತರ್ಕಬದ್ಧ ತೆರಿಗೆ ವ್ಯವಸ್ಥೆಯೊಂದಿಗೆ ಜಿಎಸ್ಟಿ 2.0 ಅನ್ನು ಈಗಾಗಲೇ ಪ್ರಸ್ತಾಪಿಸಿದೆ. ಜಿಎಸ್ಟಿ ಅನುಸರಣೆಗಳನ್ನು ಸರಳಗೊಳಿಸುವಂತೆ ಒತ್ತಾಯಿಸಿದೆ. ಇದು ಎಂಎಸ್‌ಎಂಇಗಳು ಮತ್ತು ಸಣ್ಣ ವ್ಯವಹಾರಗಳ ಮೇಲೆ ತೀವ್ರ ಪರಿಣಾಮ ಬೀರಿದೆ ಎಂದು ಅವರು ಹೇಳಿದರು. 2005 ರಲ್ಲಿ ಕಾಂಗ್ರೆಸ್-ಯುಪಿಎ ಸರ್ಕಾರವು ಜಿಎಸ್ಟಿ ಕಲ್ಪನೆಯನ್ನು ಮೊದಲು ಪರಿಚಯಿಸಿತು ಮತ್ತು 2011 ರಲ್ಲಿ ಆಗಿನ ಹಣಕಾಸು ಸಚಿವ ಪ್ರಣಬ್ ಮುಖರ್ಜಿ ಅವರು ಜಿಎಸ್ಟಿ ಮಸೂದೆಯನ್ನು ಮಂಡಿಸಿದಾಗ, ಅದನ್ನು ಬಿಜೆಪಿ ವಿರೋಧಿಸಿತು ಎಂದು ಖರ್ಗೆ ನೆನಪಿಸಿಕೊಂಡರು.

ಮೋದಿ ಅವರು ಮುಖ್ಯಮಂತ್ರಿಯಾಗಿದ್ದಾಗ ಜಿಎಸ್‌ಟಿಯನ್ನು ತೀವ್ರವಾಗಿ ವಿರೋಧಿಸಿದ್ದರು. ಇಂದು, ಅದೇ ಬಿಜೆಪಿ ಸರ್ಕಾರವು ಸಾಮಾನ್ಯ ಜನರಿಂದ ತೆರಿಗೆ ಸಂಗ್ರಹಿಸುವುದೇ ಒಂದು ದೊಡ್ಡ ಸಾಧನೆ ಎಂಬಂತೆ ದಾಖಲೆಯ ಜಿಎಸ್ಟಿ ಸಂಗ್ರಹವನ್ನು ಆಚರಿಸುತ್ತಿದೆ" ಎಂದು ಹೇಳುವ ಮೂಲಕ ಖರ್ಗೆ ಪ್ರಸ್ತುತ ಸರ್ಕಾರವನ್ನು ಬೂಟಾಟಿಕೆ ಎಂದು ಆರೋಪಿಸಿದರು. ದೇಶದ ಇತಿಹಾಸದಲ್ಲಿ ಮೊದಲ ಬಾರಿಗೆ ರೈತರ ಮೇಲೆ ತೆರಿಗೆ ವಿಧಿಸಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

'ಮೋದಿ ಸರ್ಕಾರ ಕೃಷಿ ವಲಯದ ಕನಿಷ್ಠ 36 ವಸ್ತುಗಳ ಮೇಲೆ ಜಿಎಸ್‌ಟಿ ವಿಧಿಸಿತ್ತು. ಹಾಲು-ಮೊಸರು, ಹಿಟ್ಟು-ಧಾನ್ಯಗಳು, ಮತ್ತು ಮಕ್ಕಳ ಪೆನ್ಸಿಲ್‌ಗಳು, ಪುಸ್ತಕಗಳು, ಆಮ್ಲಜನಕ, ವಿಮೆ ಮತ್ತು ಆಸ್ಪತ್ರೆ ವೆಚ್ಚಗಳು - ಇಂತಹ ದೈನಂದಿನ ವಸ್ತುಗಳ ಮೇಲೆ ಮೋದಿ ಸರ್ಕಾರ ಜಿಎಸ್‌ಟಿ ತೆರಿಗೆ ವಿಧಿಸಿದೆ. ಅದಕ್ಕಾಗಿಯೇ ನಾವು ಈ ಬಿಜೆಪಿಯ ಜಿಎಸ್‌ಟಿಯನ್ನು 'ಗಬ್ಬರ್ ಸಿಂಗ್ ತೆರಿಗೆ' ಎಂದು ಹೆಸರಿಸಿದ್ದೇವೆ," ಎಂದು ಅವರು ಹೇಳಿದರು.

ಜಿಎಸ್‌ಟಿಯ ಹೊರೆಯನ್ನು ಸಾಮಾನ್ಯ ನಾಗರಿಕರು ಅಸಮಾನವಾಗಿ ಭರಿಸುತ್ತಾರೆ. ಒಟ್ಟು ಜಿಎಸ್‌ಟಿಯ ಮೂರನೇ ಎರಡರಷ್ಟು, ಅಂದರೆ ಶೇ. 64 ರಷ್ಟು ಬಡವರು ಮತ್ತು ಮಧ್ಯಮ ವರ್ಗದವರ ಜೇಬಿನಿಂದ ಬರುತ್ತದೆ. ಆದರೆ ಜಿಎಸ್‌ಟಿಯ ಕೇವಲ ಶೇ. 3 ರಷ್ಟು ಮಾತ್ರ ಕೋಟ್ಯಾಧಿಪತಿಗಳಿಂದ ಸಂಗ್ರಹವಾಗುತ್ತದೆ, ಆದರೆ ಕಾರ್ಪೊರೇಟ್ ತೆರಿಗೆ ದರವನ್ನು ಶೇ. 30 ರಿಂದ ಶೇ. 22 ಕ್ಕೆ ಇಳಿಸಲಾಗಿದೆ" ಎಂದು ಅವರು ಹೇಳಿದರು.

"8 ವರ್ಷ ತಡವಾದರೂ, ಜಿಎಸ್‌ಟಿಗೆ ಸಂಬಂಧಿಸಿದ ಮೋದಿ ಸರ್ಕಾರದ 'ಕುಂಭಕರ್ಣಿಯ' ನಿದ್ರೆ ಕೊನೆಗೂ ಮುರಿದುಹೋಗಿರುವುದು ಒಳ್ಳೆಯದು, ಮತ್ತು ಅವರು ಎಚ್ಚರವಾದಾಗ ದರ ತರ್ಕಬದ್ಧಗೊಳಿಸುವಿಕೆಯ ಬಗ್ಗೆ ಮಾತನಾಡಿದ್ದಾರೆ. ತೆರಿಗೆ ದರಗಳು ಕಡಿಮೆಯಾಗುವುದರಿಂದ ಆದಾಯ ಕಡಿಮೆಯಾಗುವ ಸಾಧ್ಯತೆ ಇರುವುದರಿಂದ, 2024-25 ಅನ್ನು ಮೂಲ ವರ್ಷವಾಗಿ ತೆಗೆದುಕೊಂಡು ಐದು ವರ್ಷಗಳ ಕಾಲ ರಾಜ್ಯಗಳಿಗೆ ಸಂಪೂರ್ಣ ಪರಿಹಾರ ನೀಡಬೇಕು ಎಂದು ಕಾಂಗ್ರೆಸ್ ಅಧ್ಯಕ್ಷರು ಒತ್ತಾಯಿಸಿದರು. "ಜಿಎಸ್‌ಟಿಯ ಸಂಕೀರ್ಣ ಅನುಸರಣೆಗಳನ್ನು ಸಹ ತೆಗೆದುಹಾಕಬೇಕು; ಆಗ ಮಾತ್ರ ಎಂಎಸ್‌ಎಂಇಗಳು ಮತ್ತು ಸಣ್ಣ ಕೈಗಾರಿಕೆಗಳು ನಿಜವಾಗಿಯೂ ಪ್ರಯೋಜನ ಪಡೆಯುತ್ತವೆ" ಎಂದು ಅವರು ಹೇಳಿದರು.

# ಧರ್ಮಸ್ಥಳ ಕೇಸ್: ಎಸ್‌ಐಟಿ ಮುಂದೆ ಕಣ್ಣೀರಿಟ್ಟ ಯುಟ್ಯೂಬರ್ ಅಭಿಷೇಕ್ - ಸಮೀರ್ ಮನೆಯಲ್ಲಿ ಶೋಧ



**ಮಂಗಳೂರು:** ಧರ್ಮಸ್ಥಳದಲ್ಲಿ ಅನ್ಯಾಯ, ಅತ್ಯಾಚಾರಗಳು, ಅಕ್ರಮಗಳಾಗಿವೆ ಎಂದು ತಮ್ಮ ಯುಟ್ಯೂಬ್ ಚಾನೆಲ್ ನಲ್ಲಿ ಹೇಳಿಕೊಂಡಿದ್ದ ಅಭಿಷೇಕ್, ಈ ಪ್ರಕರಣದ ತನಿಖೆ ನಡೆಸುತ್ತಿರುವ ಎಸ್‌ಐಟಿ ಅಧಿಕಾರಿಗಳ ಮುಂದೆ ಕಣ್ಣೀರು ಹಾಕಿದ್ದಾನೆ. ಆ. 3ರಂದು ಎಸ್‌ಐಟಿ ಮುಂದೆ ವಿಚಾರಣೆಗಾಗಿ ಆಗಮಿಸಿದ್ದ ಅಭಿಷೇಕ್ ನನ್ನು ತಡರಾತ್ರಿ 2.30ರವರೆಗೆ ಪೊಲೀಸ್ ಅಧಿಕಾರಿಗಳು ವಿಚಾರಣೆಗೊಳಪಡಿಸಿದ್ದರು.

ಆ ಸಂದರ್ಭದಲ್ಲಿ ಕೆಲವು ಸ್ಫೋಟಕ ಮಾಹಿತಿಗಳನ್ನು ಆತ ಅಧಿಕಾರಿಗಳಿಗೆ ನೀಡಿದ್ದ ಎಂದು ತಿಳಿದುಬಂದಿದೆ. ಖಾಸಗಿ ಮಾಧ್ಯಮವೊಂದರಲ್ಲಿ ಪ್ರಸಾರದ ಮಾಹಿತಿಯ ಪ್ರಕಾರ, ?ಧರ್ಮಸ್ಥಳದ ವಿರುದ್ಧ ಅಪಪ್ರಚಾರ ಮಾಡಿದರೆ ತನ್ನ ಯುಟ್ಯೂಬ್ ಚಾನೆಲ್ ಗೆ ಹೆಚ್ಚಿನ ಲೈಕ್ಸ್ ಹಾಗೂ ವ್ಯೂಸ್ ಬರುತ್ತದೆ ಎಂಬ ಕಾರಣದಿಂದ ಈ ಕೆಲಸಕ್ಕೆ ಕೈ ಹಾಕಿದ್ದಾಗಿ ತಿಳಿಸಿದ್ದಾನೆ.

ವರದಿಗಳ ಪ್ರಕಾರ, ಧರ್ಮಸ್ಥಳದ ವಿಚಾರವಾಗಿ ಇತ್ತೀಚೆಗೆ ಕೇಸ್ ದಾಖಲಾಗುವ ಆರು ತಿಂಗಳ ಮೊದಲೇ ತಾನು ತನ್ನ ಯುಟ್ಯೂಬ್ ಗಾಗಿ ಧರ್ಮಸ್ಥಳದ ಬಗ್ಗೆ ವಿಡಿಯೋಗಳನ್ನು ಮಾಡಿಟ್ಟದ್ದಾಗಿ ಅಭಿಷೇಕ್ ಬಾಯಿಬಿಟ್ಟಿದ್ದಾನೆ. ಆರು ತಿಂಗಳ ಹಿಂದೆ ತಾವು ಗಿರೀಶ್ ಮಟ್ಟಣ್ಣನವರ್ ಅವರನ್ನು ಸಂಪರ್ಕ ಮಾಡಿದ್ದು ಅವರ ಸೂಚನೆಯ ಮೇರೆಗೆ ಕೆಲವು ಎಪಿಸೋಡ್ ಗಳನ್ನು ಮಾಡಿಟ್ಟಿದ್ದೆ. ಇತ್ತ, ಧರ್ಮಸ್ಥಳದ ಬಗ್ಗೆ ದೂರು ದಾಖಲಾಗುತ್ತಲೇ ಆ ಎಪಿಸೋಡ್ ಗಳನ್ನು ಪ್ರಸಾರ ಮಾಡಿದೆ ಎಂದು ಹೇಳಿದ್ದಾನೆ.

ಸೆ. 3ರಂದು ಮಂಗಳೂರಿನ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಿದ ನಂತರ ನ್ಯಾಯಾಲಯ ಕಲಾಪ ಕೊಠಡಿಯ ಬಾಗಿಲಿನಲ್ಲಿ ಕುಳಿತು ಚಿನ್ನಯ್ಯ ಅಳುತ್ತಿದ್ದ ಎಂದು ವರದಿಯಾಗಿದೆ. ಧರ್ಮಸ್ಥಳ ವಿರುದ್ಧ ದೂರುದಾರರ ಆಮಿಷಗಳಿಗೆ ಒಳಗಾಗಿ ನಾನು ತಪ್ಪು ಮಾಡಿದೆ. ಅವರ ನಂಬಿ ನಾನು ಮೋಸ ಹೋದೆ. ಈಗ ನನ್ನ ಪಾಲಿಗೆ ಯಾರಿದ್ದಾರೆ ಎಂದು ಆತ ಗೋಳಾಡುತ್ತಿದ್ದ ಎಂದು ಮೂಲಗಳು ತಿಳಿಸಿವೆ.

ಬುರುಡೆ ಚಿನ್ನಯ್ಯನನ್ನು ಸೆ. 3ರಿಂದ ಅನ್ವಯವಾಗುವಂತೆ ಎಸ್‌ಐಟಿ ಪೊಲೀಸರ ವಶಕ್ಕೆ ಒಪ್ಪಿಸಿ, ಮಂಗಳೂರಿನ ಸ್ಥಳೀಯ ನ್ಯಾಯಾಲಯ ಆದೇಶಿಸಿದೆ. 12 ದಿನಗಳ ಕಾಲ ಆತನನ್ನು ತಮ್ಮ ವಶದಲ್ಲಿಟ್ಟುಕೊಂಡಿದ್ದ ಪೊಲೀಸರು ವಿಚಾರಣೆ ನಡೆಸುತ್ತಿದ್ದರು. ಆತನ ಪೊಲೀಸ್ ಕಸ್ಟಡಿ ಸೆ. 3ರಂದು ಕೊನೆಗೊಂಡಿತ್ತು. ಆ ಹಿನ್ನೆಲೆಯಲ್ಲಿ ಅವರನ್ನು ಸೆ. 3ರಂದು ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿತ್ತು. ವಿಚಾರಣೆಯಿನ್ನೂ ಬಾಕಿಯಿರುವುದರಿಂದ ಆತನನ್ನು ತಮ್ಮ ವಶಕ್ಕೆ ಮರು ಒಪ್ಪಿಸುವಂತೆ ಎಸ್‌ಐಟಿ ಅಧಿಕಾರಿಗಳು ನ್ಯಾಯಾಲಯವನ್ನು ಕೋರಿದ್ದರು. ಆ ಹಿನ್ನೆಲೆಯಲ್ಲಿ, ನ್ಯಾಯಾಲಯ ಸೆ. 3ರಿಂದ ನಾಲ್ಕು ದಿನಗಳವರೆಗೆ ಆತನನ್ನು ಎಸ್‌ಐಟಿ ಕಸ್ಟಡಿಗೆ ನ್ಯಾಯಾಲಯ ಒಪ್ಪಿಸಿತು.

## ಧರ್ಮಸ್ಥಳದಲ್ಲಿ ವಿಜಯೇಂದ್ರಗೇನು ಕೆಲಸ?; ಮಂಜುನಾಥನ ಬಳಿ ಭ್ರಷ್ಟಾಚಾರ ಮಾಡಲ್ಲ ಅಂತ ಪ್ರತಿಜ್ಞೆ ಮಾಡ್ಲಿ: ಯತ್ನಾಳ್



**ಬೆಂಗಳೂರು:** ಧರ್ಮಸ್ಥಳ ಗ್ರಾಮದಲ್ಲಿ ಅನಾಥ ಶವ ಹೂಳಲಾಗಿದೆ ಎಂದು ಅಪಪ್ರಚಾರ ಮಾಡಿ, ಕ್ಷೇತ್ರದ ವಿರುದ್ಧ ಅಪಪ್ರಚಾರ ಮಾಡುತ್ತಿರು ಇರುದ್ಧ ಬಿಜೆಪಿ ಧರ್ಮಸ್ಥಳ ಚಲೋ ಯಾತ್ರೆ ಮಾಡಿತ್ತು. ಧರ್ಮಸ್ಥಳಕ್ಕೆ ಭೇಟಿ ಮಾಡಿ ವಿರೇಂದ್ರ ಹೆಗಡೆ ಅವರನ್ನು ಭೇಟಿ ಮಾಡಿದ್ದರು ಈ ಬಗ್ಗೆ ಶಾಸಕ ಯತ್ನಾಳ್ ಬೆಂಗಳೂರಿನಲ್ಲಿ ಮಾತನಾಡಿದ್ದಾರೆ.

ಧರ್ಮಸ್ಥಳ ಪ್ರಕರಣದ ಬಗ್ಗೆ ಕರ್ನಾಟಕದ ಸ್ವಾಮೀಜಿಗಳ ನಿಯೋಗ ದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಭೇಟಿಯಾಗಿ ಧರ್ಮಸ್ಥಳ ಗ್ರಾಮ ಮತ್ತು ಕ್ಷೇತ್ರ, ಶವ ಹೂತಿರುವ ವಿಚಾರವಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಭೇಟಿ ಮಾಡಿ ವಿಚಾರ ಮುಟ್ಟಿಸಿರುವ ಬಗ್ಗೆ ಯತ್ನಾಳ್ ಮಾತನಾಡಿ, ಭೇಟಿ ಮಾಡಿದ ಸ್ವಾಮಿಗಳು ಯಾರ್ಯಾರು ಇದ್ದಾರೆ? ಜೈನ ಧರ್ಮದವರು ಇದ್ದರೆ ಸರಿ.

ವಚನಾನಂದ ಸ್ವಾಮೀಜಿ ತನ್ನ ಜಾತಿಗೇ ಏನೂ ಮಾಡಲಾರದವ ಇನ್ನು ಧರ್ಮಸ್ಥಳದ ಬಗ್ಗೆ ಏನು ಮಾತಾಡುವುದು?. ಸುಮ್ಮನೆ ಇದು ನಾಟಕ. ಸ್ವತಃ ಪಂಚಮಸಾಲಿ ಸಮುದಾಯವೇ ದಿವಾಳಿ ಆಗಿ ಹೋಗಿದೆ. ಈಗ ಹಿಂದೂ ಸಮಾಜ, ಸನಾತನ ಧರ್ಮ ಅಂತಾ ಹೊಸ ನಾಟಕ ಎಬ್ಬಿಸಿದ್ದಾರೆ. ವಚನಾನಂದರನ್ನ ದೆಹಲಿಗೆ ತೆಗೆದುಕೊಂಡು ಹೋಗಿದ್ದಾರೆ ಅಂದರೆ ಇದು ಸುಮ್ಮನೆ ವಿಜಯೇಂದ್ರನ ಕಂಪನಿ ಅಂತಾ ಅನ್ನಿಸುತ್ತದೆ ಎಂದು ವಿಧಾನಸೌಧದಲ್ಲಿ ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು.

ಸೌಜನ್ಯ ಪ್ರಕರಣದಲ್ಲಿ ಹೈಕೋರ್ಟ್‌ವರೆಗೆ ಆಗಿರುವ ಆದೇಶಗಳು ಎಲ್ಲವೂ ಚಿಂತನೆ ಆದ ಮೇಲೆ ಎನ್‌ಐಎಗಾದರೂ ಕೊಡಲಿ

ರಾಜ್ಯ ಸರ್ಕಾರವೇ ಎನ್ ಐಎಗೆ ಕೊಡಬಹುದಲ್ಲ?. ರಾಜ್ಯ ಸರ್ಕಾರವೇ ಸಿಬಿಐ, ಎನ್‌ಐಎ ಏನಾದರೂ ಕೊಡಲಿ


ವಿಜಯೇಂದ್ರ ಸುಪ್ರೀಂ ಕೋರ್ಟ್ ಖರ್ಚು ನೋಡಿಕೊಳ್ಳುವ ಅವಶ್ಯಕತೆ ಇಲ್ಲ. ಅವರಿಗೆ ಸೌಜನ್ಯ ಪ್ರಕರಣದ ಮೂಲಕ ಯಾರನ್ನೋ ಟಾರ್ಗೆಟ್ ಮಾಡಬೇಕಿದೆ. ನಾವೇನೂ ಸೌಜನ್ಯ ಪ್ರಕರಣದಲ್ಲಿ ಯಾರನ್ನೂ ಉಳಿಸಬೇಕು ಅಂತಾ ಇಲ್ಲ

ಯಾರೇ ಆದರೂ ಶಿಕ್ಷೆ ಆಗಲೇಬೇಕು ಯಾವುದೇ ತನಿಖೆಗೂ ನಮ್ಮದು ಯಾವುದೇ ತಕರಾರು ಇಲ್ಲ ಎಂದು ಯತ್ನಾಳ್ ಹೇಳಿದರು.

12-13 ವರ್ಷದಿಂದ ಸೌಜನ್ಯ ಪ್ರಕರಣಕ್ಕೆ ನ್ಯಾಯ ಕೇಳುತ್ತಿದ್ದೇವೆ, ಅದಕ್ಕೊಂದು ಅಂತ್ಯ ಬೇಕಲ್ವಾ? ಎನ್‌ಐಎ, ಎಫ್ ಬಿಐ, ಕೊಡುವುದು ಕೊಟ್ಟುಬಿಡಿ. ಧರ್ಮಸ್ಥಳದ ವಿಷಯವೇ ಮುಗಿದು ಹೋಗಿರುವಾಗ ಅಲ್ಲಿ ಹೋಗಿ ಬಿಜೆಪಿ ಏನು ಮಾಡುವುದು?

ಅಲ್ಲಿ ಏನೂ ಸಿಕ್ಕಿಲ್ಲ, ಸಿಕ್ಕಿಲ್ಲ ಅಂದರೆ ಎಸ್‌ಐಟಿ ಏನು ವರದಿ ಕೊಡುತ್ತದೋ ಕೊಡಲಿ. ಸುಮ್ಮನೆ ಕಾಟಾಚಾರಕ್ಕೆ ನಾವು ಧರ್ಮಸ್ಥಳದ ಭಕ್ತರು ಅಂತಾ ತೋರಿಸಲು ಹೋಗಿ ಯಾಕೆ? ಎಂದು ವಿಜಯೇಂದ್ರ ವಿರುದ್ಧ ಕಿಡಿಕಾರಿದರು.

## ನಾನೊಂದು ತೀರ, ನೀನೊಂದು ತೀರದಂತಾಗಿರುವ ಬಿಜೆಪಿ - ಜೆಡಿಎಸ್ ಮೈತ್ರಿ : ನಿಖಿಲ್ ಕುಮಾರಸ್ವಾಮಿ ಮಹತ್ವದ ಸ್ಪಷ್ಟನೆ



**ಬೆಂಗಳೂರು :** ರಾಷ್ಟ್ರ ಮಟ್ಟದಲ್ಲಿ ಅಮಿತ್ ಶಾ - ದೇವೇಗೌಡ - ಕುಮಾರಸ್ವಾಮಿ ನಡುವೆ ಮಾತುಕತೆ ನಡೆದು, ಕರ್ನಾಟಕದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯನ್ನು ಮಾಡಿಕೊಂಡಿತ್ತು. ಇದಕ್ಕೆ, ಕರ್ನಾಟಕ ಬಿಜೆಪಿ ಘಟಕದಲ್ಲಿ ಅಪಸ್ವರ ಇದ್ದರೂ, ಕೇಂದ್ರದ ನಾಯಕರು ಅದಕ್ಕೆ ಸೊಪ್ಪು ಹಾಕಲು ಹೋಗಲಿಲ್ಲ.

ಎಚ್.ಡಿ.ಕುಮಾರಸ್ವಾಮಿಯವರು ಕೇಂದ್ರ ಸಚಿವರಾದ ನಂತರ, ಬಹುತೇಕ ರಾಜ್ಯ ಜೆಡಿಎಸ್ ರಾಜಕೀಯವನ್ನು ಯುವ ಘಟಕದ ಅಧ್ಯಕ್ಷರಾಗಿರುವ ನಿಖಿಲ್ ಕುಮಾರಸ್ವಾಮಿ ನೋಡಿಕೊಳ್ಳುತ್ತಿದ್ದಾರೆ. ಆದರೆ, ಅದ್ಯಾಕೋ, ಹೊಂದಾಣಿಕೆಯ ಸಮಸ್ಯೆಯೇ ಎನ್ನುವಂತೆ, ಬಿಜೆಪಿ ಮತ್ತು ಜೆಡಿಎಸ್ ನಾಯಕರ ನಡುವೆ ಹೊಂದಾಣಿಕೆಯ ಕೊರತೆ ಎದುರಾದಂತೆ ಕಾಣುತ್ತಿದೆ.

ಇದಕ್ಕೆ ತಾಜಾ ಉದಾಹರಣೆಯೆಂದರೆ ಧರ್ಮಸ್ಥಳದ ವಿದ್ಯಮಾನ. ಧರ್ಮಸ್ಥಳ ಚಲೋ ಕಾರ್ಯಕ್ರಮವನ್ನು ಬಿಜೆಪಿ ಮತ್ತು ಜೆಡಿಎಸ್ ಪ್ರತ್ಯೇಕವಾಗಿ ಆಯೋಜಿಸಿತ್ತು. ಇದು, ಚುನಾವಣೆಗೋಸ್ಕರ ಮಾತ್ರ ಎರಡು ಪಾರ್ಟಿಯ ನಾಯಕರು ಮಾಡಿಕೊಂಡ ಮೈತ್ರಿಯೇ ಎಂದು ಜನಸಾಮಾನ್ಯರಲ್ಲಿ ಚರ್ಚೆಯ ವಿಷಯವಾಗಿತ್ತು. ಇದಕ್ಕೆ, ನಿಖಿಲ್ ಕುಮಾರಸ್ವಾಮಿ ಸ್ಪಷ್ಟನೆಯನ್ನು ನೀಡಿದ್ದಾರೆ.

"ಬಿಜೆಪಿ ಒಂದು ರಾಜಕೀಯ ಪಕ್ಷ, ಜೆಡಿಎಸ್ ಕೂಡ ಒಂದು ರಾಜಕೀಯ ಪಕ್ಷ ಇದೆ. ಯಾವುದನ್ನ ಒಟ್ಟಾಗಿ ಹೋರಾಡಬೇಕು, ಯಾವುದರಲ್ಲಿ ಪ್ರತ್ಯೇಕವಾಗಿ ಹೋರಾಟ ಮಾಡಬೇಕು ಅಂತ ಹಿರಿಯರು ತೀರ್ಮಾನ ಮಾಡುತ್ತಾರೆ. ಧರ್ಮಸ್ಥಳ ವಿಚಾರದಲ್ಲಿ ಕೂಡ ಹೋರಾಟ ಮಾಡುವಾಗ ಬಿಜೆಪಿ ನೆನಪಿಸಿಕೊಂಡಿದ್ದೇವೆ" ಎಂದು ನಿಖಿಲ್ ಕುಮಾರಸ್ವಾಮಿ ಹೇಳಿದರು.

ನಮ್ಮ ಹೋರಾಟದ ಬಗ್ಗೆ ಕಾಂಗ್ರೆಸ್ ಆಲೋಚಿಸಬಹುದು ಅಷ್ಟೇ. ಕೇಂದ್ರ ಮತ್ತು ರಾಜ್ಯದ ನಾಯಕರ ಜೊತೆಯಲ್ಲಿ ಒಟ್ಟಾಗಿ ಹೋಗುತ್ತೇವೆ. ಧಾರ್ಮಿಕ ಕ್ಷೇತ್ರದ ಪರವಾಗಿ ನಿಲ್ಲುವ ಕೆಲಸ ನಾವು ಮಾಡಬೇಕಿದೆ. ಹಾಗಾಗಿ ನಾವು ಹೋರಾಟ ಮಾಡ್ತಿದ್ದೇವೆ ಎಂದು ನಿಖಿಲ್ ಕುಮಾರಸ್ವಾಮಿ ತಿಳಿಸಿದರು.

ಬಾನು ಮುಷ್ತಾಕ್ ಕವಿಯತ್ರಿ , ಬೂಕರ್ ಪ್ರಶಸ್ತಿ ಪಡೆದಿದ್ದಾರೆ. ಬಾನು ಮುಷ್ತಾಕ್ ಅವರು ತಾಯಿ ಭುವನೇಶ್ವರಿ ವಿಚಾರ, ಹರಿಶಿಣ ಕುಂಕುಮ ಬಗ್ಗೆ ಮಾತಾಡಿದ್ದಾರೆ. ನಮ್ಮ ಧರ್ಮದ ಬಗ್ಗೆ ಎಷ್ಟು ತಾತ್ಸರದಿಂದ ನೋಡ್ತಿದ್ದಾರೆ ಅನ್ನೋದನ್ನ ಅವರಿಗೆ ಬಿಟ್ಟಿದ್ದೇವೆ ಎಂದು ನಿಖಿಲ್ ಕುಮಾರಸ್ವಾಮಿ ಉತ್ತರಿಸಿದರು.

ಭೋವಿ ನಿಗಮದ ಅಧ್ಯಕ್ಷ ಕಮೀಷನ್ ಕೇಳಿದ್ದಾರೆ. ಖಲಕಖಿಖಕ ಹಣ ಮೀಸಲಿಟ್ಟಿದ್ದಾರೆ, ದಲಿತರ ಅಭಿವೃದ್ಧಿಗೆ ಮೀಸಲಿಡಲಾಗಿದೆ. ಭೋವಿ ನಿಗಮದ ಅಧ್ಯಕ್ಷರು ಹಣ ಕೇಳಿರೋದು ನೋಡಿದ್ದೇವೆ. ದಲಿತರಿಗೆ ನೀವು ನ್ಯಾಯ ಕೊಟ್ಟಿದ್ದೀರಾ.? ಸಚಿಬರೊಬ್ಬರು ಜೈಲಿಗೆ ಹೋಗಿ ಬಂದಿದ್ದಾರೆ.

## ದಸರಾ ಉದ್ಘಾಟಕರಿಗೆ ಚಾಮುಂಡಿ ಬೆಟ್ಟದ ಶಿಷ್ಟಾಚಾರ ಸಂಪ್ರದಾಯ ಮೊದಲು ತಿಳಿಸ್ರಿ: ವಿ ಸೋಮಣ್ಣ ಕಿಡಿ

**ಮೈಸೂರು :** ಕ್ಷುಲಕ ರಾಜಕಾರಣ ಬಿಟ್ಟು ಜನರ ನೋವಿಗೆ ಸ್ಪಂದಿಸಿ. ಅತಿವೃಷ್ಠಿಯಿಂದ ಎಲ್ಲೆಡೆ ನಷ್ಟವಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರನ್ನು ತಮ್ಮ ಜಿಲ್ಲೆಗಳಿಗೆ ಕಳಿಸಿ ಎಂದು ಕೇಂದ್ರ ಸಚಿವ ವಿ ಸೋಮಣ್ಣ ಮೈಸೂರಿನಲ್ಲಿ ಹೇಳಿದರು. ನಂಬಿಕೆಗೆ, ಭಕ್ತಿಗೆ, ಇತಿಹಾಸಕ್ಕೆ ಮತ್ತೊಂದು ಹೆಸರು ಚಾಮುಂಡಿ ಬೆಟ್ಟ. ದಸರಾ ಉದ್ಘಾಟಕರಿಗೆ ತಾಯಿ ಚಾಮುಂಡಿಯ ಇತಿಹಾಸ ಉತ್ಸವ, ಆರಾಧನೆ, ಸಂಪ್ರದಾಯವನ್ನು ಮೊದಲು ತಿಳಿಸಿ. ಸಂಪ್ರದಾಯ ಅರಿತು ಅವರು ತಮ್ಮ ಕಾರ್ಯ ಮಾಡಲಿ. ದಸರಾ ಉದ್ಘಾಟಕರು ಈ ಸ್ಥಾನಕ್ಕೆ ಅರ್ಹರೋ ಅಥವಾ ಇಲ್ಲವೋ ಎಂಬ ಚರ್ಚೆ ಮಾಡಲ್ಲ. ನಮ್ಮ ಸಂಪ್ರದಾಯಕ್ಕೆ ಧಕ್ಕೆ ಆಗದಂತೆ ಉದ್ಘಾಟಕರು ನಡೆದುಕೊಳ್ಳಲಿ. ಸರ್ಕಾರ ಯಾರನ್ನು ತೃಪ್ತಿಪಡಿಸಲು ಉದ್ಘಾಟಕರನ್ನು ಆಯ್ಕೆ ಮಾಡಿಕೊಂಡಿದೆಯೋ ಗೊತ್ತಿಲ್ಲ. ಧಾರ್ಮಿಕ ಕೆಲಸದ ವಿಚಾರದಲ್ಲಿ ಸರ್ಕಾರ ಟೇಕ್ ಇಟ್ ಫಾರ್ ಗ್ರ್ಯಾಂಟೆಂಡ್ ಅಂದು ಕೊಳ್ಳಬೇಡಿ. ಉದ್ಘಾಟಕರಿಗೆ, ಸರ್ಕಾರಕ್ಕೆ ಚಾಮುಂಡಿ ಬೆಟ್ಟದ ಶಿಷ್ಟಾಚಾರ, ಸಂಪ್ರದಾಯ ಪಾಲಿಸುವ ಬುದ್ಧಿ ಕೊಡಲಿ ಎಂದರು.

ತಮ್ಮದೇ ಹೇಳಿಕೆಗೆ ಕೇಂದ್ರ ಸಚಿವ ವಿ ಸೋಮಣ್ಣ ಉಲ್ಟಾ ಹೊಡೆದಿದ್ದಾರೆ. ತುಮಕೂರಿನಲ್ಲಿ ಎಲ್ಲಾ ಕೆಲಸಗಳನ್ನು ಮಾಡಿದ್ದೇನೆ. ಹೀಗಾಗಿ ಅಲ್ಲಿ ಮುಂದೆ ಚುನಾವಣೆಗೆ ಸ್ಪರ್ಧಿಸೋದಿಲ್ಲ ಅಂತಾ ಹೇಳಿದ್ದೀನಿ. ಇನ್ನು ಮುಂದೆ ಬೇರೆ ಕಡೆಗೆ ಹೋಗೋಣ ಅಂತಾ.

ಎಲ್ಲಿ ಅಂತಾ ನಿರ್ಧಾರ ಆಗಿಲ್ಲ. ದೇವರ ಆಶೀರ್ವಾದ, ದೇವರ ಇಚ್ಛೆ ಏನಿದೆಯೋ ಗೊತ್ತಿಲ್ಲ. ಅಭಿವೃದ್ಧಿ ವಿಚಾರದಲ್ಲಿ ರಾಜ್ಯ ಸರ್ಕಾರಕ್ಕೆ ಇಚ್ಛಾಶಕ್ತಿಯ ಕೊರತೆ ಇದೆ. ಎಷ್ಟು ದಿನ ಆಡಳಿತ ಮಾಡ್ತಿರೋ ಗೊತ್ತಿಲ್ಲ. ಸರ್ಕಾರ ಜನರ ಕೆಲಸ ಮಾಡಲಿ. ಕೇಂದ್ರದ ಯೋಜನೆಗಳ ಅನುಷ್ಠಾನಕ್ಕೆ ನಮ್ಮ ಜೊತೆ ಕುಳಿತು ಚರ್ಚೆ ಮಾಡಲಿ. ನಾನೇ ಸಭೆಯ ಬಗ್ಗೆ ಆಸಕ್ತಿ ತೆಗೆದುಕೊಳ್ತೀನಿ ಎಂದರು.

# ಜಿಲ್ಲಾ ಮಟ್ಟದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ

**ಚಿಕ್ಕಮಗಳೂರು** : 2025-26ನೇ ಸಾಲಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶಗಳನ್ನೊಳಗೊಂಡಂತೆ) ಜಿಲ್ಲಾ ಮಟ್ಟದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯು ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ. ಜಾರ್ಜ್ ಅವರ ಅಧ್ಯಕ್ಷತೆಯಲ್ಲಿ ಸೆಪ್ಟಂಬರ್ 12 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯಿತಿಯ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಜಿಲ್ಲಾ ಮಟ್ಟದ ತ್ರೈಮಾಸಿಕ ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಮಿತಿ ಸದಸ್ಯ ಕಾರ್ಯದರ್ಶಿಗಳು ಹಾಗೂ ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಡವೆ ಬೇಟೆ: ಇಬ್ಬರ ಬಂಧನ

**ಚಿಕ್ಕಮಗಳೂರು:** ಕಡೂರು ತಾಲ್ಲೂಕು ಸಗನೀ ಬಸವನಹಳ್ಳಿ ಗ್ರಾಮದಲ್ಲಿ ಸೆಪ್ಟಂಬರ್ 1 ರಂದು ಕಡವೆ ಬೇಟೆಯಾಡಿದ ಆರೋಪದಲ್ಲಿ ಇಬ್ಬರನ್ನು ಬಂಧಿಸಲಾಗಿದೆ.ಸಗನೀ ಬಸವನಹಳ್ಳಿ ಗ್ರಾಮದ ಗೋವಿಂದಪ್ಪ ಎಂಬುವವರ ಮಗ ಮಂಜುನಾಥ ಹಾಗೂ ಮುನಿಯ ಬೋವಿ ಎಂಬುವವರ ಮಗ ಮಂಜಾಬೋವಿ ಎಂಬುವವರೇ ಬಂಧಿತ ಆರೋಪಿಗಳು. ಆರೋಪಿಗಳು ಇತರರೊಂದಿಗೆ ಸೇರಿ ಬೇಟೆಯಾಡಿದ್ದು, ಈ ಬಗ್ಗೆ ಸುಳಿವರಿತ ಪೊಲೀಸರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದು, ಸ್ಥಳದಲ್ಲಿ ಪತ್ತೆಯಾದ ಕಡವೆ ಮಾಂಸ, ಧರ್ಮ ಹಾಗೂ ಇತರ ಪರಿಕರಗಳನ್ನು ವಶಪಡಿಸಿಕೊಳ್ಳಲಾಗಿದೆ.ಸಿ.ಐ.ಡಿ ಪೊಲೀಸ್ ಅರಣ್ಯ ಸಂಚಾರಿ ದಳದ ಪೊಲೀಸ್ ಉಪ ಮಹಾನಿರೀಕ್ಷಕರಾದ ಜಿ.ಸಂಗೀತಾ, , ಸಿ.ಐ.ಡಿ ಅರಣ್ಯ ಮಡಿಕೇರಿ ಘಟಕದ ಪೊಲೀಸ್ ಅಧೀಕ್ಷಕ (ಪ್ರಭಾರ) ಪಿ.ಎಸ್.ಸುದರ್ಶನ್ ಅವರ ಮಾರ್ಗದರ್ಶನದಲ್ಲಿ ಉಪ ನಿರೀಕ್ಷಕರಾದ ಕೆ.ಆರ್.ಸುನಿತ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆಸಿದ್ದಾರೆ. ಕಾರ್ಯಾಚರಣೆಯಲ್ಲಿ ಸಿಬ್ಬಂದಿಗಳಾದ ಡಿ.ಹೆಚ್.ದಿನೇಶ, ಎಸ್.ಕೆ.ದಿವಾಕರ, ಕೆ.ಎಸ್.ದಿಲೀಪ್, ಎ.ಜಿ. ಹಾಲೇಶ್, ಹೆಚ್.ದೇವರಾಜ, ವೈ.ಹೇಮಾವತಿ, ಚಾಲಕರಾದ ತಿಮ್ಮಶೆಟ್ಟಿ ಹಾಗೂ ಕಡೂರು ವಲಯ ಅರಣ್ಯಾಧಿಕಾರಿ ಎಂ.ಆರ್. ಹರೀಶ್ ಹಾಗೂ ಅವರ ತಂಡದವರು ಭಾಗವಹಿಸಿದ್ದರು.

# ಉಚಿತ ವೃತ್ತಿ ಮಾರ್ಗದರ್ಶನ- ತರಬೇತಿ

**ಚಿಕ್ಕಮಗಳೂರು** ; ಭಾರತೀಯ ಸೇನೆ, ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ)ಗಳ ಅರ್ಹ ಪುರುಷ ಅಭ್ಯರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025-26ನೇ ಸಾಲಿನಲ್ಲಿ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು, ತರಬೇತಿಗಾಗಿ ಅರ್ಹ 3ನೇ ಬ್ಯಾಚ್ ಪ್ರಾರಂಭಿಸಲು ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ಗರಿಷ್ಠ ವಾರ್ಷಿಕ ಆದಾಯ ಮಿತಿ ಪ್ರವರ್ಗ-1 ಕ್ಕೆ ರೂ.2.50 ಲಕ್ಷಗಳು ಹಾಗೂ ಪ್ರವರ್ಗ 2(ಎ), 3(ಎ) ಮತ್ತು 3(ಬಿ) ಗಳಿಗೆ ರೂ. 1 ಲಕ್ಷಗಳಾಗಿರಬೇಕು. ಕನಿಷ್ಠ ವಿದ್ಯಾರ್ಹತೆ- ಅಭ್ಯರ್ಥಿಯು 10ನೇ ತರಗತಿ ಉತ್ತೀರ್ಣನಾಗಿದ್ದು ಪ್ರತಿ ವಿಷಯದಲ್ಲಿ ಕನಿಷ್ಠ 33 ಅಂಕಗಳು ಮತ್ತು ಸರಾಸರಿ ಶೇ.45ರಷ್ಟು ಅಂಕಗಳನ್ನು ಪಡೆದಿರಬೇಕು. ಗ್ರೇಡಿಂಗ್ ಸಿಸ್ಟಮ್ ಇದ್ದಲ್ಲಿ ಮೇಲ್ಕಂಡಂತೆ ಸಮಾನವಾದ ಗ್ರೇಡ್ ಪಡೆದಿರಬೇಕು.

ಅಭ್ಯರ್ಥಿಯ ವಯೋಮಿತಿ ಸೆಪ್ಟಂಬರ್ 1ಕ್ಕೆ 17 ರಿಂದ 20 ವರ್ಷದೊಳಗಿರಬೇಕು. ಅಭ್ಯರ್ಥಿಯು 2005ರ ಸೆಪ್ಟೆಂಬರ್ 1 ರಿಂದ 2008ರ ಸೆಪ್ಟಂಬರ್ 1 ನಡುವಿನ ಅವಧಿಯಲ್ಲಿ ಜನಿಸಿರಬೇಕು. ತರಬೇತಿಯನ್ನು ಕಲಬುರಗಿ ಜಿಲ್ಲೆ (ಕೇಂದ್ರ ಸ್ಥಳ) ಯಲ್ಲಿ ನೀಡಲಾಗುವುದು. ಈ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೆರಿಗೆ ಸೆಪ್ಟಂಬರ್ 10 ರೊಳಗೆ ಅರ್ಜಿಯನ್ನು ಖುದ್ದಾಗಿ ಸಲ್ಲಿಸಬಹುದು ಅಥವಾ ನೋಂದಾಯಿತ ಅಂಚೆ ಮೂಲಕ ಕಳುಹಿಸಬಹುದು.ಅರ್ಜಿ ನಮೂನೆಯನ್ನು ಕಲಬುರಗಿಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೆರಿಯಿಂದ ಪಡೆಯಬಹುದು. ಹೆಚ್ಚಿನ ಮಾಹಿತಿಗೆ ಸಹಾಯವಾಣಿ: 8105085410, 9148489157 ಸಂಖ್ಯೆಗಳಿಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

# ದೀಕ್ಷಾ ಭೂಮಿ ಯಾತ್ರೆಗೆ ಬಸ್ ವ್ಯವಸ್ಥೆ

**ಚಿಕ್ಕಮಗಳೂರು:** 2025-26ನೇ ಸಾಲಿನಲ್ಲಿ ಅಕ್ಟೋಬರ್ 2 (ವಿಜಯದಶಮಿ) ರಂದು ನಾಗಪುರ ದೀಕ್ಷಾಭೂಮಿಯಲ್ಲಿ ನಡೆಯುವ ದಮ್ಮ ಪ್ರವರ್ತನ ದಿನದ ಕಾರ್ಯಕ್ರಮಕ್ಕೆ ಸೆಪ್ಟಂಬರ್ 30 ರಿಂದ ಅಕ್ಟೋಬರ್ 4 ರವರೆಗೆ ಕರ್ನಾಟಕ ರಾಜ್ಯದಿಂದ ಡಾ.ಬಿ.ಆರ್.ಅಂಬೇಡ್ಕರ್ ಅನುಯಾಯಿಗಳನ್ನು ಸಮಾಜ ಕಲ್ಯಾಣ ಇಲಾಖಾ ವತಿಯಿಂದ ನಾಗಪುರ ದೀಕ್ಷಾಭೂಮಿಗೆ ಯಾತ್ರೆ ಕರೆದೊಯ್ಯಲು ಕ್ರಮ ಕೈಗೊಳ್ಳಲಾಗಿದೆ.ಸಾರಿಗೆ ವ್ಯವಸ್ಥೆ, ರೈಲು ಪ್ರಯಾಣದ ವ್ಯವಸ್ಥೆಯನ್ನು ಕಲ್ಪಿಸುವ ಯೋಜನೆಯಡಿ 2025-26ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾಭೂಮಿಗೆ ಭೇಟಿ ನೀಡಲಿರುವ ಯಾತ್ರಾರ್ಥಿಗಳಿಗೆ ಕೆ.ಎಸ್.ಆರ್.ಟಿ.ಸಿ. ರಾಜಹಂಸ ಬಸ್ಸುಗಳ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದ್ದು, ದೀಕ್ಷಾಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳು ವೆಬ್‌ಸೈಟ್ ಲಿಂಕ್ (<ಋಣಣಠಿ://ತಿಛಿಜಡಿತುಭಿಛಿ.ಇಚಿಡಿಟಿಚಿಣಚಿಞಚಿ.ರಿಠತ.ಟಿ/>) ನಲ್ಲಿ ಅರ್ಜಿಯನ್ನು ಸಲ್ಲಿಸಲು ಸೆಪ್ಟಂಬರ್ 9ರವರೆಗೆ ನಿಗದಿಪಡಿಸಲಾಗಿದ್ದು ಆಸಕ್ತರು ಅರ್ಜಿ ಸಲ್ಲಿಸಲು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಭಾಗ್ಯಲಕ್ಷ್ಮೀ ಬಾಂಡ್ ಪರಿಪಕ್ವ ಮೊತ್ತ ಪಾವತಿ: ನೊಂದಣಿಗೆ ಸೂಚನೆ

**ಚಿತ್ರದುರ್ಗ:** ಭಾಗ್ಯಲಕ್ಷ್ಮೀ ಯೋಜನೆಯಡಿ 2006-07ನೇ ಸಾಲಿನಲ್ಲಿ ನೊಂದಣಿಯಾಗಿ 18 ವರ್ಷ ಪೂರ್ಣಗೊಂಡ ಫಲಾನುಭವಿಗಳು 2024-25ನೇ ಸಾಲಿನ ಪರಿಪಕ್ವ ಮೊತ್ತ ಪಡೆಯಲು ಅರ್ಹರಾಗಿರುತ್ತಾರೆ. ಚಿತ್ರದುರ್ಗ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ ಅರ್ಹ ಫಲಾನುಭವಿಗಳು ಎಲ್.ಐ.ಸಿ ಭಾಗ್ಯಲಕ್ಷ್ಮೀ ಫಾರಂ ಭರ್ತಿ ಮಾಡಿ, ಫಾರಂನೊಂದಿಗೆ, ಮೂಲ ಬಾಂಡ್, ಮಗುವಿನ ಜನನ ಪ್ರಮಾಣ ಪತ್ರ, ಎಸ್.ಎಸ್.ಎಲ್.ಸಿ ಮಾರ್ಕ್ಸ್ ಕಾರ್ಡ, ಶಾಲಾ ಧೃಡೀಕರಣ, ಮಗುವಿನ ಬ್ಯಾಂಕ್ ಖಾತೆ, ಮಗು,ತಂದೆ ಮತ್ತು ತಾಯಿ ಆಧಾರ್, ಅಪರೇಷನ್ ಕಾರ್ಡ್, ಚುಚ್ಚುಮದ್ದು ಕಾರ್ಡ್, ಅಂಗನವಾಡಿ ಕಾರ್ಯಕರ್ತೆ ಹಾಗೂ ಪೊಷಕರ ದೃಢೀಕರಣ ಲಗತ್ತಿಸಿ ಚಿತ್ರದುರ್ಗ ನಗರದ ಒನಕೇ ಓಬವ್ವ ಕ್ರೀಡಾಂಗಣದ ಹತ್ತಿರದ ಬಾಲ ಭವನ ಆವರಣದ ಕಚೇರಿಯಲ್ಲಿ ನೊಂದಾಯಿಸಿಕೊಳ್ಳುವಂತೆ ಪ್ರಕಟಣೆ ತಿಳಿಸಿದೆ.

# ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಸುದ್ದಿ ಗೋಷ್ಠಿ



**ಚಿತ್ರದುರ್ಗ** : ಮಧ್ಯ ಕರ್ನಾಟಕದ ಬಯಲು ಸೀಮೆ ಪ್ರದೇಶಗಳಿಗೆ ನೀರುಣಿಸುವ ಮಹತ್ವದ ಭದ್ರಾ ಮೇಲ್ದಂಡೆ ಕಾಮಗಾರಿಗೆ ಎಸ್ಸಿಪಿ, ಟಿಎಸ್ಪಿ ಅನುದಾನ ಬಳಕೆ ಮಾಡಿಕೊಂಡು ತ್ವರಿತಗತಿಯಲ್ಲಿ ಪೂರ್ಣಗೊಳಿಸುವಂತೆ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ರಾಜ್ಯ ಸರ್ಕಾರವ ಆಗ್ರಹಿಸಿದೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರದ ಉದಾಸೀನ ಮನೋಭಾವ ಹಾಗೂ ಅನುದಾನದ ಕೊರತೆಯಿಂದಾಗಿ ಕಾಮಗಾರಿ ಹೆಚ್ಚು ಕಡಿಮೆ ಸ್ಥಗಿತಗೊಂಡಿದೆ. 5300 ಕೋಟಿ ರು ಅನುದಾನ ನೀಡಲಿ ಎಂದು ರಾಜ್ಯ ಸರ್ಕಾರ ಕೇಂದ್ರದತ್ತ ಬೊಟ್ಟು ಮಾನ್ಯರೆ, ಕೇಂದ್ರ ಸರ್ಕಾರ ಅನುದಾನ ಬಿಡುಗಡೆಗಾಗಿ ತಾಂತ್ರಿಕ ಮಾಹಿತಿಗಳ ಪೂರೈಕೆ ಮಾಡುವಂತೆ ರಾಜ್ಯ ಸರ್ಕಾರಕ್ಕೆ ಪತ್ರಗಳ ಮೇಲೆ ಪತ್ರ ಬರೆಯುತ್ತಿದೆ. ಎರಡೂ ಸರ್ಕಾರದ ನಡೆಗಳಿಂದಾಗಿ ಭದ್ರಾ ಮೇಲ್ದಂಡೆ ಸೊರಗಿದೆ.

ಹಾಲಿ ಶರವೇಗದಲ್ಲಿ ನಡೆಯುತ್ತಿರುವ ತುಂಗ ಭದ್ರಾ ಹಿನ್ನೀರು ಕುಡಿವ ನೀರಿನ ಎರಡುವರೆ ಸಾವಿರ ಕೋಟಿ ರುಪಾಯಿ ವೆಚ್ಚದ ಯೋಜನೆಗೆ ರಾಜ್ಯ ಸರ್ಕಾರ ಎಸ್ಸಿಪಿ, ಟಿಎಸ್ಪಿ ಅನುದಾನ ಬಳಕೆ ಮಾಡಿದೆ. ವಿಜಯ ನಗರ ಜಿಲ್ಲೆಯ ಕೂಡ್ಲಿಗಿ, ದಾವಣಗೆರೆ ಜಿಲ್ಲೆಯ ಜಗಳೂರು, ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು, ಚಳ್ಳಕೆರೆ ಹಾಗೂ ತುಮಕೂರು ಜಿಲ್ಲೆಯ ಪಾವಗಡ ವಿಧಾನಸಭೆ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ಪ್ರದೇಶಗಳಿಗೆ ತುಂಗ ಭದ್ರಾ ಜಲಾಶಯದ ಹಿನ್ನೀರಿನಿಂದ ಕುಡಿವ ನೀರು ಪೂರೈಕೆ ಮಾಡಲಾಗುತ್ತಿದೆ.

ಈ ಯೋಜನೆಗೆ ಎಸ್ಸಿಪಿ, ಟಿಎಸ್ಪಿ ಅನುದಾನ ಬಳಕೆ ಮಾಡಿಕೊಂಡಿರುವುದರ ಬಗ್ಗೆ ರಾಜ್ಯ ಸರ್ಕಾರ ತನ್ನ ನೈತಿಕ ಆಯಾಮದಲ್ಲಿ ಸಮಜಾಯಿಷಿ ನಿಣಟಿಜಜಜಿಟಿಜಜಡಿದೆ. ಕೂಡ್ಲಿಗಿ, ಜಗಳೂರು, ಮೊಳಕಾಲ್ಮೂರು, ಚಳ್ಳಕೆರೆ ವಿಧಾನಸಭೆ ಕ್ಷೇತ್ರಗಳು ಪರಿಶಿಷ್ಟ ಪಂಗಡ( ಎಸ್ಟಿ)ಕ್ಕೆ ಹಾಗೂ ಪಾವಗಡ ಪರಿಶಿಷ್ಟ ಜಾತಿ(ಎಸ್ಸಿ) ಗೆ ಮೀಸಲಾಗಿದೆ. ಹಾಗಾಗಿ ಈ ಸಮುದಾಯಗಳಿಗೆ ಕಾಯ್ದಿಟ್ಟ ಅನುದಾನ ಬಳಕೆ ಮಾಡಿಕೊಳ್ಳಲಾಗಿದೆ ಎಂದು ಹೇಳಿದೆ.

ತುಂಗ ಭದ್ರಾ ಹಿನ್ನೀರು ಕಾಮಗಾರಿಗೆ ಎಸ್ಸಿಪಿ, ಟಿಎಸ್ಪಿ ಅನುದಾನ ಬಳಕೆ ಮಾಡಲು ರಾಜ್ಯ ಸರ್ಕಾರ ಹರಿಯಬಿಟ್ಟ ಆಲೋಚನಾ ಕ್ರಮಗಳನ್ನು ಭದ್ರಾ ಮೇಲ್ದಂಡೆಗೂ ಪರಿಗಣಿಸಬೇಕೆಂದು ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಆಗ್ರಹಿಸುತ್ತದೆ.

ಭದ್ರಾ ಮೇಲ್ದಂಡೆ ವ್ಯಾಪ್ತಿಗೆ ಹೊಳಲ್ಕೆರೆ, ಪಾವಗಡ(ಪರಿಶಿಷ್ಟ ಜಾತಿ),ಮೊಳಕಾಲ್ಮುರು, ಚಳ್ಳಕೆರೆ, ಜಗಳೂರು( ಪರಿಶಿಷ್ಟ ಪಂಗಡ) ಸೇರಿ ಐದು ಮೀಸಲು ಕ್ಷೇತ್ರಗಳು ಬರುತ್ತವೆ. ಸಾಲದೆಂಬಂತೆ ಚಿತ್ರದುರ್ಗ ಲೋಕಸಭೆ ಕ್ಷೇತ್ರ ಪರಿಶಿಷ್ಟ ಜಾತಿಗೆ ಮೀಸಲಾಗಿದೆ. ಹಾಗಾಗಿ ತುಂಗ ಭದ್ರಾ ಹಿನ್ನೀರು ಯೋಜನೆಗೆ ಎಸ್ಸಿಪಿ , ಟಿಎಸ್ಪಿ ಅನುದಾನ ಬಳಕೆ ಮಾಡಿದ ರೀತಿ ಭದ್ರಾ ಮೇಲ್ದಂಡೆಗೂ ವಿನಿಯೋಗಿಸಬಹುದಾಗಿದೆ.

ತನ್ನ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಿಗೆ ಕಳೆದ ಎರಡು ವರ್ಷಗಳಲ್ಲಿ 32 ಸಾವಿರಕೋಟಿ ರು ಎಸ್ಸಿಪಿ, ಟಿಎಸ್ಪಿ ಅನುದಾನ ಬಳಕೆ ಮಾಡಿಕೊಂಡಿರುವುದರ ಬಗ್ಗೆ ಶಾಸನ ಸಭೆಯಲ್ಲಿಯೇ ಸಿಎಂ ಹೇಳಿಕೆ ನೀಡಿದ್ದಾರೆ. ಗ್ಯಾರಂಟಿಗಳಿಗೆ ಎಸ್ಸಿಪಿ, ಟಿಎಸ್ಪಿ ಅನುದಾನ ಬಳಕೆ ಮಾಡಿಕೊಳ್ಳುವುದಾದರೆ ಭದ್ರಾ ಮೇಲ್ದಂಡೆಗೆ ಏಕಿಲ್ಲವೆಂದು ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಪ್ರಶ್ನೆ ಮಾಡಿದೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರಗ ಉದಾಸೀನ ಮನೋಭಾವ ಗಮನಿಸಿದರೆ ಭದ್ರಾ ಮೇಲ್ದಂಡೆ ಕಾಮಗಾರಿ ಪೂರ್ಣಗೊಳಿಸಲು ಇನ್ನೊಂದು ದಶಕ ಬೇಕೆನಿಸುತ್ತದೆ. ಅಲ್ಲದೇ ಯೋಜನಾವ ವೆಚ್ಚವು ಜಾಸ್ತಿಯಾಗುತ್ತದೆ. ಯೋಜನಾ ವ್ಯಾಪ್ತಿಯಲ್ಲಿ ಬರುವ ಶಾಸಕರು ತಕ್ಷಣವೇ ಸಿಎಂ ಸಿದ್ದರಾಮಯ್ಯ ಹಾಗೂ ಜಲ ಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ಮೇಲೆ ಒತ್ತಡ ಹೇರಿ ಎಸ್ಸಿಪಿ, ಟಿಎಸ್ಪಿ ಅನುದಾನ ಪಡೆದು ಕಾಮಗಾರಿ ಪೂರ್ಣಗೊಳಿಸುವಂತೆ ಸಮಿತಿ ಆಗ್ರಹಿಸುತ್ತದೆ.

ಕೃಷ್ಣಾ ಜಲಭಾಗ್ಯದ ರೀತಿ ಭದ್ರಾ ಮೇಲ್ದಂಡೆಗೂ ನೀರಾವರಿ ಬಾಂಡ್ ಬಿಡುಗಡೆ ಸಂಪನ್ಮೂಲ ಕ್ರೋಡೀಕರಣ ಮಾಡುವಂತೆ ಹಿಂದೊಮ್ಮೆ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ರಾಜ್ಯ ಸರ್ಕಾರವ ಆಗ್ರಹಿಸಿತ್ತು. ಈಗಲೂ ಕಾಲ ಮಿಂಚಿಲ್ಲ, ಬಾಂಡ್ ಬಿಡುಗಡೆ ಮಾಡಿದರೆ ಕೊಂಡುಕೊಳ್ಳುವವರು ಇದ್ದಾರೆ. ಸರ್ಕಾರ ಈ ಬಗ್ಗೆಯೂ ಚಿಂತಿಸಲಿ ಎಂದು ಸಮಿತಿ ಒತ್ತಾಯಿಸುತ್ತದೆ.

ಭದ್ರಾ ಮೇಲ್ದಂಡೆ ಅನುದಾನ ಬಿಡುಗಡೆ ಸಂಬಂಧ ಹೈಕೋರ್ಟ್ ಮೊರೆ ಹೋಗಲು ನಿರ್ಧರಿಸಿದ್ದವೆ. ಈ ಸಂಬಂಧ ವಕೀಲರ ಸಂಪರ್ಕಿಸಲಾಗಿದೆ. ತುಂಗ ಭದ್ರಾ ಹಿನ್ನೀರು

ಯೋಜನೆಗೆ ಎಸ್ಸಿಪಿ ಟಿಎಸ್ಪಿ ಅನುದಾನ ಬಳಕೆ ಮಾಡಿಕೊಳ್ಳಲಾಗಿದ್ದು ಅದೇ ರೀತಿ ಭದ್ರಾ ಮೇಲ್ದಂಡೆಗೂ ಬಳಕೆ ಮಾಡುವಂತೆ ಸಾರ್ವಜನಿಕ ಹಿತಾಸಕ್ತಿ ರಿಟ್ ಸಲ್ಲಿಸುವುದಾಗಿ ಬಿ.ಎ.ಲಿಂಗಾರೆಡ್ಡಿ ಹೇಳಿದರು.

ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಕೆ.ಆರ್.ದಯಾನಂದ, ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ, ರೈತ ಸಂಘದ ಜಿಲ್ಲಾಧ್ಯಕ್ಷ ಹಂಪಯ್ಯನ ಮಾಳಿಗೆ ಧನಂಜಯ, ಮಾಜಿ ಅಧ್ಯಕ್ಷ ಬಸ್ತಿಹಳ್ಳಿ ಸುರೇಶ್ ಬಾಬು,ಉಪಾಧ್ಯಕ್ಷ ಮಲ್ಲಾಪುರ ತಿಪ್ಪೇಸ್ವಾಮಿ ಇದ್ದರು.

## ಡಿಸಿ ಅಧ್ಯಕ್ಷತೆ ಸಮಿತಿಗೆ ಅಧಿಕಾರ ಸಿಎಂ ಸೂಚನೆ ಹಿನ್ನೆಲೆಯಲ್ಲಿ ಪ್ರಸ್ತಾವನೆ

# ಗಂಗಾ ಕಲ್ಯಾಣ ಗ್ರಹಣ ಮೋಕ್ಷಕ್ಕೆ ಹೊಸ ಪ್ಲಾನ್

**ಬೆಂಗಳೂರು** : ಪರಿಶಿಷ್ಟ ಜಾತಿ, ಪಂಗಡಗಳ ಸಣ್ಣ, ಅತೀ ಸಣ್ಣ ರೈತರಿಗೆ 'ಗಂಗಾ ಕಲ್ಯಾಣ ಯೋಜನೆ' ಲಾಭವನ್ನು ಸಕಾಲಕ್ಕೆ ತಲುಪಿಸುವುದಕ್ಕಾಗಿ ರಾಜ್ಯ ಸರ್ಕಾರ ಹೊಸ ಯೋಜನೆ ರೂಪಿಸಿದೆ. ಫಲಾನುಭವಿಗಳ ಆಯ್ಕೆ ಹಂತದಲ್ಲೇ ಹಿಡಿಯುವ 'ಗ್ರಹಣ'ಕ್ಕೆ ಮೋಕ್ಷ ಕಲ್ಪಿಸುವುದಕ್ಕಾಗಿ ನಿಷ್ಠುರ ನಿರ್ಧಾರ ಕೈಗೊಳ್ಳಲು ಮುಂದಾಗಿರುವ ಸರ್ಕಾರ ಈ ಸಂಬಂಧ ಸೆ.4ರ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ನಿರ್ಣಯ ಕೈಗೊಳ್ಳಲು. ಚಿಂತನೆ ನಡೆಸಿದೆ.

ಸಿಎಂ ಆಕ್ರೋಶ: ಪರಿಶಿಷ್ಟ ಜಾತಿ, ಪಂಗಡಗಳ ಉಪಯೋಜನೆಯಡಿ ಪ್ರತ್ಯೇಕ ಅನುದಾನ ಮೀಸಲಿದೆ. ಪ್ರಸಕ್ತ ಆರ್ಥಿಕ ವರ್ಷದ (2025-26) ನಾಲ್ಕೈದು ತಿಂಗಳು ಮುಗಿದಿವೆ. ಆದರೆ ಕಳೆದ ಹಣಕಾಸು ವರ್ಷ ಗುರಿಯೇ ಸಾಧನೆ ಆಗಿಲ್ಲವೆಂದಾದರೆ ಅರ್ಹರಿಗೆ ಯೋಜನೆ ತಲುಪಿಸುವುದು ಯಾವಾಗ? ಎಂದು ಸಿಎಂ ಸಿದ್ದರಾಮಯ್ಯ ಆಕ್ರೋಶ ಭರಿತರಾಗಿ ಕೇಳಿದ್ದಾರೆ. ಸಮಾಜ ಕಲ್ಯಾಣ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗಳಡಿ ಬರುವ ವಿವಿಧ ಅಭಿವೃದ್ಧಿ ನಿಗಮಗಳ ಪ್ರಗತಿ ಪರಿಶೀಲನೆ ವೇಳೆ ಹಿನ್ನಡೆ ಗಮನಿಸಿ ಸಿಎಂ ತೀವ್ರ ಅಸಮಾಧಾನ ಹೊರ ಹಾಕಿದ್ದಾರೆ. ಎಸ್‌ಸಿ, ಎಸ್ ಅಭಿವೃದ್ಧಿ ನಿಗಮಗಳ ಗಂಗಾ ಕಲ್ಯಾಣ, ಸ್ವಯಂ ಉದ್ಯೋಗ, ಭೂ ಒಡೆತನ, ಸ್ವಾವಲಂಬಿ ಸಾರಥಿ ಮುಂತಾದ ಯೋಜನೆಗಳಡಿ ಫಲಾನುಭವಿಗಳ ಆಯ್ಕೆಗೆ ಅಯಾ ಆರ್ಥಿಕ ವರ್ಷ ಅ.31ರ



ಗಡುವು ವಿಧಿಸಿದೆ.

ರಾಜ್ಯ ಸರ್ಕಾರದ ಚಿಂತನೆ ಏನು?

ಆಯಾ ಶಾಸಕರ ಅಧ್ಯಕ್ಷತೆಯ ಸಮಿತಿಗೆ ಫಲಾನುಭವಿಗಳ ಆಯ್ಕೆ ಅಧಿಕಾರವಿದ್ದು, ಸಕಾಲಕ್ಕೆ ಆಯ್ಕೆ ಪಟ್ಟಿ ಅಂತಿಮವಾಗದ ಕಾರಣ ನಿಗದಿತ ಗುರಿ ಸಾಧನೆಯೇ ದೊಡ್ಡ ಸವಾಲಾಗಿದೆ. ಈ ಹಿನ್ನೆಲೆಯಲ್ಲಿ ನಿಗದಿತ ಗಡುವಿ ನೊಳಗೆ ಫಲಾನುಭವಿಗಳನ್ನು ಶಾಸಕರು ಆಯ್ಕೆ ಮಾಡದಿದ್ದರೆ ಆಯಾ ಜಿಲ್ಲಾಧಿಕಾರಿ ಅಧ್ಯಕ್ಷತೆ ಸಮಿತಿಗೆ ಅಧಿಕಾರ ನೀಡಲು ಸರ್ಕಾರ ಬಯಸಿದೆ. ಸಿಎಂ ಸಿದ್ದರಾಮಯ್ಯ ಸೂಚನೆಯಂತೆ ಸಮಾಜ ಕಲ್ಯಾಣ ಇಲಾಖೆ ಪ್ರಸ್ತಾವನೆ ಸಿದ್ಧಪಡಿಸಿ, ವಿವಿಧ ಇಲಾಖೆಗಳ ಸಹಮತದೊಂದಿಗೆ ಸಂಪುಟ ಸಭೆಯ ಮುಂದಿಡಲು ಸಜ್ಜಾಗಿರುವುದಾಗಿ ಉನ್ನತ ಮೂಲಗಳು ತಿಳಿಸಿವೆ.

**ಆಯ್ಕೆ ಪ್ರಕ್ರಿಯೆಯೇ ಇಲ್ಲ!**

ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮವೊಂದರಲ್ಲೇ 2024-25ನೇ ಸಾಲಿನಡಿ 77 ವಿಧಾನಸಭಾ ಕ್ಷೇತ್ರಗಳಲ್ಲಿ ಫಲಾನುಭವಿಗಳ ಆಯ್ಕೆ ಬಾಕಿಯಿದೆ. ಇತರ ನಿಗಮಗಳ ಪರಿಸ್ಥಿತಿಯೂ ಇದಕ್ಕಿಂತ ಭಿನ್ನವಾಗಿಲ್ಲ. ಎರಡು ಇಲಾಖೆಗಳಿಗೆ ಸಂಬಂಧಿಸಿದ ಎಲ್ಲ ನಿಗಮಗಳಿಗೆ 2025-26ನೇ ಸಾಲಿಗೆ ಕೊಳವೆ ಬಾವಿ ಕೊರೆಯುವ ಗುರಿ ನಿಗದಿ, ಆಯ್ಕೆ ಪ್ರಕ್ರಿಯೆ ಇನ್ನೂ ಶುರುವಾಗಿಲ್ಲ. ಸಿಎಂ ಸೂಚಿಸಿದ ಗಡುವು ಪೂರ್ಣಗೊಳ್ಳಲು ಇನ್ನೊಂದು ತಿಂಗಳು ಬಾಕಿಯಿದೆ. ನಿಗದಿತ ಗುರಿಗೆ ಎದುರಾಗಿ ಫಲಾನುಭವಿಗಳ ಆಯ್ಕೆ ವಿಳಂಬವಾದರೆ ಮುಂದಿನ ಎಲ್ಲ ಪ್ರಕ್ರಿಯೆ ನಿಧಾನವಾಗಿ ಬೇರೆ ಸಮಸ್ಯೆ ಎದುರಿಸಬೇಕಾಗುತ್ತದೆ. ಕೆಲವು ಪ್ರದೇಶಗಳಲ್ಲಿ ನಿರಂತರ ಮಳೆ ಸುರಿಯುತ್ತಿರುವ ಕಾರಣ ಕೊಳವೆ ಬಾವಿ ಕೊರೆಯಲು ಸಾಧ್ಯವಾಗುತ್ತಿಲ್ಲ.

# ಆಗಸದಲ್ಲಿ ಶೋಭಿಸಲಿದೆ ಕೆಂಪು ಚಂದ್ರ

ಚಂದ್ರನು ಭೂಮಿಯ ಸುತ್ತಲೂ ತನ್ನ ಕಕ್ಷೆಯಲ್ಲಿ ಹೋಗುತ್ತಾ ಸೂರ್ಯನಿಂದ ಭೂಮಿಯ ಹಿಂಬದಿ ಬಂದಾಗ ಚಂದ್ರಗ್ರಹಣವಾಗಲಿದೆ. ಚಂದ್ರನು ಪೂರ್ತಿಯಾಗಿ ಭೂಮಿಯ ನೆರಳಿನಲ್ಲಿ ಬರುವ ಕಾರಣ ಸೆ.7 ರಂದು ಹುಣ್ಣಿಮೆ ರಾತ್ರಿ ಖಗ್ರಾಸ ಚಂದ್ರಗ್ರಹಣ ನಡೆಯಲಿದೆ. ಭಾರತದ ಎಲ್ಲ ಭಾಗಗಳಿಂದ ಈ ಖಗೋಳ ವಿದ್ಯಮಾನ ವೀಕ್ಷಿಸಬಹುದು.

ಭಾರತ, ಚೀನಾ, ಮಂಗೋಲಿಯಾ, ರಷ್ಯಾದ ಕೇಂದ್ರ ಭಾಗ, ಮಲೇಷಿಯಾ, ಸಿಂಗಾಪುರ, ಇಂಡೋನೇಷಿಯಾ, ಶ್ರೀಲಂಕಾ, ಏಷ್ಯಾ ಖಂಡದ ವಿವಿಧ ದೇಶಗಳು, ಆಫ್ರಿಕಾ ಖಂಡದ ಪೂರ್ವ ಭಾಗ, ಗಲ್ಫ್ ದೇಶಗಳು ಮತ್ತು ಆಸ್ಟೇಲಿಯಾದಲ್ಲಿಯೂ ಗೋಚರಿಸುತ್ತದೆ.

ರಾತ್ರಿ 8.50ಕ್ಕೆ ಗ್ರಹಣ ಆರಂಭವಾಗುವಾಗ ಭೂಮಿಯ ಅರೆನೆರಳು ಚಂದ್ರನ ಮೇಲೆ ಬೀಳಲು ಆರಂಭವಾಗುತ್ತದೆ. ಸುಮಾರು 9.57ರಿಂದ ಭೂಮಿಯ ನೆರಳು ಚಂದ್ರನ ಮೇಲೆ



ಹರಿದಾಡುತ್ತದೆ. ಗ್ರಹಣ ಮುಂದುವರಿಯುತ್ತಾ 11 ಗಂಟೆಗೆ ಚಂದ್ರನು ಸಂಪೂರ್ಣವಾಗಿ ಭೂಮಿಯ ನೆರಳಿನಲ್ಲಿ ಬಂದಿರುತ್ತಾನೆ. ಈ ಕ್ಷಣದಿಂದ ಮಧ್ಯರಾತ್ರಿ

12.22ರವರೆಗೆ (ಸುಮಾರು 1 ಗಂಟೆ 22 ನಿಮಿಷ) ಗ್ರಹಣ ವೀಕ್ಷಿಸಬಹುದು. 11.41ಕ್ಕೆ ಗರಿಷ್ಠ ಗ್ರಹಣದ


ಕಾಲದಲ್ಲಿ ಕೆಂಪುಚಂದ್ರನನ್ನು ವೀಕ್ಷಿಸಬಹುದು. 1.26ಕ್ಕೆ ಚಂದ್ರನು ಭೂಮಿಯ ನೆರಳಿನಿಂದ, ಭೂಮಿಯ ನಂತರ 2.25ಕ್ಕೆ ಅರೆನೆರಳಿನಿಂದ ಹೊರಬರುತ್ತಾನೆ. ಈ ಗ್ರಹಣದ ವಿವಿಧ ಹಂತಗಳನ್ನು ಸುಮಾರು 5 ಗಂಟೆ 27 ನಿಮಿಷ ವೀಕ್ಷಿಸಬಹುದು.

ತಾಮ್ರದ ಕೆಂಪು ಬಣ್ಣದ ಚಂದ್ರ:

ಗ್ರಹಣದ ವೇಳೆ ಚಂದ್ರನು ತಾಮ್ರದ ಕೆಂಪು ಬಣ್ಣ ಹೊಂದಿರುತ್ತಾನೆ. ಭೂಮಿಯು ಚಂದ್ರನ ಮೇಲೆ ನೇರವಾಗಿ ಬೀಳುವ ಸೂರ್ಯಕಿರಣ ಗಳನ್ನು ತಡೆಗಟ್ಟುತ್ತದೆ. ಈ ಕಾರಣ ಭೂಮಿಯ ವಾತಾವರಣದಲ್ಲಿ ಚದುರಿಸುವ ಕೆಂಪು ಬಣ್ಣವು ಚಂದ್ರನ ಮೈಮೇಲಿನಿಂದ ಪ್ರತಿಬಿಂಬಿಸುತ್ತದೆ. ಈ ಬೆಳಕಿನಿಂದಾಗಿ ಚಂದ್ರನು ಕೆಂಬಣ್ಣದಲ್ಲಿ ಗೋಚರಿಸು ತ್ತಾನೆ. ಖಗೋಳಶಾಸ್ತ್ರಜ್ಞರು ಆಕಾಶಕಾಯಗಳ ಬೆಳಕನ್ನು ಪರಿಮಾಣ ಮಾಪನದಿಂದ ಗುರುತಿಸುತ್ತಾರೆ. ಸಾಮಾನ್ಯವಾಗಿ ಹುಣ್ಣಿಮೆಯ ಚಂದ್ರನ ಪರಿಮಾಣ ಸುಮಾರು ಮೈನಸ್ 13 ಇರುತ್ತದೆ. ಆದರೆ, ಈ ಗ್ರಹಣದ ಸಮಯ ಮೈನಸ್ 1.35ರಷ್ಟಾಗಲಿದೆ.

# ಕೊಳವೆಬಾವಿ ಕೊರೆಯಲು ಶಾಸಕರಿಂದ ಚಾಲನೆ

**ಹಾಸನ** : ಡಿ. ದೇವರಾಜಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣಇಲಾಖೆಯಡಿ ಬರುವಇತರೆ ಸಮುದಾಯ ನಿಗಮಗಳ ವತಿಯಿಂದಗಂಗಾಕಲ್ಯಾಣಯೋಜನೆಯಡಿ ಹಾಸನ ವಿಧಾನಸಭಾಕ್ಷೇತ್ರದಿಂದ 2023-24 ಹಾಗೂ 2024-25ನೇ ಸಾಲಿಗೆ ಆಯ್ಕೆಯಾಗಿರುವಒಟ್ಟು 36 ಕೊಳವೆಬಾವಿ ಕೊರೆಯಲುದೊಡ್ಡಪುರಗ್ರಾಮದಲ್ಲಿ ಶಾಸಕರಾದಸ್ವರೂಪ್ ಪ್ರಕಾಶ್‌ಚಾಲನೆ ನೀಡಿದರು.



# ಭ್ರೂಣ ಲಿಂಗ ಪತ್ತೆ ಮತ್ತು ಹತ್ಯೆ ತಡೆಯುವುದು ಅಗತ್ಯ

**ಹಾಸನ** : ಜಿಲ್ಲೆಯಲ್ಲಿ ಪ್ರಸವ ಪೂರ್ವ ಭ್ರೂಣ ಲಿಂಗ ಪತ್ತೆ ಮತ್ತು ಹತ್ಯೆತಡೆಗಟ್ಟುವ ನಿಟ್ಟಿನಲ್ಲಿ ಹೆಚ್ಚಿನಗಮನಹರಿಸಬೇಕುಎಂದುಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿಡಾ॥ ಅನಿಲ್‌ಕುಮಾರ್ ತಿಳಿಸಿದ್ದಾರೆ.

ಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣಾಧಿಕಾರಿಕಚೇರಿ ಸಭಾಂಗಣದಲ್ಲಿಇಂದು ನಡೆದ ಪಿ.ಸಿ.& ಪಿ.ಎನ್.ಡಿ.ಟಿ ಮೇಲ್ವಿಚಾರಣಾ ಸಮಿತಿ ಮತ್ತು ಸಲಹಾ ಸಮಿತಿ ಸಭೆ ನಡೆಸಿ ಮಾತನಾಡಿದಅವರುಸಮಿತಿಯ ಮುಂದೆಅನುಮತಿಕೋರಿ ಬಂದಿರುವ ಅರ್ಜಿಗಳನ್ನು ಪರಿಶೀಲಿಸಿ ಅಗತ್ಯ ದಾಖಲಾತಿಗಳನ್ನು ಪಡೆದ ನಂತರಅನುಮತಿ ನೀಡಬಹುದಾಗಿದೆಎಂದು ತಿಳಿಸಿದರು.

ಸಮಿತಿ ಸದಸ್ಯರಾದಡಾ॥ ಸಾವಿತ್ರಿ, ಡಾ॥ ಭಾರತಿರಾಜಶೇಖರ್,ಕುಟುಂಬ ಕಲ್ಯಾಣಾಧಿಕಾರಿಡಾ॥ ಪ್ರದೀಪ್, ಸೌಭಾಗ್ಯ ಹಾಗೂ ಮತ್ತಿತರರು ಹಾಜರಿದ್ದರು.



# ಶ್ರೀ ಗಾಯಿತ್ರಿ ಪರಿವಾರದ ಆಶ್ರಯದಲ್ಲಿ ಅನಂತನ ಹುಣ್ಣಿಮೆ ಅಂಗವಾಗಿ



**ದಾವಣಗೆರೆ** : ಸೆಪ್ಟಂಬರ್ 7 ರಂದು ಸಾಮೂಹಿಕ ಶ್ರೀ ಗಾಯತ್ರಿ ಪೂಜೆ

ಹಾಗೂ ಉಪಾಸನೆ ಕಾರ್ಯಕ್ರಮದಾವಣಗೆರೆ, ಸೆಪ್ಟಂಬರ್,

ನಗರದ ಶ್ರೀ ಗಾಯತ್ರಿ ದೇವಿಯ ಉಪಾಸಕರ ಕ್ರಿಯಾತ್ಮಕ ಆಧ್ಯಾತ್ಮ ಸಂಸ್ಥೆ ಶ್ರೀ ಗಾಯತ್ರಿ ಪರಿವಾರದಿಂದ ಪ್ರತೀ ತಿಂಗಳ ಹುಣ್ಣಿಮೆಯೆಂದು ನಡೆಸುವ ಸಾಮೂಹಿಕ ಶ್ರೀ ಗಾಯತ್ರಿ ಪೂಜೆ, ಉಪಾಸನೆ, ಅನಂತನ ಹುಣ್ಣಿಮೆ ಅಂಗವಾಗಿ ದಿನಾಂಕ 07-09-2025 ರಂದು ಭಾನುವಾರ ಬೆಳಿಗ್ಗೆ 7-00ಕ್ಕೆ ನಡೆಯಲಿದೆ ಎಂದು ಶ್ರೀ ಗಾಯಿತ್ರಿ ಪರಿವಾರದ ಅಧ್ಯಕ್ಷರಾದ ಡಾ॥ ರಮೇಶ್ ಪಟೇಲ್ ಪಟೇಲ್ ತಿಳಿಸಿದ್ದಾರೆ

ನಗರದ ಜಯದೇವ ವೃತ್ತದಲ್ಲಿರುವ ಶ್ರೀ ಶಂಕರಮಠದಲ್ಲಿ ನಡೆಯಲಿರುವ ಈ ಅಪ್ಪಟ ಆಧ್ಯಾತ್ಮ ಸಮಾರಂಭದ ಈ ಬಾರಿಯ ಪೂಜಾ ಸೇವಾಕರ್ತರಾದ ಎಂ. ವೀರಭದ್ರರಾವ್ ಮತ್ತು ಕುಟುಂಬದವರು ಕಳೆದ ಇಪ್ಪತ್ತೈದು ವರ್ಷಗಳಿಂದಲೂ ನಿರಂತರವಾಗಿ ಪ್ರತೀ ಪೂರ್ಣಿಮೆ ಯಂದು ನಡೆಯುವ ಈ ಧಾರ್ಮಿಕ ಪ್ರಕ್ರಿಯೆಯಲ್ಲಿ ಆಸಕ್ತ ಸಾರ್ವಜನಿಕರು ಯಾವುದೇ ಜಾತಿ, ಮತ, ವರ್ಣ, ಲಿಂಗ ಬೇಧವಿಲ್ಲದೇ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಬೇಕಾಗಿ ಪರಿವಾರದ ಪ್ರಧಾನ ಕಾರ್ಯದರ್ಶಿ ಸಾಲಿಗ್ರಾಮ ಗಣೇಶ್ ಶೆಣೈ ವಿನಂತಿಸಿದ್ದಾರೆ.

# ನೇಮಕಾತಿಯಲ್ಲಿ ಬಿಐಇಟಿ ವಿದ್ಯಾರ್ಥಿಗಳ ಸಾಧನೆ

**ದಾವಣಗೆರೆ:** ನಗರದ ಬಾಪೂಜಿ ಇಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾವಿದ್ಯಾಲಯ ಕಾಲೇಜಿನ ವಿದ್ಯಾರ್ಥಿಗಳು ಕ್ಯಾಂಪಸ್ ನೇಮಕಾತಿಯಲ್ಲಿ ಸಾಧನೆಗೈದಿದ್ದಾರೆ.ಈಚೆಗೆ ನಡೆದ ತೋಶಿಬಾ, ಬೆಂಗಳೂರು ಸಂಸ್ಥೆಯ ಕ್ಯಾಂಪಸ್ ಸಂದರ್ಶನದಲ್ಲಿ ಕಾಲೇಜಿನ ಒಟ್ಟು ನಾಲ್ಕು ವಿದ್ಯಾರ್ಥಿಗಳು, ಕಂಪ್ಯೂಟರ್ ಸೈನ್ಸ್ ವಿಭಾಗದ ಅಮೋಘ ಬಲಿಗ ಮತ್ತು ಅನ್ನೋಲ್ ಕೋಮಲ್ ಕುಂದ, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗದ ಎನ್. ಸಿಂಚನ ಗದುಗಿನಮಠ್ ಹಾಗೂ ಎಲೆಕ್ಟ್ರಾನಿಕ್ಸ್ ವಿಭಾಗದ ಜಿ. ಚಿನ್ಮಯಿ ಇವರುಗಳು ವಾರ್ಷಿಕ 7.5 ಲಕ್ಷ ವೇತನದೊಂದಿಗೆ ಆಯ್ಕೆಯಾಗಿದ್ದಾರೆ. ಇದರೊಂದಿಗೆ ಇತ್ತೀಚಿಗೆ ನಡೆದ ರೋಶ್ ಎರೋಸ್ಪೇಸ್ ಸಂಸ್ಥೆಯ ಸಂಶೋಧನೆ ಮತ್ತು ಅಭಿವೃದ್ಧಿ ವಿಭಾಗಕ್ಕೆ ಎಲೆಕ್ಟ್ರಾನಿಕ್ಸ್ ವಿಭಾಗದ ಇಬ್ಬರು ವಿದ್ಯಾರ್ಥಿಗಳು ಅಕ್ಷತಾ ಇಟ್ನಾಳ್ ಮತ್ತು ಎಸ್.ಸಿ ತೇಜಸ್ವಿನಿ ಇವರು ಮಾಸಿಕ ಸ್ಟೈಫಂಡ್ ಹತ್ತು ಸಾವಿರ ಹಾಗೂ ವಾರ್ಷಿಕ 5.5 ಲಕ್ಷ ವೇತನದೊಂದಿಗೆ ಆಯ್ಕೆಯಾಗಿದ್ದಾರೆ. ಜೊತೆಗೆ ಹನ್ನೊಂದು ವಿದ್ಯಾರ್ಥಿಗಳು, ಕಂಪ್ಯೂಟರ್ ಸೈನ್ಸ್ ವಿಭಾಗದಿಂದ ಆರು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗದಿಂದ ನಾಲ್ಕು ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದಿಂದ ಒಬ್ಬ ವಿದ್ಯಾರ್ಥಿ ಲರ್ನ ಫೂ ಸಂಸ್ಥೆಗೆ ಉತ್ತಮ ವೇತನ ಪ್ಯಾಕೇಜ್‌ನೊಂದಿಗೆ ಆಯ್ಕೆಯಾಗಿದ್ದಾರೆ.ವಿದ್ಯಾರ್ಥಿಗಳ ಈ ಸಾಧನೆ ಮತ್ತು ಪರಿಶ್ರಮಕ್ಕೆ, ಬಾಪೂಜಿ ವಿದ್ಯಾ ಸಂಸ್ಥೆಯ ಸದಸ್ಯರು, ಕಾಲೇಜಿನ ಪ್ರಾಂಶುಪಾಲರಾದ ಡಾ. ಎಚ್ ಬಿ ಅರವಿಂದ್, ನಿರ್ದೇಶಕರಾದ ಪ್ರೊ ವೈ ವೃಷಭೇಂದ್ರಪ್ಪ, ತರಬೇತಿ ಮತ್ತು ಉದ್ಯೋಗದ ಡೀನ್ ಡಾ. ಸಿ. ಆರ್ ನಿರ್ಮಲ ಇವರು ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಶುಭ ಕೋರಿದ್ದಾರೆ.

# ಗಣೇಶ ಮತ್ತು ಈದ್ ಮಿಲಾದ್ ಹಬ್ಬ: ಪಟಾಕಿ ನಿಷೇಧ

**ಚಿತ್ರದುರ್ಗ :** ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಗಣೇಶ ಮತ್ತು ಈದ್ ಮಿಲಾದ್ ಹಬ್ಬಗಳ ಆಚರಣೆ ಪೂರ್ಣಗೊಳ್ಳುವವರೆಗೂ ಜಿಲ್ಲೆಯಾದ್ಯಂತ ಎಲ್ಲ ತರಹದ ಕಲರ್ ಪೇಪರ್ ಬ್ಲಾಸ್ಟಿಂಗ್, ಪಟಾಕಿ, ಸಿಡಿಮದ್ದು ಸಿಡಿಸುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ.

ಜಿಲ್ಲೆಯಲ್ಲಿ ಕಳೆದ ಆಗಸ್ಟ್ 27ರಂದು ಹಿಂದೂ ಬಾಂಧವರು ಒಟ್ಟು 1,744 ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿದ್ದು, ವಿವಿಧ ದಿನಾಂಕಗಳಂದು ವಿಸರ್ಜನೆ ಮಾಡಲಿದ್ದಾರೆ. ಸೆ.15 ರವರೆಗೆ ಒಟ್ಟು 20 ದಿನಗಳ ಕಾಲ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿ, ಮೆರವಣಿಗೆ ಮೂಲಕ ವಿಸರ್ಜನೆ ನಡೆಸಲಿದ್ದಾರೆ ಹಾಗೂ ಸೆ.05 ರಂದು ಜಿಲ್ಲೆಯಾದ್ಯಂತ ಮುಸ್ಲಿಂ ಬಾಂಧವರು "ಈದ್ ಮಿಲಾದ್" ಹಬ್ಬವನ್ನು ಆಚರಿಸಲಿದ್ದಾರೆ. ಈ ಸಮಯದಲ್ಲಿ ಗಣೇಶ ಮತ್ತು ಈದ್ ಮಿಲಾದ್ ಹಬ್ಬಗಳ ಆಚರಣೆ, ಮೆರವಣಿಗೆ ಸಂದರ್ಭದಲ್ಲಿ ಕಲರ್ ಪೇಪರ್ ಬ್ಲಾಸ್ಟಿಂಗ್, ಪಟಾಕಿ, ಸಿಡಿಮದ್ದುಗಳನ್ನು ಸಿಡಿಸುವುದರಿಂದ ಅನ್ಯಕೋಮಿನವರ ಭಾವನೆಗಳಿಗೆ ಧಕ್ಕೆಯನ್ನುಂಟು ಮಾಡುವ, ಪ್ರಾರ್ಥನಾ ಸ್ಥಳಗಳಿಗೆ ಹಾನಿಯಾಗುವ ಸಾಧ್ಯತೆ ಇರುವುದರಿಂದ ಸೆ.15 ರವರೆಗೆ ಜಿಲ್ಲೆಯಾದ್ಯಂತ ಎಲ್ಲ ರೀತಿಯ ಕಲರ್ ಪೇಪರ್ ಬ್ಲಾಸ್ಟರ್, ಪಟಾಕಿ, ಸಿಡಿಮದ್ದು ಸಿಡಿಸುವುದನ್ನು ನಿಷೇಧಗೊಳಿಸಿ ಆದೇಶ ಹೊರಡಿಸಲು ಜಿಲ್ಲಾ ಪೊಲೀಸ್ ಅಧೀಕ್ಷಕರು ಕೋರಿರುತ್ತಾರೆ.

ಹೀಗಾಗಿ ಸೆ. 15 ರವರೆಗೆ ಜಿಲ್ಲಾ ವ್ಯಾಪ್ತಿಯಲ್ಲಿ ನಡೆಯಲಿರುವ ಗಣಪತಿಯ ಶೋಭಯಾತ್ರೆ ಹಾಗೂ ವಿಸರ್ಜನಾ ಮೆರವಣಿಗೆ ಸಮಯದಲ್ಲಿ ಹಾಗೂ ಸೆ. 05 ರ ಈದ್ ಮಿಲಾದ್ ಹಬ್ಬದ ಸಮಯದಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಯ್ದುಕೊಂಡು ಕೋಮು ಸೌಹಾರ್ಧತೆಯನ್ನು ಕಾಪಾಡುವ ಹಿತದೃಷ್ಟಿಯಿಂದ ಚಿತ್ರದುರ್ಗ ಜಿಲ್ಲೆಯಾದ್ಯಂತ ಎಲ್ಲ ರೀತಿಯ ಕಲರ್ ಪೇಪರ್ ಬ್ಲಾಸ್ಟರ್, ಪಟಾಕಿ, ಸಿಡಿಮದ್ದು ಸಿಡಿಸುವುದನ್ನು ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶದಲ್ಲಿ ತಿಳಿಸಿದ್ದಾರೆ.

## ಸೆ.5ರಂದು ಶಿಕ್ಷಕರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಸಮಾರಂಭ

**ಚಿತ್ರದುರ್ಗ :** ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಶಿಕ್ಷಕರ ದಿನಾಚರಣೆ-ಡಾ.ಸರ್ವಪಲ್ಲಿ ರಾಧಾಕೃಷ್ಣನ್‌ರವರ ಜನ್ಮದಿನೋತ್ಸವ ಹಾಗೂ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಸಮಾರಂಭ ಇದೇ ಸೆ. 05ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಕೆ.ಇ.ಬಿ ಸಮುದಾಯ ಭವನದಲ್ಲಿ ಆಯೋಜಿಸಲಾಗಿದೆ.

ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಸಂಸದ ಗೋವಿಂದ ಎಂ ಕಾರಜೋಳ ಘನ ಉಪಸ್ಥಿತಿ ವಹಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷರು ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಶಾಸಕರಾದ ಕೆ.ಎಸ್.ನವೀನ್, ಚಿದಾನಂದ ಎಂ ಗೌಡ, ಡಿ.ಟಿ.ಶ್ರೀನಿವಾಸ್, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿಜಾಂಬವ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಜಿ.ಎಸ್.ಮಂಜುನಾಥ, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ತಾಜ್‌ಪೀರ್, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ನಗರಸಭೆ ಅಧ್ಯಕ್ಷೆ ಶಕೀಲಾ ಭಾನು ಹಾಗೂ ನಗರಸಭೆ ಸದಸ್ಯರು, ಎಲ್ಲ ಚುನಾಯಿತ ಜನಪ್ರತಿನಿಧಿಗಳು ಭಾಗವಹಿಸುವರು.

ವಿಶೇಷ ಆಹ್ವಾನಿತರಾಗಿ ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಎಸ್.ಆಕಾಶ್, ಜಿಲ್ಲಾ ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು, ಸಿ.ಟಿ.ಇ ಪದನಿಮಿತ್ತ ಸಹ ನಿರ್ದೇಶಕರು ಹಾಗೂ ಪ್ರಾಂಶುಪಾಲೆ ಎ.ಹನುಮಕ್ಕ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಮಾಲತೇಶ್ ಮುದ್ದಜ್ಜಿ ಸೇರಿದಂತೆ ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳು, ಶಿಕ್ಷಕರ ಸಂಘದ ಅಧ್ಯಕ್ಷರು, ಕಾರ್ಯದರ್ಶಿಗಳು, ಪದಾಧಿಕಾರಿಗಳು ಹಾಗೂ ನಿರ್ದೇಶಕರು, ಶಿಕ್ಷಕರು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಶರಣಸಂಸ್ಕೃತಿ ಉತ್ಸವ-2025ರ ಅಂಗವಾಗಿ ಎಸ್.ಜೆ.ಎಂ. ನಿವೃತ್ತ ನೌಕರರ ಸಮಾವೇಶ ಅಕ್ಟೋಬರ್ ಒಂದರಂದು

**ಚಿತ್ರದುರ್ಗ ಸೆ. 4 –** ಐತಿಹಾಸಿಕ ಬೃಹನ್ಮಠ ಚಿತ್ರದುರ್ಗದಲ್ಲಿತ್ತು. ಅದು ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಗಳನ್ನು ಸಮಾಜದ ಸಬಲೀಕರಣ ಹಾಗೂ ಸುಧಾರಣೆಗೆ ಕ್ರಮವಹಿಸಿತ್ತು. ಬಡವಿದ್ಯಾರ್ಥಿಗಳಿಗೆ ಜಯದೇವ ಪ್ರಸಾದ ನಿಲಯಗಳಿದ್ದವು. ಆದರೆ ಅನ್ನದೊಂದಿಗೆ ಅರಿವು ನೀಡುವ ಜ್ಞಾನ ಕೊಡುವ ಶಿಕ್ಷಣದ ಕೊರತೆ ಇತ್ತು. ಅಂತಹ ನಿರ್ವಾತವನ್ನು ನೀಗಿಸಿದವರು ಲಿಂಗೈಕ್ಯ ಜಗದ್ಗುರು ಶ್ರೀ ಮಲ್ಲಿಕಾರ್ಜುನ ಮುರುಘರಾಜೇಂದ್ರರು. ಅವರು ಎಸ್.ಜೆ.ಎಂ. ವಿದ್ಯಾಪೀಠವನ್ನು 1967ರಲ್ಲಿ ಸ್ಥಾಪನೆ ಮಾಡದೇ ಹೋಗಿದ್ದರೆ ಚಿತ್ರದುರ್ಗದಂತಹ ಮಧ್ಯಕರ್ನಾಟಕದ ಅನೇಕರು ಶಿಕ್ಷಣದಿಂದ ವಂಚಿತರಾಗಬೇಕಿತ್ತೇನೋ? ಹಾಗೆಯೇ ಶಿಕ್ಷಣಸಂಸ್ಥೆ ಸ್ಥಾಪನೆ ಮಾಡುವುದರ ಜತೆಗೆ ನಮ್ಮಂತಹ ಮೇಸ್ಟ್ರುಗಳಿಗೆ ಉದ್ಯೋಗ ನೀಡಿ ನಮ್ಮಗಳ ಎಷ್ಟೋ ಸಾವಿರ ಕುಟುಂಬಗಳಿಗೆ ಅನ್ನ ನೀಡಿದವರು ಶ್ರೀಗಳು ಎಂದು ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಅಲ್ಲಮಪ್ರಭು ಸಂಶೋಧನಾ ಕೇಂದ್ರದಲ್ಲಿ ಶರಣಸಂಸ್ಕೃತಿ ಉತ್ಸವ-2025ರ ಅಂಗವಾಗಿ ಎಸ್.ಜೆ.ಎಂ. ವಿದ್ಯಾಪೀಠದ ಶಾಲಾ ಕಾಲೇಜುಗಳಲ್ಲಿ ಕರ್ತವ್ಯನಿರ್ವಹಿಸಿ ನಿವೃತ್ತರಾದ ನೌಕರರ ಸಮಾವೇಶ ಮಾಡುವ ಬಗ್ಗೆ ಕರೆದಿದ್ದ ಪೂರ್ವಸಿದ್ಧತೆ ಸಭೆಯಲ್ಲಿ ಕೆಲವರಿಂದ ಬಂದ ಭಾವುಕ ಮಾತುಗಳಿವು.



ಸಭೆಯ ಸಾನ್ನಿಧ್ಯ ವಹಿಸಿದ್ದ ಬೃಹನ್ಮಠದ ಆಡಳಿತ ಮಂಡಳಿಯ ಸದಸ್ಯರಾದ ಡಾ. ಬಸವಕುಮಾರ ಸ್ವಾಮೀಜಿ ಮಾತನಾಡಿ, ಕಷ್ಟ ಕಾಲದಲ್ಲಿ ನಮ್ಮ ಜೀವನಕ್ಕೆ ದಾರಿಯಾದ ಬೆಳಕಾದ ಸಂಸ್ಥೆಯ ಜತೆಗೆ ಸೇವೆ ಪೂರೈಸಿ ವಯೋನಿವೃತ್ತಿ ಹೊಂದಿದ ಆನಂತರ ಬಾಂಧವ್ಯ ಇಟ್ಟುಕೊಂಡು ಹೋಗುವುದು ಉಚಿತವಾದ ನಡೆ. 1961-62ರ ಕಾಲಕ್ಕೆ ಜಯವಿಭವ ಶ್ರೀಗಳ ಜತೆಗಿದ್ದ ಚನ್ನಪ್ಪ ಎರೆಸೀಮೆ ಎನ್ನುವವರು ಬಹಳಕಾಲದಿಂದ ಇದ್ದವರು. ಅವರು ತಮ್ಮ ಕುಟುಂಬ ನಿರ್ವಹಣೆಗಾಗಿ ಬೆಂಗಳೂರಿಗೆ ಹೋಗುವ ಪ್ರಸಂಗ ಬರುತ್ತದೆ. ಸ್ವಾಮಿಗಳು ಅವರಿಗೆ ಕುಟುಂಬ ನಿರ್ವಹಣೆಗೆ ಬೇಕಾದ ಎಲ್ಲ ಸೌಲಭ್ಯ ನೀಡುವ ಭರವಸೆ ನೀಡಿ-ದಾಗ್ಯು ಮಕ್ಕಳ ವಿದ್ಯಾಭ್ಯಾಸ ಇತರೆ ಕಾರಣ ನೀಡಿ ಹೋಗುತ್ತಾರೆ. ಮುಂದೆ ಅವರ ಮಕ್ಕಳು ಬೆಳೆದು ಓದಿ ದೊಡ್ಡವರಾಗಿ ದೊಡ್ಡ ಹುದ್ದೆಯನ್ನು ಪಡೆ-ಯುತ್ತಾರೆ. ಅಂತಹ ಮಗನಿಗೆ ಜಯವಿಭವ ಎಂದು ಹೆಸರಿಟ್ಟಿರುತ್ತಾರೆ. ಐಎಎಸ್ ಪದವಿ ಪಡೆದು ಅವರೂ ನಿವೃತ್ತರಾಗಿದ್ದಾರೆ. ಅವರ ಮತ್ತು ತಂದೆಯ ಒಡನಾಟದ ಇತರೆ ಸೇರಿ ಜಯವಿಭವ ಶ್ರೀಗಳ ಬಗೆಗೆ ಕೃತಿಯೊಂದು ರಚನೆಯಾಗುತ್ತದೆ ಎಂದು ಶ್ರೀಗಳು ತಿಳಿಸುತ್ತ, ಕರ್ತವ್ಯ ಸಂದರ್ಭದಲ್ಲಿ ಕೆಲವು ಸಣ್ಣಪುಟ್ಟ ಘಟನೆಗಳು ನಡೆದಿರಬಹುದು. ನಮಗೆ ಒಂದು ಸುಭದ್ರ ಆರ್ಥಿಕ ಭದ್ರತೆ ಒದಗಿಸಿದ್ದರ ಕಾರಣ ಎಲ್ಲವನ್ನು ಮರೆತು ಮುಜುಗರವಿಲ್ಲದೆ ಶ್ರೀಮಠದೊಂದಿಗೆ ಸದಾ ಒಡನಾಟ ಇಟ್ಟುಕೊಳ್ಳಬೇಕು. ಶ್ರೀಮಠ ಮತ್ತು ವಿದ್ಯಾಪೀಠ ಪ್ರತಿಭಾನ್ವಿತ, ಅನುಭವಿ, ಬದ್ಧತೆ ಹೊಂದಿದ ನಿವೃತ್ತರಾದವರನ್ನು ಪರಿಗಣಿಸಲು ತೀರ್ಮಾನಿಸಿದೆ. ಹಳೆಯ ಮಾದರಿ ಎನ್ನಬಹುದಾದ ಎಸ್.ಜೆ.ಎಂ. ವಿದ್ಯಾಪೀಠದ ನಿವೃತ್ತ ನೌಕರರು ಒಂದೆಡೆ ಸೇರಲು ಇದೊಂದು ಸುಸಂದರ್ಭ. ಅದನ್ನು ಎಲ್ಲರೂ ಸೇರಿಕೊಂಡು ಚೆನ್ನಾಗಿ ನಡೆಸಬೇಕು. ನಿಮ್ಮದೇ ಆದ ಮಾದರಿಯಾಗಿ ಮಾಡಿಕೊಡಿ ಬೇಕಾದ ಎಲ್ಲ ಸೌಲಭ್ಯ ಒದಗಿಸುವುದಾಗಿ ನುಡಿದರು.

ನಿವೃತ್ತ ಪ್ರಾಚಾರ್ಯ ಬಿ.ಆರ್. ಹರೀಶ್ ಅವರು, ಚಿತ್ರದುರ್ಗದ ಪ್ರತಿಷ್ಠಿತ ಬಸವೇಶ್ವರ ಆಸ್ಪತ್ರೆಯಲ್ಲಿ ನುರಿತ ವೈದ್ಯರು ಸುಸಜ್ಜಿತ ಉಪಕರಣಗಳಿವೆ. ಅಲ್ಲಿ ನಮ್ಮ ನಿವೃತ್ತರಾದ ಕೆಲವರು ತೀರಾ ಶ್ರೀಮಂತರೇನು ಇರುವುದಿಲ್ಲ. ಅವರ ಆರೋಗ್ಯಕ್ಕಾಗಿ ತಪಾಸಣೆಯ ಹಿನ್ನೆಲೆಯಲ್ಲಿ ಶೇ. 30ರಿಂದ40 ರಿಯಾಯಿತಿ ದರದಲ್ಲಿ ಸೇವೆ ಒದಗಿಸಿದರೆ ಅನುಕೂಲವಾಗುತ್ತದೆ ಎಂದರು. ಶ್ರೀಗಳು ಶೇ. 40 ರಿಯಾಯಿತಿ ದರದಲ್ಲಿ ಆರೋಗ್ಯ ಸೇವೆ ಒದಗಿಸಲಾಗುವುದೆಂದರು.

ಈ ಸಂದರ್ಭದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಬಾಪೂಜಿ ವಿದ್ಯಾಸಂಸ್ಥೆಯ ಕೆ.ಎಂ. ವೀರೇಶ್ ಅವರು ಈಗಾಗಲೇ 800-1000 ಸಿಬ್ಬಂದಿ ನಿವೃತ್ತರಾಗಿದ್ದಾರೆ. ನಮ್ಮ ಬಾಳಿಗೆ ಬೆಳಕು ನೀಡಿದ ಮಠ, ವಿದ್ಯಾಪೀಠದ ಸಂಬಂಧವನ್ನು ನಿವೃತ್ತಿ ನಂತರ ಕಡಿದುಕೊಳ್ಳುವುದು ಬೇಡ. ನಿರಂತರವಾಗಿ ಮತ್ತು ಪರಂಪರೆಯ ಜತೆ ಸಾಗೋಣ. ಎಸ್.ಜೆ.ಎಂ. ನಿವೃತ್ತರ ಕ್ಷೇಮಾಭಿವೃದ್ಧಿ ಸಂಘ ಎನ್ನುವ ಹೆಸರಿನಡಿ ಸಾಗಿದರೆ ಸರ್ಕಾರ ಇತರೆ ಯಾವುದೇ ಸೌಲಭ್ಯ ಪಡೆಯಲು ಸುಲಭವಾಗುತ್ತದೆ. ನಿವೃತ್ತರಾದವರು ಎಲ್ಲಿಯೇ ಇರಲಿ ಈ ಸಂದರ್ಭದಲ್ಲಿ ಸಮಾವೇಶದಲ್ಲಿ ಭಾಗಿಗಳಾಗಿ ಎಂದು ಸಲಹೆ ನೀಡಿದರು.

ಮತ್ತೋರ್ವ ಹಿರಿಯ ನಿವೃತ್ತ ಸಿಬ್ಬಂದಿ ಎ.ಎಂ. ರುದ್ರಪ್ಪ ಮಾತನಾಡಿ, ನಾನು ಜಯದೇವ, ಜಯವಿಭವ, ಮಲ್ಲಿಕಾರ್ಜುನ ಶ್ರೀಗಳನ್ನು ನೋಡಿದ್ದೇನೆ. ನನ್ನ ಕುಟುಂಬವು ಸದಾ ಚಿರಋಣಿಯಾಗಿರುತ್ತದೆ ಎಂದರು.

ವೇದಿಕೆಯಲ್ಲಿ ಬೃಹನ್ಮಠ ಆಡಳಿತ ಮಂಡಳಿಯ ಸದಸ್ಯರಾದ ಸಿ.ಎನ್. ಚಂದ್ರಶೇಖರ್ ಸೇರಿದಂತೆ ಅನೇಕ ನಿವೃತ್ತ ನೌಕರರು ಭಾಗವಹಿಸಿ ಅನೇಕ ಸಲಹೆಗಲನ್ನು ನೀಡಿದರು.

ನಿವೃತ್ತ ಪ್ರಾಚಾರ್ಯ ಟಿ.ಪಿ. ಜ್ಞಾನಮೂರ್ತಿ ಸ್ವಾಗತಿಸಿದರು. ಪಿ. ವೀರೇಂದ್ರಕುಮಾರ್ ನಿರೂಪಿಸಿದರು. ಮತ್ತೋರ್ವ ನಿವೃತ್ತ ಪ್ರಾಚಾರ್ಯ ಸಿ.ಎಂ. ಚಂದ್ರಪ್ಪ ಶರಣು ಸಮರ್ಪಣೆ ಮಾಡಿದರು.

# ದಸರಾಗೆ ಬೆಲೆ ಇಳಿಕೆಯ ಬಂಪರ್ : ಜಿ.ಎಸ್.ಟಿ. ಪರಿಷ್ಕರಣೆ, ತೆರಿಗೆ ಇಳಿಕೆಗೆ ಸರ್ವಸಮ್ಮತಿಯ ಒಪ್ಪಿಗೆ

**ನವದೆಹಲಿ:** ಜಿಎಸ್‌ಟಿ ತೆರಿಗೆಯನ್ನು ಕೇವಲ ಎರಡು ಹಂತಗಳಿಗೆ ಸರಳೀಕರಿಸಲು ಜಿಎಸ್‌ಟಿ ಮಂಡಳಿಯು ಸರ್ವಸಮ್ಮತಿಯಿಂದ ನಿರ್ಧರಿಸಿದೆ. ಈ ನಿರ್ಧಾರದಿಂದ ಆಹಾರ ವಸ್ತುಗಳಿಂದ ಹಿಡಿದು ಜೀವವಿಮೆಯವರೆಗಿನ ಹಲವು ಸರಕುಗಳ ಬೆಲೆ ಗಣನೀಯವಾಗಿ ಇಳಿಯಲಿದೆ.

ನವರಾತ್ರಿಯ ಮೊದಲ ದಿನವಾದ ಸೆಪ್ಟೆಂಬರ್ 22ರಿಂದ ಜಾರಿಗೆ ಬರುವಂತೆ ಶೇ.5 ಮತ್ತು ಶೇ.18ರ ಎರಡು ಹಂತಗಳಲ್ಲಿ ತೆರಿಗೆ ಸಂಗ್ರಹಿಸಲು ಜಿಎಸ್‌ಟಿ ಮಂಡಳಿಯು ಸಮ್ಮತಿಸಿದೆ.

ಇದರಿಂದ ದಿನಬಳಕೆಯ ವಸ್ತುಗಳು, ಎಲೆಕ್ಟ್ರಾನಿಕ್ ಸರಕುಗಳು ಮತ್ತು ಇತರೆ ಗ್ರಾಹಕ ಉತ್ಪನ್ನಗಳ ಬೆಲೆಗಳು ಗಣನೀಯವಾಗಿ ಕಡಿಮೆಯಾಗಲಿದೆ. ಇದರ ಪರಿಣಾಮವಾಗಿ ದೇಶದಲ್ಲಿ ಖರೀದಿ ಪ್ರಮಾಣವು ಹೆಚ್ಚಾಗಲಿದೆ ಎಂದು ನಿರೀಕ್ಷಿಸಲಾಗಿದೆ.

ಅಮೆರಿಕದ ಸುಂಕ ಸಮರದಿಂದ ಉಂಟಾದ ಆರ್ಥಿಕ ಆಘಾತವನ್ನು ನಿವಾರಿಸಲು ಈ ತೆರಿಗೆ ಇಳಿಕೆಯಿಂದ ಸಾಧ್ಯವಾಗುವ ನಿರೀಕ್ಷೆ ಇದೆ. ಜಿಎಸ್‌ಟಿ ದರ ಇಳಿಕೆಯಿಂದ ಈ ವರ್ಷದ ಎರಡನೇ ಭಾಗದಲ್ಲಿ ಆರ್ಥಿಕತೆಗೆ ಶೇ.0.5ರಷ್ಟು ಉತ್ತೇಜನ ಸಿಗಲಿದೆ. ಇದರಿಂದ ಅಮೆರಿಕದ ಸುಂಕದ ಪರಿಣಾಮವನ್ನು ಸಂಪೂರ್ಣವಾಗಿ ನಿವಾರಿಸಲು ಸಾಧ್ಯವಾಗಲಿದೆ ಎಂದು ಹಲವು ಆರ್ಥಿಕ ತಜ್ಞರು ತಿಳಿಸಿದ್ದಾರೆ.

ಸುದೀರ್ಘ ಚರ್ಚೆಯ ನಂತರ ಜಿಎಸ್‌ಟಿ ಮಂಡಳಿಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಈ ಬಗ್ಗೆ ಮಾತನಾಡಿ, ಎಲ್ಲಾ ನಿರ್ಧಾರಗಳನ್ನು ಸರ್ವಸಮ್ಮತಿಯಿಂದ ತೆಗೆದುಕೊಳ್ಳಲಾಗಿದೆ. ಯಾವುದೇ ರಾಜ್ಯವು ಭಿನ್ನಾಭಿಪ್ರಾಯ ವ್ಯಕ್ತಪಡಿಸಿಲ್ಲ ಎಂದು ಹೇಳಿದ್ದಾರೆ.

ಇದುವರೆಗೆ ಶೇ.5, ಶೇ.12, ಶೇ.18 ಮತ್ತು ಶೇ.28ರ ನಾಲ್ಕು ಹಂತಗಳ ತೆರಿಗೆ ವಿಧಾನವಿತ್ತು. ಇನ್ನು ಮುಂದೆ ಶೇ.5 ಮತ್ತು ಶೇ.18ರ ಎರಡು ಹಂತಗಳ ತೆರಿಗೆಯನ್ನು ಮಾತ್ರ ಅಳವಡಿಸಿಕೊಳ್ಳಲಾಗುವುದು. ಗುಟ್ಕಾ, ತಂಬಾಕು, ಸಿಗರೇಟ್ ಮತ್ತು ಐಷಾರಾಮಿ ಕಾರುಗಳಂತಹ ಕೆಲವು ವಸ್ತುಗಳ ಮೇಲೆ ಮಾತ್ರ ಶೇ.40ರ ತೆರಿಗೆ ವಿಧಿಸಲಾಗುವುದು.

ತಂಬಾಕು, ಸಿಗರೇಟ್ ಮತ್ತು ಗುಟ್ಕಾ ಉತ್ಪನ್ನಗಳನ್ನು ಹೊರತುಪಡಿಸಿದರೆ, ಉಳಿದೆಲ್ಲಾ ಸರಕುಗಳಿಗೆ, ಹೊಸ ತೆರಿಗೆ ವ್ಯವಸ್ಥೆಯು ಸೆಪ್ಟೆಂಬರ್ 22ರಿಂದ ಜಾರಿಗೆ ಬರಲಿದೆ.

ಈ ಜಿಎಸ್‌ಟಿ ತೆರಿಗೆ ಇಳಿಕೆಯಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ತೆರಿಗೆ ಸಂಗ್ರಹವು 48,000 ಕೋಟಿ ರೂ.ನಷ್ಟು ಕಡಿಮೆಯಾಗಲಿದೆ ಎಂದು ಕೇಂದ್ರ ಕಂದಾಯ ಕಾರ್ಯದರ್ಶಿ ಅರವಿಂದ್ ಶ್ರೀವಾಸ್ತವ ತಿಳಿಸಿದ್ದಾರೆ.

ಆದರೆ, ಈ ತೆರಿಗೆ ಕಡಿತದಿಂದ ಗ್ರಾಹಕರ ಖರೀದಿ ಶಕ್ತಿ ಹೆಚ್ಚಾಗಲಿದ್ದು, ಆರ್ಥಿಕ ಚಟುವಟಿಕೆಗಳು ಉತ್ತೇಜನಗೊಳ್ಳಲಿವೆ. ಇದರಿಂದ ಆದಾಯದ ಕೊರತೆಯನ್ನು ಸರಿದೂಗಿಸ ಬಹುದು ಎಂದು ಸರ್ಕಾರ ಆಶಾಭಾವನೆ ವ್ಯಕ್ತಪಡಿಸಿದೆ.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ಜಿಎಸ್‌ಟಿ ದರಗಳ ಪರಿಷ್ಕರಣೆಯನ್ನು ಘೋಷಿಸಿದ್ದರು.

ಅಮೆರಿಕದ ಡೊನಾಲ್ಡ್ ಟ್ರಂಪ್ ಸರ್ಕಾರವು ಭಾರತದ ಸರಕುಗಳ ಮೇಲೆ ಶೇ.50ರ ಸುಂಕವನ್ನು ವಿಧಿಸಿದ್ದು, ಇದರಿಂದ ಭಾರತದ ರಫ್ತಿನ ಮೇಲೆ ಗಣನೀಯ ಪರಿಣಾಮವಾಗಿದೆ. ಜಿಎಸ್‌ಟಿ ದರಗಳ ಸರಳೀಕರಣದಿಂದ ಈ ಸುಂಕ ಸಮರವನ್ನು ಎದುರಿಸಲು ಭಾರತಕ್ಕೆ ಸಾಧ್ಯವಾಗಲಿದೆ.

**ಬೆಲೆ ಇಳಿಕೆ ಕಾಣಲಿರುವ ಸರಕುಗಳು :**

*** ಬೆಣ್ಣೆ, ತುಪ್ಪ, ಕಾಳು, ಮಾಂಸ, ಜಾಮ್, ಫ್ರೂಟ್ ಜೆಲ್ಲಿ, ಕುರುಕಲು ತಿಂಡಿಗಳು, 20 ಲೀಟರ್ ಕುಡಿಯುವ ನೀರಿನ ಬಾಟಲ್, ಹಣ್ಣಿನ ರಸ, ಐಸ್‌ಕ್ರೀಮ್, ಬಿಸ್ಕೆಟ್‌ಗಳ ಮೇಲಿನ ತೆರಿಗೆ ಶೇ.18ರಿಂದ ಶೇ.5ಕ್ಕೆ ಇಳಿಕೆ**

***ಎಲ್ಲಾ ರೀತಿಯ ಚಪಾತಿ ಮತ್ತು ಪರಾಠಾಗಳ ಮೇಲಿನ ತೆರಿಗೆ ಶೇ.5ರಿಂದ ಶೂನ್ಯಕ್ಕೆ**

*** ಹಲ್ಲಿನ ಪುಡಿ, ಹಾಲುಣಿಸುವ ಬಾಟಲ್, ಅಡಿಗೆಮನೆ ವಸ್ತುಗಳು, ಕೊಡೆ, ಸೈಕಲ್, ಬಾಚಣಿಕೆ ಇತ್ಯಾದಿ**

# ನನ್ನ ಗಮನ ಸರ್ಕಾರದ ಹಿತಾಸಕ್ತಿ ಕಾಪಾಡುವುದರ ಬಗ್ಗೆ ಮಾತ್ರ : ಡಿ.ಕೆ. ಶಿವಕುಮಾರ್ ಎಚ್ಚರದ ನಡೆ

**ಬೆಂಗಳೂರು,ಜು.11:** ಐದು ವರ್ಷಗಳ ಕಾಲ ನಾನೇ ಮುಖ್ಯಮಂತ್ರಿ ಎಂದು ಸಿದ್ದರಾಮಯ್ಯ ಘೋಷಿಸಿದ ಬೆನ್ನಲ್ಲೇ ಪಕ್ಷ, ನನಗೆ ಸಂಘಟನೆ ಹಾಗೂ ಡಿಸಿಎಂ ಹುದ್ದೆ ನೀಡಿದ್ದು, ನನ್ನ ಗಮನ ಪಕ್ಷ ಹಾಗೂ ಸರ್ಕಾರದ ಹಿತಾಸಕ್ತಿ ಕಾಪಾಡುವುದರತ್ತ ಮಾತ್ರ ಇದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.



ದೆಹಲಿಯಿಂದ ಹಿಂತಿರುಗಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೈಕಮಾಂಡ್ ಭೇಟಿಗೂ ಮುನ್ನ 5 ವರ್ಷ ನಾನೇ ಸಿಎಂ ಎಂದು ಸಿದ್ದರಾಮಯ್ಯ ಅವರು ಹೇಳಿರುವುದು ಎಷ್ಟು ಬಾರಿ ಎಂದು ಕೇಳಿದ ಪ್ರಶ್ನೆಗೆ ನಿಮ್ಮ ಪ್ರಶ್ನೆಯಲ್ಲಿಯೇ ಉತ್ತರ ಅಡಗಿದೆ ಎಂದಷ್ಟೇ ಹೇಳಿದರು.

ಈ ಯಾವುದೇ ವಿಚಾರದ ಬಗ್ಗೆ ನಾನು ಮಾತನಾಡುವುದಿಲ್ಲ ಪಕ್ಷ ಕೊಟ್ಟಿರುವ ಜವಾಬ್ದಾರಿ ಮುಂದುವರಿಸಿಕೊಂಡು ಹೋಗುತ್ತೇನೆ. ಮಲ್ಲಿಕಾರ್ಜುನ ಖರ್ಗೆ ಅವರು ನಮಗೆ ಧೀಕ್ಷೆ ನೀಡಿದ್ದು, ನಾವೆಲ್ಲರೂ ಅದನ್ನು ಸಂತೋಷವಾಗಿ ಸ್ವೀಕರಿಸಿದ್ದೇವೆ. ಇದರ ಹೊರತಾಗಿ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದರು

ದೆಹಲಿ ಪ್ರವಾಸದ ವೇಳೆ ನಾವು ಸುರ್ಜೆವಾಲ ಅವರ ಹೊರತಾಗಿ ಬೇರೆ ಯಾವುದೇ ಹೈಕಮಾಂಡ್ ನಾಯಕರನ್ನು ಭೇಟಿಯಾಗಿಲ್ಲ ಎಂದು ಸ್ಪಷ್ಟ ಪಡಿಸಿದರು.

ರಾಜ್ಯ ಉಸ್ತುವಾರಿಗಳ ಜೊತೆ ನಮ್ಮ ಕಾರ್ಯಕರ್ತರಿಗೆ ಕೆಲವು ಸ್ಥಾನಮಾನ ನೀಡುವ ಬಗ್ಗೆ ಚರ್ಚೆ ಮಾಡಲಾಗಿದೆ. ಸುರ್ಜೆವಾಲ ಅವರ ಬಳಿ ಎಲ್ಲಾ ಶಾಸಕರು ತಮ್ಮ ಅಭಿಪ್ರಾಯ ಸಲ್ಲಿಸಿದ್ದಾರೆ. ಸಚಿವರ ಅಭಿಪ್ರಾಯ ಸಂಗ್ರಹಿಸಬೇಕಿದೆ. ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಪಕ್ಷ ಸಂಘಟನೆ ವಿಚಾರದಲ್ಲಿ ಶ್ರಮಿಸಿರುವವರಿಗೆ ಹಾಗೂ ಕೆಲವರಿಗೆ ನಾವು ಕೊಟ್ಟಿರುವ ಮಾತಿಗೆ ಬದ್ಧವಾಗಿ ಸ್ಥಾನಮಾನ ನೀಡಬೇಕಿದೆ ಎಂದು ಹೇಳಿದರು

# ಕನ್ನಡ ಭಾಷೆ ಪರೀಕ್ಷೆ ಅಂಕ ಇಳಿಸುವ ನಿರ್ಧಾರ ಹಿಂಪಡೆಯಲು ಒತ್ತಾಯಿಸಿ ಕರುನಾಡ ವಿಜಯಸೇನೆ ಜಿಲ್ಲಾಧಿಕಾರಿಗೆ ಮನವಿ



**ಚಿತ್ರದುರ್ಗ:** ಕನ್ನಡ ಭಾಷೆಗೆ 125 ಅಂಕಗಳನ್ನು ನಿಗಧಿಪಡಿಸಿರುವುದನ್ನು ನೂರು ಅಂಕಕ್ಕೆ ಇಳಿಸುವ ನಿರ್ಧಾರವನ್ನು ಸರ್ಕಾರ ಕೈಬಿಟ್ಟು ಯಥಾಸ್ಥಿತಿ ಮುಂದುವರೆಸುವಂತೆ ಕರುನಾಡ ವಿಜಯಸೇನೆಯಿಂದ ಜಿಲ್ಲಾಧಿಕಾರಿ ಮೂಲಕ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಿಗೆ ಶುಕ್ರವಾರ ಮನವಿ ಸಲ್ಲಿಸಲಾಯಿತು.

ಗೋಕಾಕ್ ಚಳುವಳಿಯ ಫಲವಾಗಿ ಕನ್ನಡ ಭಾಷೆಗೆ ನೂರ ಇಪ್ಪತ್ತೈದು ಅಂಕಗಳನ್ನು ಅಂದಿನ ಮುಖ್ಯಮಂತ್ರಿ ಗುಂಡೂರಾವ್ ನೇತೃತ್ವ ಸರ್ಕಾರ ತೀರ್ಮಾನಿಸಿದ್ದು, ಡಾ.ರಾಜ್‌ಕುಮಾರ್ ಮುಂದಾಳತ್ವದಲ್ಲಿ ನಡೆದ ಚಳುವಳಿಗೆ ಸಿಕ್ಕ ಗೌರವ. ಕನ್ನಡ ಸೇರಿದಂತೆ ಪ್ರಥಮ ಭಾಷೆಗಳಿಗೆ 125 ಅಂಕಗಳನ್ನು ನಿಗಧಿಪಡಿಸಿದ್ದನ್ನು ಯಾವುದೇ ಕಾರಣಕ್ಕು 100 ಕ್ಕೆ ಕಡಿತಗೊಳಿಸಬಾರದು. ಇದೊಂದು ಮಾತೃ ಭಾಷೆಯ ಸ್ಥಾನಮಾನ ಕುಗ್ಗಿಸುವ ಕೆಲಸ. ಶಿಕ್ಷಣ ಸಚಿವರು ಕೂಡಲೆ ತಮ್ಮ ನಿರ್ಧಾರ ಹಿಂದಕ್ಕೆ ಪಡೆಯುವಂತೆ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಆಗ್ರಹಿಸಿದರು.

ಕರುನಾಡ ವಿಜಯಸೇನೆ ರಾಜ್ಯ ಸಮಿತಿಯ ನಿಸಾರ್ ಅಹಮದ್, ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ಕಾರ್ಮಿಕ ಘಟಕದ ಹರೀಶ್‌ಕುಮಾರ್, ನಗರಾಧ್ಯಕ್ಷ ಅವಿನಾಶ್ ಈ ಸಂದರ್ಭದಲ್ಲಿದ್ದರು.

### ಗುತ್ತಿಗೆದಾರರಲ್ಲದವರಿಗೆ ಕಾಮಗಾರಿ ನೀಡಿ ಹಣ ಬಿಡುಗಡೆ

# ಅಧಿಕಾರಿಗಳ ವಿರುದ್ಧ ಕಾನೂನು ಕ್ರಮಕ್ಕೆ ಮನವಿ



**ಚಿತ್ರದುರ್ಗ:** ಗುತ್ತಿಗೆದಾರರಲ್ಲದವರಿಗೆ ಕಾಮಗಾರಿ ನೀಡಿ ಹಣ ಬಿಡುಗಡೆಗೊಳಿಸಿ ಅಕ್ರಮವಾಗಿ ದಾಖಲೆ ತಿದ್ದುಪಡಿ ಮಾಡಿರುವ ಅಧಿಕಾರಿಗಳ ವಿರುದ್ಧ ಕಾನೂನು ರೀತಿಯ ಕ್ರಮ ಕೈಗೊಳ್ಳುವಂತೆ ಮಾದಿಗ ಮಹಾಸಭಾ ಹಾಗೂ ಭ್ರಷ್ಟಾಚಾರ ವಿರೋಧಿ ಆಂದೋಲನ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಶುಕ್ರವಾರ ಪ್ರತಿಭಟನೆ ನಡೆಸಿ ಕಚೇರಿ ಸಹಾಯಕರ ಮೂಲಕ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಿಗೆ ಮನವಿ ಸಲ್ಲಿಸಲಾಯಿತು.

ವಾರ್ಡ್ ನಂ.32 ರಲ್ಲಿರುವ ನಿಶಾ ಡಾಬಾ ಹಿಂಭಾಗದ ಬಡಾವಣೆಯಲ್ಲಿ ಪೈಪ್‌ಲೈನ್ ಕಾಮಗಾರಿಗಾಗಿ ದಿನಾಂಕ : 15-11-2024 ರಂದು ಕೊಟೇಷನ್ ಕರೆಯಲಾಗಿದ್ದು,

ಸತೀಶ್ ಬಿ.ಆರ್. ಮಂಜುನಾಥ ಜೆ. ಶಾಂತಕುಮಾರ ಬಿ. ಇವರುಗಳ ಹೆಸರುಗಳು ದಾಖಲಾಗಿದೆ. ಇದರಲ್ಲಿ ಕಡಿಮೆ ಕೊಟೇಷನ್ ಸಲ್ಲಿಸಿರುವ ಸತೀಶ್ ಬಿ.ಆರ್. ಗೆ ದರ ಅನುಮೋದಿಸಲಾಗಿದೆ. ಇವರಿಗೆ ಗುತ್ತಿಗೆದಾರರ ಪರವಾನಗಿಯೇ ಇಲ್ಲ. ಈ ಸಂಬಂಧ ದೂರು ನೀಡಿದಾಗ ಸತೀಶ ಎಂಬ ಮತ್ತೊಬ್ಬನ ಹೆಸರಿನ ನಾಲ್ಕನೆ ದರ್ಜೆ ಗುತ್ತಿಗೆದಾರ ಇವನ ದಾಖಲೆಗಳನ್ನು ತಿದ್ದುಪಡಿ ಮಾಡಲಾಗಿದೆ. ಕಚೇರಿ ಟಿಪ್ಪಣಿಯ ಕಡತಗಳಲ್ಲಿ ಸತೀಶ ಬಿ.ಆರ್. ಎಂಬುದಾಗಿ ನಮೂದಿಸಿದ್ದು, ನಂತರ ತಿದ್ದುಪಡಿ ಮಾಡಿರುವುದು ಕಡತಗಳಲ್ಲಿ ಸ್ಪಷ್ಟವಾಗಿರುವುದರಿಂದ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ಟೆಂಡರ್ ಹಾಕಿರುವ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸುವಂತೆ ಭ್ರಷ್ಠಾಚಾರ ವಿರೋಧಿ ಆಂದೋಲನ ರಾಜ್ಯಾಧ್ಯಕ್ಷ ಹನುಮಂತಪ್ಪ ದುರ್ಗಾ ಒತ್ತಾಯಿಸಿದ್ದಾರೆ.

ಮಾದಿಗ ಮಹಾಸಭಾ ಜಿಲ್ಲಾಧ್ಯಕ್ಷ ದೇವರಾಜ್, ಶಂಕರಪ್ಪ ಹೆಗ್ಗೆರೆ, ಮಂಜು ಜಂತಿಕೊಳಲು, ಟಿ. ವೆಂಕಟೇಶ್, ಸುನೀಲ್ ಯಾದವ್, ರಾಮಚಂದ್ರಪ್ಪ, ಕೆಂಚಪ್ಪ, ರಂಗಪ್ಪ

ಚಂದ್ರಶೇಖರ್ ದೊಡ್ಡಘಟ್ಟ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಕ್ರೀಡಾಸಕ್ತಿ ಕೇವಲ ಶಾಲಾವಧಿಯಲ್ಲಿ ಇರದೆ ಜೀವನ ಪರ್ಯಂತ ಇರಬೇಕು : ರುದ್ರಪ್ಪ

**ಚಿಕ್ಕಮಗಳೂರು:** ಕ್ರೀಡಾಸಕ್ತಿ ಕೇವಲ ಶಾಲಾವಧಿಯಲ್ಲಿ ಮಾತ್ರ ಇರದೆ ಜೀವನ ಪರ್ಯಂತ ಇರಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ರುದ್ರಪ್ಪ ಕರೆನೀಡಿದರು.

ಅವರು ಇಂದು ಸುಭಾಷ್ ಚಂದ್ರಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ಜಿ.ಪಂ, ತಾ.ಪಂ, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಇವರುಗಳ ಸಂಯುಕ್ತಾಶ್ರಯದಲ್ಲಿ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ ದಂಟರಮಕ್ಕಿ ಇವರುಗಳ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ಕಸಬಾ-3 ವಲಯ ಮಟ್ಟದ ಹಿರಿಯ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ 2025-26 ನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಕ್ರೀಡೆಗಳಾದ ಕಬ್ಬಡ್ಡಿ, ಖೋಖೋ ಮುಂತಾದ ದೈಹಿಕ ಶ್ರಮದ ಆಟಗಳನ್ನು ಆಡುವುದರಿಂದ ಆರೋಗ್ಯಕ್ಕೆ ಸಹಕಾರಿಯಾಗುತ್ತದೆ ಎಂದ ಅವರು, ಎಲ್ಲಾ ಕ್ರೀಡಾಪಟುಗಳು ಈ ಕ್ರೀಡೆಯಲ್ಲಿ ಉತ್ತಮ ಪ್ರದರ್ಶನ ನೀಡಿ ಕ್ರೀಡಾಸಕ್ತಿಯನ್ನು ಹೆಚ್ಚಿಸಿಕೊಳ್ಳಬೇಕೆಂದು ಕರೆನೀಡಿದರು.



ಮಗು ಊಟ ಮಾಡುವುದಿಲ್ಲವೆಂದು ವೈದ್ಯರ ಬಳಿ ದೂರು ಹೇಳುವವರು ಹೆಚ್ಚಾಗಿದ್ದಾರೆ. ನಾವು ಚಿಕ್ಕವರಾಗಿದ್ದಾಗ ಊಟ ಹಾಕಿಕೊಟ್ಟರೆ ಸಾಕು ಎಂದು ಖಾಲಿಮಾಡಿ ತಟ್ಟೆ ಬಡಿಯುತ್ತಿದ್ದೆವು. ಕಾರಣ ಬೆಳಗ್ಗೆ ಎದ್ದು ಕೃಷಿ ಚಟುವಟಿಕೆಯಲ್ಲಿ ಭಾಗವಹಿಸಿ ದೈಹಿಕ ಶ್ರಮದ ಕೆಲಸ ಮಾಡುತ್ತಿದ್ದೆವು ಎಂದು ಹಿಂದಿನ ವಿದ್ಯಾರ್ಥಿ ಜೀವನದ ಮೆಲುಕು ಹಾಕಿದರು.

**ದೈಹಿಕ ಶ್ರಮದ ಕೆಲಸವನ್ನು ಮಾಡುವ ಮೂಲಕ ಹೆಚ್ಚು ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ಸಲಹೆ ನೀಡಿದ ಅವರು, ಕ್ರೀಡಾಪಟುಗಳಿಗೆ ಹಾಗೂ ಕ್ರೀಡಾ ಆಯೋಜಕರಿಗೆ ಈ ಸಂದರ್ಭದಲ್ಲಿ ಕೃತಜ್ಞತೆಗಳನ್ನು ಸಲ್ಲಿಸಿದರು.**

ತಾಲ್ಲೂಕು ದೈಹಿಕ ಶಿಕ್ಷಣಾಧಿಕಾರಿ ಮಹೇಶ್ ಮಾತನಾಡಿ, 1 ರಿಂದ 11 ವಲಯ ಮಟ್ಟದ ಕ್ರೀಡಾಪಟುಗಳಿಗೆ ಶಿಕ್ಷಕರ ಸಂಘದ ಎಲ್ಲಾ ಪದಾಧಿಕಾರಿಗಳು ಸಹಕಾರ ನೀಡಿದ್ದಾರೆ. ಬಿಇಓ ಮತ್ತು ಶಿಕ್ಷಣ ಸಂಯೋಜಕರು ತುಂಬಾ ಬೆಂಬಲ ನೀಡಿ ಬೆನ್ನು ತಟ್ಟಿದ್ದಾರೆ ಎಂದು ಶ್ಲಾಘಿಸಿದರು.

ಪ್ರತಿದಿನ ಚಟುವಟಿಕೆ ಮತ್ತು ಸಂತಸದಿಂದ ಇದ್ದಾಗ ಮಾತ್ರ ಎಲ್ಲರೂ ದೈಹಿಕವಾಗಿ ಆರೋಗ್ಯವಾಗಿರಲು ಸಾಧ್ಯ ಎಂದು ಹೇಳಿದ ಅವರು, ಈ ಕ್ರೀಡಾಕೂಟಗಳಲ್ಲಿ ಭಾಗವಹಿಸುವುದರಿಂದ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಕಾರಣವಾಗುತ್ತದೆ ಎಂದರು.

ದೈಹಿಕ ಶಿಕ್ಷಕರು ಮಳೆ, ಚಳಿ ಎನ್ನದೆ ಕ್ರೀಡಾಕೂಟ ಆಯೋಜನೆ ಮಾಡಿ ಪರಿಶ್ರಮ ವಹಿಸುತ್ತಿರುವುದು ಆರೋಗ್ಯಕರ ಬೆಳವಣಿಗೆ ಜೊತೆಗೆ ಇಲಾಖೆಗೆ ಶ್ರೇಯೋಭಿವೃದ್ಧಿ ಎಂದು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಶಿಕ್ಷಕರ ಸಂಘದ ಪದಾಧಿಕಾರಿಗಳಾದ ಅಜ್ಜಯ್ಯ, ರವಿ, ಸುಂದರೇಶ್, ಕೃಷ್ಣಮೂರ್ತಿ ಅರಸು, ಕೌಲಗಿ, ಜಾನಕಮ್ಮ, ಕಿರಣ್ ಕುಮಾರ್ ಮತ್ತಿತರರು ಭಾಗವಹಿಸಿದ್ದರು.

ಮೊದಲಿಗೆ ಶಿಕ್ಷಕ ಶಂಕರ್ ಸ್ವಾಗತಿಸಿ, ಕುಮಾರಸ್ವಾಮಿ ನಿರೂಪಿಸಿ, ಮುಖ್ಯ ಶಿಕ್ಷಕಿ ರುಕ್ಸಾನ ವಂದಿಸಿದರು.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Shakti Nagara, Davanagere, Karnataka-577004. Editor: **MALLIKARJUNAPPA H.G.**